

# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 | Issue: 257 | ₹ ಬೆಲೆ: 4 | Wednesday, 06, December,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23

# ಕಲಾಪದಲ್ಲಿ ಆಡಳಿತ-ಪ್ರತಿಪಕ್ಷ ನಾಯಕರ ಗದ್ದಲ

## ಪೊಲೀಸ್-ವಕೀಲರ ಸಂಘರ್ಷ

### ಸಿಎಂ ಮಧ್ಯಸ್ಥಿಕೆ ವಹಿಸುವಂತೆ ಬೊಮ್ಮಾಯಿ ಆಗ್ರಹ



ಬೆಂಗಳೂರು: ಚಿಕ್ಕಮಗಳೂರು ಜಿಲ್ಲೆಯಲ್ಲಿ ವಕೀಲರೊಬ್ಬರ ಮೇಲೆ ಸ್ಥಳೀಯರು ಹಲ್ಲೆ ನಡೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ವಕೀಲರು ಮತ್ತು ಪೊಲೀಸ್ ಸಿಬ್ಬಂದಿ ನಿರಂತರ ಧರಣಿ ನಡೆಸುತ್ತಿರುವ ಬಗ್ಗೆ ಕಳವಳ ವ್ಯಕ್ತಪಡಿಸಿರುವ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು, ಪ್ರಕರಣ ಸಂಬಂಧ ಮಧ್ಯಸ್ಥಿಕೆ ವಹಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಆಗ್ರಹಿಸಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್ (ಟ್ವಿಟರ್)ನಲ್ಲಿ ಟ್ವೀಟ್ ಮಾಡಿರುವ ಅವರು, ಚಿಕ್ಕಮಗಳೂರಿನಲ್ಲಿ ಪೋಲಿಸರೇ ಪ್ರತಿಭಟನೆ ಮಾಡುತ್ತಿದ್ದು, ವಕೀಲರೂ ಪೊಲೀಸರ ವಿರುದ್ದ ಪ್ರತಿಭಟನೆ ನಡೆಸುತ್ತಿದ್ದಾರೆ. ವಕೀಲರು ಮತ್ತು ಪೊಲೀಸರ ನಡುವೆ ಸಂಘರ್ಷ ಆಗುತ್ತಿರುವುದು ಒಂದು ಆತಂಕಕಾರಿ ಬೆಳವಣಿಗೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟು ಗೃಹ ಇಲಾಖೆಯ ಮೇಲೆ ಸರ್ಕಾರದ ಮತ್ತು ಅಧಿಕಾರಿಗಳ ನಿಯಂತ್ರಣ ತಪ್ಪಿದೆ ಎಂದು ಹೇಳಿದ್ದಾರೆ.

ಗೃಹ ಇಲಾಖೆಯು ಈ ರೀತಿ ಅಶಿಸ್ತು ತೋರುತ್ತಿರುವುದು ಒಂದು ಗಂಭೀರವಾದ ವಿಚಾರ, ಸರ್ಕಾರ ಈ ಕೂಡಲೇ ಇದನ್ನು ಸರಿಪಡಿಸದಿದ್ದರೆ ರಾಜ್ಯದಲ್ಲಿ ಉಂಟಾಗುವ ಅರಾಜಕತೆಗೆ ಕಾರಣವಾಗುತ್ತೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಕೂಡಲೇ ಮಧ್ಯ ಪ್ರವೇಶಿಸಿ ಕಾನೂನು ಎಲ್ಲರೂ ಪಾಲಿಸಬೇಕು ಅನ್ನುವ ವಾತಾವರಣ ಮೂಡಿಸುವ ಕೆಲಸ ಮಾಡಬೇಕು ಎಂದು ಆಗ್ರಹಿಸುತ್ತೇನೆಂದು ತಿಳಿಸಿದ್ದಾರೆ.




## ಕ್ರಿಮಿನಲ್ ಕೇಸ್ ಎದುರಿಸುತ್ತಿರುವವರ ಪಾಸ್‌ಪೋರ್ಟ್ ನವೀಕರಿಸಲು ಸಾಧ್ಯವಿಲ್ಲ: ಹೈಕೋರ್ಟ್

ಬೆಂಗಳೂರು: ಕ್ರಿಮಿನಲ್ ಕೇಸ್ ಎದುರಿಸುತ್ತಿರುವವರಿಗೆ ಹೊಸ ಪಾಸ್‌ಪೋರ್ಟ್ ನೀಡುವುದು, ನವೀಕರಣ ಅಥವಾ ಮರು ವಿತರಣೆ ಮಾಡಲು ಸಾಧ್ಯವಿಲ್ಲ ಎಂಬ ಪ್ರಾದೇಶಿಕ ಪಾಸ್‌ಪೋರ್ಟ್ ಕಚೇರಿಯ ನಿಯಮವನ್ನು ಕರ್ನಾಟಕ ಹೈಕೋರ್ಟ್ ಸೋಮವಾರ ಎತ್ತಿಹಿಡಿದಿದೆ.

ಸೆಷನ್ಸ್ ನ್ಯಾಯಾಲಯದಲ್ಲಿ ಕ್ರಿಮಿನಲ್ ಮೊಕದ್ದಮೆ ಬಾಕಿ ಇರುವ ಸಂತೋಷ ಬೀಜಾಡಿ ಶ್ರೀನಿವಾಸ್ ಅವರ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರು, ವ್ಯಕ್ತಿಯ ಕ್ರಿಮಿನಿನಲ್ ಮೊಕದ್ದಮೆಯನ್ನು ಪರಿಗಣಿಸದೆ ಆತನಿಗೆ ಪಾಸ್‌ಪೋರ್ಟ್ ವಿತರಣೆ ಮಾಡಬಹುದು ಅಥವಾ ನವೀಕರಣ/ಮರು ನೀಡುವಂತೆ ಪಾಸ್‌ಪೋರ್ಟ್ ಕಾಯ್ದೆಯಲ್ಲಿ ಎಲ್ಲಿಯೂ ಹೇಳಿಲ್ಲ ಎಂದರು.

ಸೆಕ್ಷನ್ 6(2)(ಎಫ್) ಅಡಿಯಲ್ಲಿ ಪಾಸ್ಪೋರ್ಟ್ ವಿತರಣೆಗೆ ನಿಯಮಗಳನ್ನು ರೂಪಿಸಲಾಗಿದೆ. ಈ ನಿಯಮಗಳ ಪ್ರಕಾರ ಕ್ರಿಮಿನಿಲ್ ಮೊಕದ್ದಮೆ ಎದುರಿಸುತ್ತಿರುವವರಿಗೆ ಹೊಸ ಪಾಸ್‌ಪೋರ್ಟ್, ನವೀಕರಣ ಅಥವಾ ಮರು ವಿತರಣೆ ನೀಡುವುದನ್ನು ನಿಷೇಧಿಸಲಾಗಿದೆ. ಈ ನಿಯಮಗಳನ್ನು ಬದಲಾಯಿಸಲು ಸಾಧ್ಯವಿಲ್ಲ ಎಂದು ಹೈಕೋರ್ಟ್ ಹೇಳಿದೆ.

## ಪರಿಸ್ಥಿತಿ ತಿಳಿಗೊಳಿಸಿದ ಸಭಾಪತಿ ಹೊರಟ್ಟಿ



ಬೆಳಗಾವಿ: ಕೋಲಾರದಲ್ಲಿ ಅಕ್ರಮವಾಗಿ ಕಲ್ಲು ಗಣಿಗಾರಿಕೆ ನಡೆಸುತ್ತಿರುವವರ ವಿರುದ್ಧ ಕಾನೂನು ಕ್ರಮದ ವಿಚಾರ ವಿಧಾನ ಪರಿಷತ್‌ನಲ್ಲಿ ಆಡಳಿತಾರೂಢ ಕಾಂಗ್ರೆಸ್ ಮತ್ತು ಪ್ರತಿಪಕ್ಷಗಳಾದ ಬಿಜೆಪಿ, ಜೆಡಿಎಸ್ ಸದಸ್ಯರ ನಡುವೆ ಮಾತಿನ ಚಕಮಕಿ ಉಂಟುಮಾಡಿತು.

ಅಂತಿಮವಾಗಿ, ಪ್ರಶ್ನೆಯನ್ನು ತಡೆಹಿಡಿಯುವ ಮೂಲಕ ಸಭಾಪತಿ ಬಸವರಾಜ ಹೊರಟ್ಟಿ ಪರಿಸ್ಥಿತಿ ನಿಯಂತ್ರಿಸಿದರು. ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿ ಸದಸ್ಯ ವೈ.ಎ.ನಾರಾಯಣಸ್ವಾಮಿ ಅಕ್ರಮ ಕಲ್ಲು ಗಣಿಗಾರಿಕೆ ಕುರಿತು ಪ್ರಶ್ನೆ ಕೇಳಿದರು. ಸರ್ಕಾರದ ಉತ್ತರಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಅವರು, ಕೋಲಾರ ಜಿಲ್ಲೆಯಲ್ಲಿ ಅನಧಿಕೃತ ಗಣಿಗಾರಿಕೆ, ನಿಯಮಬಾಹಿರ ಎಂ ಸ್ಯಾಂಡ್ ಉತ್ಪಾದನೆ ಆಗುತ್ತಿದೆ. ಇದಕ್ಕೆ ಸರ್ಕಾರ ಸರಿಯಾದ ಉತ್ತರ ಕೊಟ್ಟಿಲ್ಲ. ಅವರು ಹೇಗೆ ಬೇಕೋ ಹಾಗೆ ಉತ್ತರ ಕೊಟ್ಟರೆ ನಾವು ಕೇಳಬೇಕಾ? 40 ಕ್ರಶರ್ ಕೆಲಸ ಮಾಡ್ತಿದೆ ಎಂದು ಉತ್ತರ ಇದೆ. ಇದರಲ್ಲಿ ಅಧಿಕೃತ ಎಷ್ಟು, ಅನಧಿಕೃತ ಎಷ್ಟು? ಅಕ್ರಮ ಗಣಿಗಾರಿಕೆಗೆ ದಂಡ ಹಾಕಿದ್ದೀರಾ ಎಂದು ಪ್ರಶ್ನಿಸಿದರು.

ಗಣಿ ಸಚಿವರ ಪರವಾಗಿ ಉತ್ತರಿಸಿದ ಸಚಿವ ಚಲುವರಾಯಸ್ವಾಮಿ, ಅಕ್ರಮ ಗಣಿಗಾರಿಕೆ ಅಥವಾ ಅಕ್ರಮ ಸಾಗಾಣಿಕೆಗೆ ದಂಡವಾ ಎನ್ನುವ ಹಿಂದೆ ವೈಯಕ್ತಿಕ ಹಿತಾಸಕ್ತಿ ಇದೆ ಎಂದರು. ಚಲುವರಾಯಸ್ವಾಮಿ ಹೇಳಿಕೆಗೆ ನಾರಾಯಣಸ್ವಾಮಿ ಆಕ್ಷೇಪ ವ್ಯಕ್ತಪಡಿಸಿದರು. ಬಿಜೆಪಿ, ಜೆಡಿಎಸ್ ಸದಸ್ಯರು ಕಿಡಿಕಾರಿದರು. ಇದರಿಂದ ಎಚ್ಚೆತ್ತ ಸಭಾಪತಿ ಹೊರಟ್ಟಿ ವೈಯಕ್ತಿಕ ಹಿತಾಸಕ್ತಿ ಪದವನ್ನು ಕಡತದಿಂದ ತೆಗೆದುಹಾಕಲು ಸೂಚಿಸಿದರು. ನಂತರ ಮಾತು ಮುಂದುವರೆಸಿದ ಚಲುವರಾಯಸ್ವಾಮಿ, ನಿಖರವಾಗಿ ಇಂತಹದ್ದರ ಬಗ್ಗೆ ಉತ್ತರ ಬೇಕು ಎಂದರೆ ಕೊಡುತ್ತೇವೆ ಎಂದರು.

ಸಚಿವರ ಈ ರೀತಿಯ ಹೇಳಿಕೆಗೆ ಬಿಜೆಪಿ ಸದಸ್ಯರಿಂದ ಆಕ್ಷೇಪ ವ್ಯಕ್ತವಾಯಿತು. ಪ್ರಶ್ನೆ ಕೇಳುವ ನಮ್ಮ ಹಕ್ಕಿಗೆ ಚ್ಯುತಿಯಾಗುತ್ತಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು. ಜೆಡಿಎಸ್ನ ಬೋಜೇಗೌಡ, ಶರವಣ ಏರುದನಿಯಲ್ಲಿ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದರು. ನಂತರ ಪ್ರಶ್ನೆ ತಡೆಹಿಡಿದು ಗದ್ದಲಕ್ಕೆ ತೆರೆ ಎಳೆಯಲಾಯಿತು.

ರಾಜ್ಯ ಯೋಜನೆಯಡಿ 115 ಕೋಟಿ ರೂ ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗಿದೆ. 2007ರಲ್ಲಿ ಕಾಮಗಾರಿ ಆರಂಭಿಸಲಾಗಿದೆ. 262 ಕಿಲೋಮೀಟರ್ ಒಳಚರಂಡಿ ಮಾಡಬೇಕಿದೆ. ಇದರಲ್ಲಿ254 ಕಿಲೋಮೀಟರ್ ಮುಗಿಸಿದ್ದೇವೆ. 8 ಕಿಲೋಮೀಟರ್ ಕಾಮಗಾರಿ ಮಾತ್ರ ಉಳಿಕೆಯಾಗಿದೆ. 200 ಆಳುಗುಂಡಿ ಕೆಲಸ ಬಾಕಿ ಇದೆ. ಈ ಕಾಮಗಾರಿ ಮಾಡುತ್ತಿದ್ದೇವೆ. 2024ರ ಮಾರ್ಚ್ ಒಳಗಡೆ ಮುಗಿಸಲಿದ್ದೇವೆ ಎಂದರು. ಒಳಚರಂಡಿ ಹೆಚ್ಚುವರಿಯಾಗಿ ಹಣ ಬೇಕಾಗಿದೆ. 2017ರಲ್ಲಿ 7 ಕೋಟಿ ಹೆಚ್ಚುವರಿ ಹಣ ಪಡೆಯಲು ಅನುಮೋದನೆ ಪಡೆಯಲಾಗಿದೆ. ಎನ್ಜಿಟಿಯದ್ದು 15 ಕೋಟಿ ಯೋಜನೆ, ಅದನ್ನೂ ಮುಗಿಸಿ ಪಾಲಿಕೆಗೆ ಹಸ್ತಾಂತರ ಮಾಡಲಾಗಿದೆ.

ಶಿವಮೊಗ್ಗದಲ್ಲಿ 35 ವಾರ್ಡ್ 89 ಸಾವಿರ ಮನೆಗಳಿವೆ. 45 ಸಾವಿರ ಮನೆ ಯುಜಿಡಿ ಅಡಿ ಬರಲಿದೆ. 40 ಸಾವಿರ ಮನೆಗಳಿಗೆ ಯುಜಿಡಿ ಮಾಡಲು 600 ಕೋಟಿ ಬೇಕಾಗಲಿದೆ. ಆರ್ಥಿಕ ಇಲಾಖೆಯಿಂದ ಅನುಮೋದನೆ ಸಿಕ್ಕ ಕೂಡಲೇ ಇಡೀ ಶಿವಮೊಗ್ಗ ನಗರಕ್ಕೆ ಯುಜಿಡಿ ಮಾಡಲು ಕೆಲಸ ಮಾಡಲು ಅನುವು ಮಾಡಿಕೊಡಲಾಗುತ್ತದೆ ಎಂದು ಹೇಳಿದರು.



## ವಿಧಾನ ಪರಿಷತ್‌ನಲ್ಲಿ ಸಂತಾಪ ನಿರ್ಣಯ

ಬೆಳಗಾವಿ ಸುವರ್ಣ ಸೌಧ: ವಿಧಾನ ಮಂಡಲದ ಚಳಿಗಾಲದ ಅಧಿವೇಶನದ 2 ನೇ ದಿನವಾದ ವಿಧಾನಪರಿಷತ್ತಿನಲ್ಲಿ, ಇತ್ತೀಚೆಗೆ ಜಮ್ಮು ಕಾಶ್ಮೀರದ ರಜೌರಿ ಜಿಲ್ಲೆಯಲ್ಲಿ ಸೇನಾಪಡೆ ಮತ್ತು ಉಗ್ರರ ನಡುವೆ ನಡೆದ ಗುಂಡಿನ ಚಕಮಕಿಯಲ್ಲಿ ಹುತಾತ್ಮರಾದ ಕ್ಯಾಪ್ಟನ್ ಎಂ.ವಿ ಪ್ರಾಂಜಲ್ , ಕ್ಯಾಪ್ಟನ್ ಶುಬಂ ಗುಪ್ತಾ, ಹವಾಲ್ದರ್ ಅಬ್ದುಲ್ ಮಜಿಕ್, ಲಾನ್ಸ್ ನಾಯ್ಕ್ ಸಂಜಯ್ ಬಿಸ್ಟ್ ಮತ್ತು ಸಚಿನ್ ಲಾರ ಅವರುಗಳಿಗೆ ಮತ್ತು ಐತಿಹಾಸಿಕ ಮೈಸೂರು ದಸರಾದ ಕೇಂದ್ರ ಬಿಂದುವಾಗಿದ್ದ ಗಜರಾಜ ವೀರ ಅರ್ಜುನ ನಿಧನಕ್ಕೆ ಸಂತಾಪ ಸೂಚಿಸಲಾಯಿತು.

ಸಭಾ ನಾಯಕ ಸಚಿವ ಬೋಸರಾಜು ಹಾಗೂ ಶಾಸಕ ಕೋಟ ಶ್ರೀನಿವಾಸ ಪೂಜಾರಿ ಸಂತಾಪ ವ್ಯಕ್ತಪಡಿಸಿದರು. ನಂತರ ಮೃತರ ಗೌರವಾರ್ಥ ಒಂದು ನಿಮಿಷ ಮೌನ ಆಚರಿಸಲಾಯಿತು.

## ಅಲ್ಪಸಂಖ್ಯಾತರನ್ನೂ ಸೇರಿದಂತೆ ಎಲ್ಲರಿಗೂ ರಕ್ಷಣೆ ನೀಡುವುದಾಗಿ ಹೇಳಿದ್ದೇನೆ: ಸಿಎಂ



ಬೆಳಗಾವಿ: ಅಲ್ಪಸಂಖ್ಯಾತರನ್ನೂ ಸೇರಿದಂತೆ ಎಲ್ಲರಿಗೂ ರಕ್ಷಣೆ ನೀಡುವುದಾಗಿ ಹೇಳಿದ್ದೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಬೆಳಗಾವಿಯ ಸುವರ್ಣ ಸೌಧದ ಬಳಿ ಅವರು ಮಾತನಾಡಿದರು. ಅಲ್ಪಸಂಖ್ಯಾತರಿಗೆ 4 ರಿಂದ 5 ಸಾವಿರ ಕೋಟಿ ರೂ.ಗಳನ್ನು ಬಜೆಟ್ನಲ್ಲಿ ಮೀಸಲಿಡುವುದಾಗಿ ಸಿಎಂ ನೀಡಿದ್ದ ಹೇಳಿಕೆಯನ್ನು ಬಿಜೆಪಿ ಓಲೈಕೆ ರಾಜಕಾರಣ ಎಂದು ಕರೆದಿರುವ ಬಗ್ಗೆ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ, ಅದರಲ್ಲಿ ತಪ್ಪೇನಿದೆ ಎಂದರು. ಅಲ್ಪಸಂಖ್ಯಾತರನ್ನೂ ಸೇರಿದಂತೆ ಎಲ್ಲರಿಗೂ ರಕ್ಷಣೆ ನೀಡುವುದಾಗಿ ಹೇಳಿದ್ದೇನೆ ಎಂದರು. ಮೀಸಲು ನೀಡಿದ್ದರಲ್ಲಿ ಏನು ತಪ್ಪಿದೆ? ಮುಸ್ಲಿಮರೂ ಸೇರಿ ಎಲ್ಲರಿಗೂ ರಕ್ಷಣೆ ಕೊಡುತ್ತೇವೆ ಎಂದಿದ್ದೇನೆ. ಅದನ್ನು ಬಿಟ್ಟು ಬರೆದರೆ ಏನು ಮಾಡುವುದು?. ಅದು ತುಷ್ಟೀಕರಣನಾ?. ಅದಕ್ಕೆ ಉಪ್ಪು ಖಾರ ಹಾಕಿ ಹೇಳುತ್ತಿದ್ದಾರೆ ಅಷ್ಟೇ. ಮುಸ್ಲಿಮರೂ ಸೇರಿ ಎಲ್ಲರಿಗೂ ರಕ್ಷಣೆ ಕೊಡುತ್ತೇನೆ ಎಂದು ಹೇಳಿದ್ದೇನೆ ಅಷ್ಟೇ ಎಂದು ಸಿದ್ದರಾಮಯ್ಯ ಸ್ಪಷ್ಟನೆ ನೀಡಿದರು.

## ನ್ಯುಮೋನಿಯಾ ಹೆಚ್ಚಳದ ಬಗ್ಗೆ ಭಯ ಪಡುವ ಅವಶ್ಯಕತೆ ಇಲ್ಲ: ಆರೋಗ್ಯ ಸಚಿವ ದಿನೇಶ್ ಗುಂಡೂರಾವ್



ಬೆಳಗಾವಿ: ಚೈನಾ ವೈರಸ್ ಮತ್ತು ನ್ಯುಮೋನಿಯಾ ಹೆಚ್ಚಳದ ಬಗ್ಗೆ ಭಯ ಪಡುವ ಅವಶ್ಯಕತೆ ಇಲ್ಲ ಎಂದು ಆರೋಗ್ಯ ಸಚಿವ ದಿನೇಶ್ಗುಂಡೂರಾವ್ ಸ್ಪಷ್ಟಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾವು ಆರೋಗ್ಯದ ಬಗ್ಗೆ ಮುನ್ನೆಚ್ಚರಿಕೆ ವಹಿಸುವುದು ಅಗತ್ಯ. ಆದರೆ ಚೈನಾದಲ್ಲಿ ಕಂಡುಬಂದಿರುವ ನ್ಯುಮೋನಿಯಾದ ಬಗ್ಗೆ ಆತಂಕ ಪಡುವುದು ಅನಗತ್ಯ ಎಂದರು.

ಈಗಾಗಲೇ ಈ ಸಂಬಂಧ ಆರೋಗ್ಯ ಇಲಾಖೆಯ ಹಿರಿಯ ಅಧಿಕಾರಿಗಳ ಸಭೆ ನಡೆಸಿ ಅಗತ್ಯ ಮುನ್ನೆಚ್ಚರಿಕೆ ಕ್ರಮ ವಹಿಸಲು ಸೂಚಿಸಲಾಗಿದೆ.

ಆಸ್ಪತ್ರೆಗಳಲ್ಲಿ ತೀವ್ರ ನಿಗಾಘಟಕ, ವೆಂಟಿಲೇಟರ್, ಆಕ್ಸಿಜನ್, ಮಾಸ್ಕ್, ಪಿಪಿ ಇ ಕಿಟ್ಗಳನ್ನು ಸದಾ ಸನ್ನದ್ಧ ಸ್ಥಿತಿಯಲ್ಲಿ ಇಟ್ಟುಕೊಳ್ಳುವಂತೆ ನಿರ್ದೇಶನ ನೀಡಲಾಗಿದೆ. ಸೋಂಕಿನ ಹಾವಳಿ ತೀವ್ರಗೊಂಡಾಗ ಅದನ್ನು ನಿಯಂತ್ರಿಸಲು ಬೇಕಾದ ಎಲ್ಲಾ ಸಿದ್ಧತೆ ಮಾಡಿಕೊಳ್ಳುವಂತೆ ಸೂಚಿಸಲಾಗಿದೆ ಎಂದು ಹೇಳಿದರು.

ವಿಶ್ವ ಆರೋಗ್ಯ ಸಂಸ್ಥೆ ಹಾಗೂ ಕೇಂದ್ರ ಸರ್ಕಾರ ಕೂಡ ಚೀನಾ ನ್ಯುಮೋನಿಯಾ ವೈರಸ್ ಬಗ್ಗೆ ಗಾಬರಿ ಪಡುವ ಅವಶ್ಯಕತೆ ಇಲ್ಲ ಎಂದು ಹೇಳಿವೆ. ಹೀಗಾಗಿ ಜನರು ಅನಗತ್ಯವಾಗಿ ಗೊಂದಲಕ್ಕೆ ಒಳಗಾಗಬಾರದು. ಮುನ್ನೆಚ್ಚರಿಕೆ ಕ್ರಮಗಳನ್ನು ವಹಿಸಬೇಕು ಎಂದು ತಿಳಿಸಿದರು.

## ವಿಧಾನಸಭೆಯಲ್ಲಿ MBBS ವಿದ್ಯಾರ್ಥಿಗಳು 'ಕಡ್ಡಾಯ ಗ್ರಾಮೀಣ ಸೇವೆ' ತಿದ್ದುಪಡಿ ವಿಧೇಯಕ ಮಂಡನೆ

ಬೆಳಗಾವಿ: ವಿಧಾನಸಭೆಯಲ್ಲಿ ವೈದ್ಯಕೀಯ ವ್ಯಾಸಂಗ ಮಾಡುವಂತ ವಿದ್ಯಾರ್ಥಿಗಳು ಕಡ್ಡಾಯ ಗ್ರಾಮೀಣ ಸೇವೆ ಮಾಡುವುದರಿಂದ ವಿನಾಯ್ತಿ ನೀಡೋ ಸಂಬಂಧ, ತಿದ್ದುಪಡಿ ವಿಧೇಯಕವನ್ನು ಮಂಡಿಸಲಾಯಿತು.

ಬೆಳಗಾವಿಯ ಸುವರ್ಣ ಸೌಧದಲ್ಲಿ ನಡೆಯುತ್ತಿರುವಂತ ವಿಧಾನಸಭೆಯಲ್ಲಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು 2023ನೇ ಸಾಲಿನಲ್ಲಿ ವೈದ್ಯಕೀಯ ಕೋರ್ಸ್ ಮುಗುಸಿದಂತವರು ಕಡ್ಡಾಯ ಗ್ರಾಮೀಣ ಸೇವೆಯಿಂದ ವಿನಾಯ್ತಿ ನೀಡುವಂತ ತಿದ್ದುಪಡಿ ಕಾಯ್ದೆಯನ್ನು ಮಂಡಿಸಿದರು. 2023ನೇ ಸಾಲಿನ ಈ ವರ್ಷದಿಂದ ತಿದ್ದುಪಡಿ ವಿಧೇಯಕ ಎರಡು ಸದನಲ್ಲಿ ಅಂಗೀಕಾರಗೊಂಡರೇ, ವೈದ್ಯಕೀಯ ವ್ಯಾಸಂಗ ಮುಗಿಸಿದಂತ ವಿದ್ಯಾರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಸೇವೆ ಮಾಡೋದರಿಂದ ಬಿಲ್ ವಿನಾಯ್ತಿ ನೀಡಲಿದೆ.

## ಯತ್ನಾಳ ನಡೆಯಿಂದ ಸದನದಲ್ಲಿ ಆರ್. ಅಶೋಕ್ ಗೆ ಮುಜುಗರ



ಬೆಳಗಾವಿ: ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಗೆ ಶುಭಕೋರಿ ಮಾತನಾಡಲು ಬಸನಗೌಡ ಪಾಟೀಲ್ ಯತ್ನಾಳ್ ನಿರಾಕರಿಸಿದ ಘಟನೆ ನಡೆದಿದೆ.

ವಿಧಾನಸಭೆ ಕಲಾಪದಲ್ಲಿ ವಿಪಕ್ಷ ನಾಯಕನಾಗಿ ಆಯ್ಕೆಯಾದ ಹಿನ್ನೆಲೆ ಅಭಿನಂದನೆ ಸಲ್ಲಿಸುವ ವೇಳೆ ಯತ್ನಾಳ್ ಮಾತನಾಡಲು ನಿರಾಕರಿಸಿದರು. ಶುಭ ಕೋರಿ ಮಾತನಾಡುತ್ತೀರಾ ಎಂದು ಯತ್ನಾಳ್ ಗೆ ಸ್ಪೀಕರ್ ಖಾದರ್ ಕೇಳುತ್ತಾರೆ.

ಈ ವೇಳೆ ಯತ್ನಾಳ್ ನಾನು ಮಾತನಾಡಲ್ಲ ಎಂದು ಕೈಸನ್ನೆಯಿಂದ ನಿರಾಕರಣೆ ಮಾಡಿದರು. ಯತ್ನಾಳ್ ಮಾತನಾಡಲು ನಿರಾಕರಣೆ ಮಾಡಿದ್ದರಿಂದ ಆರ್. ಅಶೋಕ್ ಗೆ ಸದನದಲ್ಲಿ ಮುಜುಗರ ಉಂಟಾಯಿತು.

## 100 ಕೋಟಿ ರೂ. ವೆಚ್ಚದಲ್ಲಿ ಹೊಸ ವಾಹನಗಳ ಖರೀದಿ: ಗೃಹ ಸಚಿವ ಜಿ. ಪರಮೇಶ್ವರ್



ಬೆಳಗಾವಿ ಸುವರ್ಣಸೌಧ: ಪೊಲೀಸ್ ಇಲಾಖೆಯಲ್ಲಿ 1700ಕ್ಕೂ ಹೆಚ್ಚು ವಾಹನಗಳನ್ನು (ನಿರುಪಯುಕ್ತ) ಗೊಳಿಸಲು ತೀರ್ಮಾನಿಸಲಾಗಿದ್ದು, ಹಂತಹಂತವಾಗಿ ಅವುಗಳನ್ನು ನಿರುಪಯುಕ್ತಗೊಳಿಸಲಾಗುವುದು. 100ಕೋಟಿ ರೂ. ವೆಚ್ಚದಲ್ಲಿ ಹೊಸದಾಗಿ ವಾಹನಗಳನ್ನು ಖರೀದಿಸಲು ಉದ್ದೇಶಿಸಲಾಗಿದೆ ಎಂದು ಗೃಹ ಸಚಿವ ಜಿ. ಪರಮೇಶ್ವರ ಅವರು ತಿಳಿಸಿದರು.

ವಿಧಾನಸಭೆಯಲ್ಲಿ ಸದಸ್ಯ ಶ್ರೀನಿವಾಸ ಜಿ.ಎಚ್ ಅವರ ಚುಕ್ಕೆಗುರುತಿನ ಪ್ರಶ್ನೆಗೆ ಉತ್ತರಿಸಿದ ಅವರು ಅಗ್ನಿಶಾಮಕ ಠಾಣೆ ಮತ್ತು ತುರ್ತು ಸೇವಾ ಇಲಾಖೆಯಲ್ಲಿ 15 ವರ್ಷಗಳ ಹಳೆಯ ವಾಹನಗಳನ್ನು ಅನುಪಯುಕ್ತಗೊಳಿಸುವ ಹಾಗೂ ಬದಲಿಗೆ ಹೊಸ ವಾಹನಗಳನ್ನು ಖರೀದಿಸಲು ಅನುಮತಿ ನೀಡುವ ಸಂಬಂಧ ಸರಕಾರದ ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಸಭೆ ಜರುಗಿದ್ದು, ಸದರಿ ಸಭೆಯಲ್ಲಿ ಅವಧಿ ಮೀರಿದ ಮತ್ತು ಸುಸ್ಥಿತಿಯಲ್ಲಿರುವ ವಾಹನಗಳನ್ನು ನಿರುಪಯುಕ್ತಗೊಳಿಸಿದಲ್ಲಿ ಇಲಾಖೆಯ ಮೂಲ ಚಟುವಟಿಕೆಗಳಿಗೆ ತೊಂದರೆಯಾಗುವುದರಿಂದ ವಾಹನಗಳ ನೋಂದಣಿ ಪತ್ರವನ್ನು ನವೀಕರಿಸಲು ಕೇಂದ್ರ ಸರಕಾರದ ಅನುಮತಿ ಪಡೆಯಲು ನಿರ್ಣಯ ಕೈಗೊಳ್ಳಲಾಗಿದ್ದು,ಅನುಮತಿ ಕೋರಿ ಕೇಂದ್ರ ಸರಕಾರಕ್ಕೆ ಪತ್ರ ಬರೆಯಲಾಗಿದೆ.ಅನುಮತಿ ನಿರೀಕ್ಷಣೆಯಲ್ಲಿದ್ದೇವೆ ಎಂದರು.

ಚಿಕ್ಕಮಗಳೂರು ಜಿಲ್ಲೆಯ ಅಜ್ಜಂಪುರ ತಾಲೂಕಿನಲ್ಲಿ ಅಗ್ನಿಶಾಮಕ ಠಾಣಾ ಕಟ್ಟಡ ನಿರ್ಮಾಣಕ್ಕಾಗಿ ರೂ.3ಕೋಟಿ ಅನುದಾನ ನಿಗದಿಪಡಿಸಿದ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಎಂದರು.

ಮಸ್ಕಿಯಲ್ಲಿ ಅಗ್ನಿಶಾಮಕ ಠಾಣೆ: ಅಗ್ನಿಕರೆಗಳ ಆಧರಿಸಿ ತೀರ್ಮಾನ: ಪ್ರಸ್ತುತ ಮಸ್ಕಿ ತಾಲೂಕಿನಲ್ಲಿ ನೂತನ ಅಗ್ನಿಶಾಮಕ ಠಾಣೆಯ ಸ್ಥಾಪನೆಗೆ ಸಹಮತಿ ನೀಡುವ ಅವಶ್ಯಕತೆ ಇರುವುದಿಲ್ಲ. ಮುಂದಿನ ದಿನಗಳಲ್ಲಿ ಸಂಭವಿಸುವ ಅಗ್ನಿ ಕರೆಗಳನ್ನು ಆಧರಿಸಿ ನೂತನ ಅಗ್ನಿಶಾಮಕ ಠಾಣೆಯ ಸೃಜನೆ ಬಗ್ಗೆ ಪರಿಶೀಲಿಸಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಹೇಳಿದರು.

ವಿಧಾನಸಭೆಯಲ್ಲಿ ಮಸ್ಕಿ ಶಾಸಕ ಬಸವನಗೌಡ ತುರುವಿಹಾಳ್(ಮಸ್ಕಿ) ಅವರ ಚುಕ್ಕೆಗುರುತಿನ ಪ್ರಶ್ನೆಗೆ ಅವರು ಉತ್ತರಿಸಿದರು.

ಮಸ್ಕಿ ತಾಲೂಕಿನಲ್ಲಿ ನೂತನವಾಗಿ ಅಗ್ನಿಶಾಮಕ ಠಾಣೆ ಸ್ಥಾಪಿಸುವುದಕ್ಕೆ ಸಂಬಂಧಿಸಿದ ಪ್ರಸ್ತಾವನೆಗೆ ಸಂಬಂಧಿಸಿದಂತೆ 2017ರಿಂದ 2022ರವರೆಗೆ ಒಟ್ಟಾರೆ 05 ವರ್ಷದ ಅವಧಿಯಲ್ಲಿ 243 ಅಗ್ನಿ ಕರೆಗಳು ಹಾಗೂ 13 ರಕ್ಷಣಾ ಕರೆಗಳಿದ್ದು, ಮಸ್ಕಿ ತಾಲೂಕಿನಲ್ಲಿ ಅಗ್ನಿ ಅವಘಡಗಳು ಸಂಭವಿಸಿದ್ದಲ್ಲಿ ಹತ್ತಿರವಿರುವ ಲಿಂಗಸೂಗುರು 30 ಕಿ.ಮೀ ಮತ್ತು ಸಿಂಧನೂರು 30 ಕಿ.ಮೀ ಅಂತರದಲ್ಲಿರುವ ಅಗ್ನಿಶಾಮಕ ಠಾಣೆಯಿಂದ ಬೆಂಕಿ ನಂದಿಸಲಾಗುತ್ತಿದೆ ಎಂದರು.

## ಬರ ನಿರ್ವಹಣೆ ಕಾರ್ಯಕ್ಕೆ 31 ಜಿಲ್ಲೆಗಳಿಗೆ 324 ಕೋಟಿ ರೂ. ಬಿಡುಗಡೆ: ಕೃಷಿ ಸಚಿವರು



ಬೆಳಗಾವಿ ಸುವರ್ಣ ಸೌಧ: ಮುಂದಿನ ದಿನಗಳಲ್ಲಿ ಕುಡಿಯುವ ನೀರಿ ಪೂರೈಕೆ, ಗೋಶಾಲೆ, ಮೇವಿನ ಬ್ಯಾಂಕ್ ನಿರ್ವಹಣೆ ಇತರೆ ತುರ್ತು ಬರ ನಿರ್ವಹಣೆ ಕಾರ್ಯಗಳನ್ನು ಕೈಗೆತ್ತಿಕೊಳ್ಳಲು 31 ಜಿಲ್ಲೆಗಳಿಗೆ 324 ಕೋಟಿ ರೂ.ಗಳನ್ನು ಕಳೆದ ಅಕ್ಟೋಬರ್ ಮಾಹೆಯಲ್ಲಿ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದೆ ಎಂದು ಎಂದು ಕೃಷಿ ಸಚಿವರಾದ ಚೆಲುವ ನಾರಾಯಣಸ್ವಾಮಿ ಅವರು ಹೇಳಿದರು.

2ನೇ ಪುಟಕ್ಕೆ

## ಶೂನ್ಯವೇಳೆಯ ಚರ್ಚೆ

ಬೆಳಗಾವಿ ಸುವರ್ಣ ಸೌಧ: ಶೂನ್ಯ ವೇಳೆಯಲ್ಲಿ, ಶಾಸಕ ಮರಿತಿಬ್ಬೇಗೌಡ ಚುನಾವಣಾ ಕಾರ್ಯಗಳಿಗೆ ಶಿಕ್ಷಕರನ್ನು ಬಳಸಿಕೊಳ್ಳುತ್ತಿರುವುದರಿಂದ ಮಕ್ಕಳ ಶೈಕ್ಷಣಿಕ ಚಟುವಟಿಕೆ ಮೇಲೆ ಪ್ರತಿಕೂಲ ಪರಿಣಮ ಬೀರುತ್ತಿರುವ ಬಗ್ಗೆ , ಯು.ಬಿ. ವೆಂಕಟೇಶ್ ಅವರು ರಾಜ್ಯದಲ್ಲಿ ನಡೆಯುತ್ತಿರುವ ಮಕ್ಕಳ ಮಾರಾಟ ಮತ್ತು ಕಳ್ಳತನ ಬಗ್ಗೆ, ಗೋವಿಂದರಾಜು ಅವರು ಕೋಲಾರ ಜಿಲ್ಲೆಯಲ್ಲಿ ನಡೆಯುತ್ರಿರುವ ಅಕ್ರಮ ಮದ್ಯ ಮಾರಾಟ ಪ್ರಕರಣಗಳ ಬಗ್ಗೆ, ನಾಗರಾಜ್ ಅವರು ಶಾಲಾ ಆವರಣದಲ್ಲಿ ಬಾಂಬ್ ಇಡಲಾಗಿದೆ ಎಂದು ಭೀತಿ ಮೂಡಿಸಿರುವ ಬಗ್ಗೆ, ಬಿ.ಎಸ್ ಅರುಣ್ ಅವರು, ಶಿವಮೊಗ್ಗ ಜಿಲ್ಲೆಯ ಹೊಸನಗರ ತಾಲೂಕಿನ ನಗರ ಹೋಬಳಿಯಲ್ಲಿರುವ ಬಿದನೂರಿನ ಕೊಪ್ಪಲಮಠದಲ್ಲಿರುವ ಕೆಳದಿ ಅರಸರ ಐತಿಹಾಸಿಕ ಸ್ಮಾರಕಗಳ ಒತ್ತುವರಿ ತೆರವು ಮತ್ತು ಅವುಗಳನ್ನು ಸಂರಕ್ಷಿಸುವ ಬಗ್ಗೆ, ಹನುಮಂತ ನಿರಾಣಿ ಅವರು ಬಾಗಲಕೋಟೆಯ ತೇರದಾಳ ಗ್ರಾಮದ ಮಾಲಿಂಗಪುರ ಪಟ್ಟಣವನ್ನು ತಾಲೂಕು ಕೇಂದ್ರವನ್ನಾಗಿ ಮಾಡುವ ಬಗ್ಗೆ , ತಿಪ್ಪೇಸ್ವಾಮಿ ಅವರು ಡಯಾಲಿಸಿಸ್ ಸಿಬ್ಬಂದಿಗಳ ಪ್ರತಿಭಟನೆ ಬಗ್ಗೆ, ಬಿಜೇಶ್ ಕುಶಾಲಪ್ಪ ಅವರು ಕೊಡಗು ಜಿಲ್ಲೆಯಲ್ಲಿ ಪ್ರವಾಸೋದ್ಯಮವನ್ನು ಹೆಚ್ಚಿನ ರೀತಿಯಲ್ಲಿ ಅಭಿವೃದ್ಧಿ ಪಡಿಸುವ ಬಗ್ಗೆ ಮಾತನಾಡಿದರು.

## ಬೆಳಗಾವಿ ಸದನದಲ್ಲಿ ಬಾರ್‌ಲೈಸನ್ಸ್ ಕುರಿತು ಕಾವೇರಿದ ಚರ್ಚೆ



ಬೆಳಗಾವಿ ಸುವರ್ಣಸೌಧ: ಸದದಲ್ಲಿ ಬಾರ್‌ಲೈಸೆನ್ಸ್ ನೀಡಿಕೆ ಸಂಬಂಧಿಸಿದಂತೆ ಕಾವೇರಿದ ಚರ್ಚೆ ಮಂಗಳವಾರ ವಿಧಾನನಸಭೆಯಲ್ಲಿ ನಡೆಯಿತು. ಸಿಎಲ್-7 ಸನ್ನದುಗಳ ನೀಡಿಕೆಯಲ್ಲಿ ನಿಯಮಗಳನ್ನು ಸರಿಯಾಗಿ ಪಾಲಿಸುತ್ತಿಲ್ಲ;ಮನಸ್ಸಿಗೆ ಬಂದಂತೆ ನೀಡಲಾಗುತ್ತಿದೆ ಎಂಬ ಸದಸ್ಯರ ಆರೋಪಗಳಿಗೆ ಉತ್ತರಿಸಿದ ಅಬಕಾರಿ ಸಚಿವ ಆರ್ಬಿ.ತಿಮ್ಮಾಪುರ ಅವರು ನಿಯಮಗಳ ಅನುಸಾರವೇ ಸಿಎಲ್-7 ಬಾರ್ ಲೈಸೆನ್ಸ್‌ಗಳ ನೀಡಲಾಗಿದೆ. ಸಿಎಲ್-7 ಸನ್ನದುಗಳ ನೀಡಿಕೆಯ ಈಗಿರುವ ನಿಯಮಗಳಲ್ಲಿ ಲಾಡ್ಜಿಂಗ್ ವಿನ್ಯಾಸ ಎಷ್ಟಿರಬೇಕು ಮತ್ತು ಪಾರ್ಕಿಂಗ್ ಹೇಗಿರಬೇಕು ಎಂಬುದರ ಬಗ್ಗೆ ಯಾವುದೇ ಅಂಶಗಳಿಲ್ಲ.ಅದನ್ನು ಮುಂದಿನ ದಿನಗಳಲ್ಲಿ ಸೇರ್ಪಡೆಗೆ ಕ್ರಮವಹಿಸಲಾಗುವುದು ಎಂದು ತಿಳಿಸಿದರು.

ಬಂಗಾರಪೇಟೆ ಶಾಸಕ ನಾರಾಯಣಸ್ವಾಮಿ ಅವರ ಚುಕ್ಕೆಗುರುತಿನ ಪ್ರಶ್ನೆಗೆ ಉತ್ತರಿಸಿ ಅವರು ಬಾರ್‌ಲೈಸೆನ್ಸ್‌ಗಳ ನೀಡಿಕೆಯಲ್ಲಿ ಮೀಸಲಾತಿ ಅನುಷ್ಠಾನ ವಿಚಾರ ಸರಕಾರದ ಗಮನದಲ್ಲಿದ್ದು,ಕಾನೂನು ತಂದು ಅನುಷ್ಠಾನಗೊಳಿಸುವುದಕ್ಕೆ ಕ್ರಮವಹಿಸಲಾಗುವುದು ಎಂದರು. ಕೋಲಾರ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ 56 ಸಿಎಲ್-7 ಸನ್ನದುಗಳನ್ನು ಮಂಜೂರು ಮಾಡಲಾಗಿದೆ. ಕೋಲಾರ ಜಿಲ್ಲೆಯ ಅಬಕಾರಿ ಅಧೀಕ್ಷಕ ರಂಗಪ್ಪ ಅವರ ಮೇಲಿನ ಆರೋಪಗಳ ಕುರಿತು ಇಲಾಖೆಯ ಹಿರಿಯ ಅಧಿಕಾರಿಗಳಿಂದ ವಿಚಾರಣೆ ನಡೆಸಿ ವರದಿ ತರಿಸಿಕೊಳ್ಳಲಾಗುವುದು;ವರದಿ ಆಧರಿಸಿ ಕ್ರಮಕೈಗೊಳ್ಳಲಾಗುವುದು ಎಂದರು.

## ನಾಡಪ್ರಭು ಕೆಂಪೇಗೌಡ ಬಡಾವಣೆಗೆ ವರ್ಷದೊಳಗೆ ಮೂಲಸೌಕರ್ಯ: ಸಚಿವ ರಾಮಲಿಂಗಾ ರೆಡ್ಡಿ



ಬೆಳಗಾವಿ ಸುವರ್ಣಸೌಧ: ನಾಡಪ್ರಭು ಕೆಂಪೇಗೌಡ ಬಡಾವಣೆಗೆ ಒಂದು ವರ್ಷದೊಳಗೆ ಅಗತ್ಯ ಮೂಲಸೌಕರ್ಯಗಳನ್ನು ಸರಕಾರ ಕಲ್ಪಿಸಿಕೊಡಲಿದೆ ಎಂದು ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಅವರು ತಿಳಿಸಿದರು.

ವಿಧಾನಸಭೆಯಲ್ಲಿ ಸದಸ್ಯ ಸುರೇಶಕುಮಾರ್ ಅವರ ಚುಕ್ಕೆಗುರುತಿನ ಪ್ರಶ್ನೆಗೆ ಉಪಮುಖ್ಯಮಂತ್ರಿಗಳ ಪರವಾಗಿ ಉತ್ತರ ನೀಡಿದ ಅವರು ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ ಮೂಲಸೌಕರ್ಯಗಳ ಕೊರತೆ ಇರುವುದರಿಂದ ಜನರು ಸಮಸ್ಯೆ ಅನುಭವಿಸುತ್ತಿರುವುದು ಗಮನದಲ್ಲಿದ್ದು,ಅದನ್ನು ವರ್ಷದೊಳಗೆ ಪರಿಹರಿಸಲಾಗುವುದು ಎಂದು ಅವರು ಭರವಸೆ ನೀಡಿದರು.

ಕಂದಾಯ ನ್ಯಾಯಾಲಯಗಳಲ್ಲಿ ಪ್ರಕರಣಗಳು ಬಾಕಿ, ರೆವಿನ್ಯೂ ನಿವೇಶನಗಳನ್ನು ರಚಿಸಿ ಮಾರಾಟ ಮಾಡಿರುವುದು, ಹೈಕೋರ್ಟ್‌ನಲ್ಲಿ ಪ್ರಕರಣಗಳು ದಾಖಲಾಗಿರುವುದರಿಂದ ಬಡಾವಣೆ ನಿರ್ಮಾಣಕ್ಕಾಗಿ 1400 ಎಕರೆ ಭೂಸ್ವಾಧೀನ ಮಾಡುವುದಕ್ಕೆ ಸರಕಾರಕ್ಕೆ ಸಮಸ್ಯೆಯಾಗಿದೆ ಎಂದು ವಿವರಿಸಿದ ಅವರು ನ್ಯಾಯಾಲಯಗಳಲ್ಲಿ ಬಾಕಿಇರುವ ರಿಟ್ ಅರ್ಜಿಗಳನ್ನು ಆದ್ಯತೆ ಮೇರೆಗೆ ಇತ್ಯರ್ಥಪಡಿಸಲು ಕ್ರಮವಹಿಸಲಾಗುತಿದ್ದು,ಇತ್ಯರ್ಥಪಡಿಸಿದ ನಂತರ ಭೂಸ್ವಾಧೀನತೆಯನ್ನು ಶೀಘ್ರವಾಗಿ ಪೂರ್ಣಗೊಳಿಸಲಾಗುವುದು ಎಂದರು.

ಹಂಚಿಕೆದಾರರು ತಮ್ಮ ನಿವೇಶನದಲ್ಲಿ ಮನೆ ಕಟ್ಟಿಕೊಳ್ಳಲು ಆನ್‌ಲೈನ್ ಅನುಮೋದನೆ ಪಡೆಯಲು ಸೆಂಟರ್ ಫಾರ್ ಇ-ಗವರ್ನನ್ಸ್ ರವರು ಅಗತ್ಯ ತಾಂತ್ರಿಕ ಸೌಕರ್ಯಗಳನ್ನು ಅಭಿವೃದ್ಧಿಪಡಿಸುತ್ತಿದ್ದು, ಆರು ತಿಂಗಳ ಕಾಲಾವಧಿಯಲ್ಲಿ ಈ ವ್ಯವಸ್ಥೆಯನ್ನು ಜಾರಿಗೊಳಿಸಲು ಯೋಜಿಸಲಾಗಿದೆ ಎಂದರು.

## 3 ವಿಧೇಯಗಳ ವಿಧಾನ ಸಭೆಯ ಅಂಗೀಕಾರ

ಬೆಳಗಾವಿ ಸುವರ್ಣ ಸೌಧ: ಬೆಳಗಾವಿ ಸುವರ್ಣ ಸೌಧದಲ್ಲಿ ನಡೆಯುತ್ತಿರುವ ವಿಧಾನ ಮಂಡಲ ಅಧಿವೇಶನದಲ್ಲಿ, ಮಂಗಳವಾರ ವಿಧಾನ ಸಭೆಯು 3 ಪ್ರಮುಖ ವಿಧೇಯಕಗಳಿಗೆ ಅಂಗೀಕಾರ ನೀಡಿತು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡುರಾವ್ 2023ನೇ ಸಾಲಿನ ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳು ಕಡ್ಡಾಯ ಸೇವಾ (ತಿದ್ದುಪಡಿ) ವಿಧೇಯಕವನ್ನು ಸದನದಲ್ಲಿ ಮಂಡಿಸಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಅವರು 2023ನೇ ಸಾಲಿನ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಸದನದಲ್ಲಿ ಮಂಡಿಸಿದರು.

2023ನೇ ಸಾಲಿನ ಕರಾವಳಿ ಅಭಿವೃದ್ಧಿ ಮಂಡಳಿ ವಿಧೇಯಕವನ್ನು ಯೋಜನೆ ಮತ್ತು ಸಾಂಖ್ಯಿಕ ಸಚಿವ ಡಿ.ಸುಧಾಕರ್ ಅವರ ಬದಲಿಗೆ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಹೆಚ್.ಕೆ.ಪಾಟೀಲ್ ಸದನ ಮುಂದೆ ಮಂಡಿಸಿದರು.

ಈ ವಿಧೇಯಕಗಳಿಗೆ ವಿಧಾನ ಸಭೆ ಅನುಮೋದನೆ ನೀಡಿತು. ಅನಮೋದನೆ ಗೊಂಡ ವಿಧೇಯಕಗಳನ್ನು ವಿಧಾನ ಪರಿಷತ್‌ನಲ್ಲಿ ಮಂಡಿಸಲು ಕಳುಹಿಸಲಾಯಿತು.

ಇದಕ್ಕೂ ಮುನ್ನ ಸಚಿವ ಹೆಚ್.ಕೆ.ಪಾಟೀಲ್ 1965ರ ಕರ್ನಾಟಕ ಸಾರ್ವಜನಿಕ ಗ್ರಂಥಾಲಯಗಳ ಅಧಿನಿಯಂ ಕಲಂ 3(2)(ಬಿ) ಮೇರೆಗೆ ವರ್ಗಾಯಿಸಬಹುದಾದ ಒಂಟಿ ಮತದ ಮೂಲಕ ದಾಮಾಷಾ ಪ್ರಾತಿನಿಧ್ಯದ ತತ್ವದ ಆಧಾರದ ಮೇಲೆ ವಿಧಾನ ಸಭೆಯಿಂದ ರಾಜ್ಯ ಗ್ರಂಥಾಲಯ ಪ್ರಾಧಿಕಾರಕ್ಕೆ ನಾಲ್ಕು ಸದಸ್ಯರನ್ನು ಚುನಾಯಿಸಲು ಸೂಚಿಸಿದರು.

# ಇಂದು ನಡೆಯಬೇಕಿದ್ದ INDIA ಒಕ್ಕೂಟದ ಸಭೆ ಮುಂದೂಡಿಕೆ



ನವದೆಹಲಿ: ಪ್ರತಿ ಪಕ್ಷದ ನಾಯಕರ ಅಲಭ್ಯತೆ ಹಿನ್ನಲೆ ಬುಧವಾರ ನಡೆಯಬೇಕಿದ್ದ INDIA ಒಕ್ಕೂಟದ ಸಭೆಯನ್ನು ಮುಂದೂಡಲಾಗಿದೆ.

ಪಂಚರಾಜ್ಯಗಳ ಚುನಾವಣೆ ಹಿನ್ನಲೆ ಒಕ್ಕೂಟದ ಸಭೆ ನಡೆಸಲು ಸಾಧ್ಯವಾಗಿರಲಿಲ್ಲ. ಫಲಿತಾಂಶ ಪ್ರಕಟವಾದ ಬಳಿಕ ಲೋಕಸಭೆ ಚುನಾವಣೆ ಬಗ್ಗೆ ಚರ್ಚಿಸಲು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ದೆಹಲಿಯಲ್ಲಿ ಸಭೆ ನಡೆಸಲು ನಿರ್ಧರಿಸಿದ್ದರು.

ಮಿಚಾಂಗ್ ಚಂಡಮಾರುತದಿಂದ ಚೆನ್ನೈ ವಿಮಾನ ನಿಲ್ದಾಣವನ್ನು ಮುಚ್ಚಿದ್ದು ತಮಿಳುನಾಡು ಮುಖ್ಯಮಂತ್ರಿ ಎಂಕೆ ಸ್ಟಾಲಿನ್ ಅವರು ದೆಹಲಿಗೆ ಭೇಟಿ ನೀಡಲು ಮತ್ತು ಸಭೆಗೆ ಬರಲು ಸಾಧ್ಯವಾಗುವುದಿಲ್ಲ ಎಂದು ತಿಳಿಸಿದ್ದಾರೆ.

ನಿತೀಶ್ ಕುಮಾರ್ ಅವರು ಅಸ್ವಸ್ಥರಾಗಿದ್ದು, ಪಶ್ಚಿಮ ಬಂಗಾಳದ ಸಿಎಂ ಮಮತಾ ಬ್ಯಾನರ್ಜಿ ಮತ್ತು ಅಖಿಲೇಶ್ ಯಾದವ್ ಸಭೆಗೆ ಗೈರಾಗುವ ಬಗ್ಗೆ ಮೊದಲೇ ಮಾಹಿತಿ ನೀಡಿದ್ದರು.

ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೆನ್ ಕೂಡಾ ಸಭೆಯಲ್ಲಿ ಭಾಗಿಯಾಗಿರುವ ಖಚಿತ ಪಡಿಸಿದ್ದರು. ಆಮ್ ಆದ್ಮಿ ಪಕ್ಷವು ಸಭೆಯಲ್ಲಿ ಭಾಗಿಯಾಗುವ ಬಗ್ಗೆ ಯಾವುದೇ ದೃಢೀಕರಣ ನೀಡಿರಲಿಲ್ಲ.

ಪ್ರಮುಖ ನಾಯಕರ ಅಲಭ್ಯತೆ ಹಿನ್ನಲೆ ಸಭೆಯನ್ನು ಮುಂದೂಡಲು ನಿರ್ಧರಿಸಿದ್ದು ಮುಂದಿನ ಎರಡು ವಾರಗಳಲ್ಲಿ ಮತ್ತೆ ಸಭೆಗೆ ದಿನಾಂಕ ನಿಗದಿ ಮಾಡಲು ಕಾಂಗ್ರೆಸ್ ನಿರ್ಧರಿಸಿದೆ ಎಂದು ಮೂಲಗಳು ಹೇಳಿವೆ. ಸಭೆ ರದ್ದಾದ ಹಿನ್ನಲೆ ಶಿವಸೇನೆ ಮುಖ್ಯಸ್ಥ ಉದ್ಧವ್ ಠಾಕ್ರೆ ಅವರು ತಮ್ಮ ವಿಮಾನ ಟಿಕೆಟ್‌ಗಳನ್ನು ರದ್ದುಗೊಳಿಸಿದ್ದಾರೆ ಎಂದು ಅವರು ಹೇಳಿದ್ದಾರೆ.

ಕಡೆಯ ಒಕ್ಕೂಟದ ಸಭೆಯನ್ನು ಶಿವಸೇನಾ (ಯುಬಿಟಿ) ಅಧ್ಯಕ್ಷ ಉದ್ಧವ್ ಠಾಕ್ರೆ ಆಯೋಜಿಸಿದ್ದರು. ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಮತ್ತು ಐದು ರಾಜ್ಯಗಳ ಮುಖ್ಯಮಂತ್ರಿಗಳು ಹಾಜರಿದ್ದರು. ಎರಡು ದಿನಗಳ ಚರ್ಚೆಗಳಲ್ಲಿ, ಮೈತ್ರಿಯು ಮುಂಬರುವ ಸಾರ್ವತ್ರಿಕ ಚುನಾವಣೆಗಳಿಗೆ ಪ್ರಮುಖ ಚುನಾವಣಾ ವಿಷಯಗಳನ್ನು ಚರ್ಚಿಸಿ ಸಮನ್ವಯ ಸಮಿತಿಯನ್ನು ರಚಿಸಿತು. ಲೋಕಸಭಾ ಚುನಾವಣೆಯಲ್ಲಿ ಸಾಧ್ಯವಾದಷ್ಟು ಒಟ್ಟಾಗಿ ಹೋರಾಡಲು ಮೂರು ಅಂಶಗಳ ನಿರ್ಣಯವನ್ನು ಅಂಗೀಕರಿಸಿತು.

# ರಾಜ್ಯದ 25 ಸಾವಿರ ಸ್ಮಾರಕಗಳ ರಕ್ಷಣೆಗೆ ಕ್ರಮ: ಸಚಿವ ಹೆಚ್.ಕೆ.ಪಾಟೀಲ್

**ಖಾಸಗಿ ಸಹಭಾಗಿತ್ವದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ**



ಸುವರ್ಣಸೌಧ: ಬೆಳಗಾವಿ: ರಾಜ್ಯದಲ್ಲಿ 25 ಸಾವಿರಕ್ಕೂ ಹೆಚ್ಚಿನ ಸ್ಮಾರಕಗಳ ರಕ್ಷಣೆಗೆ ಸರ್ಕಾರ ಕ್ರಮ ವಹಿಸಿದೆ. ಖಾಸಗಿ ಸಹಭಾಗಿತ್ವದಲ್ಲಿ ರಾಜ್ಯದಲ್ಲಿನ ಪ್ರವಾಸೋದ್ಯಮವನ್ನು ಅಭಿವೃದ್ಧಿ ಮಾಡಲು ಯೋಜನೆ ರೂಪಿಸುವುದಾಗಿ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಹೆಚ್.ಕೆ.ಪಾಟೀಲ್ ಹೇಳಿದರು.

ಬೆಳಗಾವಿಯ ಸುವರ್ಣ ಸೌಧದಲ್ಲಿ ಮಂಗಳವಾರದ ವಿಧಾನ ಸಭಾ ಅಧಿವೇಶನದ ಪ್ರಶ್ನೋತ್ತರ ವೇಳೆಯಲ್ಲಿ ಶಾಸಕರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿ ಅವರು ಮಾತನಾಡಿದರು.

ಸ್ಮಾರಕಗಳ ದತ್ತು ತೆಗೆದುಕೊಳ್ಳುವ ಯೋಜನೆ ಜಾರಿಯಲ್ಲಿದೆ. ಪ್ರವಾಸಿ ತಾಣಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗುವುದು. ಕರ್ನಾಟಕ ಪ್ರವಾಸೋದ್ಯಮ ನೀತಿ 2020–26 ಅಡಿ ರಾಜ್ಯದ ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡದಲ್ಲಿ ಸಾಹಸ, ಕೃಷಿ, ಮನರಂಜನಾ, ಕ್ಯಾರವಾನ್, ಸಾಂಸ್ಕೃತಿಕ ಪ್ರವಾಸೋದ್ಯಮ, ಸಾಂಸ್ಕೃತಿಕ ಗ್ರಾಮ, ಪರಿಸರ, ಪಾರಂಪರಿಕ, ಹೋಂಸ್ಟೇ, ಹೋಟೆಲ್, ಹೌಸ್ ಬೋಟ್, ವಸ್ತು ಸಂಗ್ರಹಾಲಯ, ಗ್ಯಾಲರಿ, ರೋಪ್ ವೇ, ಧ್ವನಿ ಮತ್ತು ಬೆಳಕು, ಥೀಮ್ ಪಾರ್ಕ್ ಸೇರಿದಂತೆ 26 ರೀತಿಯ ಪ್ರವಾಸಿ ಉತ್ಪನ್ನಗಳನ್ನು ಅಭಿವೃದ್ಧಿ ಪಡಿಸಲು ಮುಂದೆ ಬರುವ ಖಾಸಗೀ ಬಂಡವಾಳ ಹೂಡಿಕೆದಾರರನ್ನು ಸೆಳೆಯಲು ಸಹಾಯಧನ ಪ್ರೋತ್ಸಾಹಕಗಳು ಮತ್ತು ರಿಯಾಯಿತಿಗಳನ್ನು ನೀಡಲಾಗಿದೆ ಎಂದರು. ಶಾಸಕ ಉಮಾನಾಥ ಕೋಟ್ಯಾನ್ ಮಾತನಾಡಿ, 2012–13 ರಲ್ಲಿ ಮೂಡುಬಿದರೆ ಕ್ಷೇತ್ರದ ಸಸಿಹಿತ್ಲು ಕಡಲ ತೀರದಲ್ಲಿ ಅಂತರಾಷ್ಟ್ರೀಯ ಸರ್ಫಿಂಗ್ ಪಂದ್ಯಾವಳಿ ಆಯೋಜಿಸಲಾಗಿತ್ತು. ಇದಕ್ಕೆ ಉತ್ತಮ ಪ್ರತಿಕ್ರಿಯೆ ಕಂಡುಬಂದಿದೆ.

ಸರ್ಫಿಂಗ್ ನಂತಹ ಸಾಹಸ ಕ್ರೀಡೆಯ ಉತ್ತೇಜನಕ್ಕೆ ಸರ್ಕಾರ ಮುಂದಾಗಬೇಕು. ಸಸಿಹಿತ್ಲು ಪ್ರದೇಶದಲ್ಲಿನ ಕುಡಿಯುವ ನೀರು ಹಾಗೂ ಬೀದಿ ದೀಪ ಅಳವಡಿಸುವ ಕಾಮಗಾರಿಯನ್ನು ಕೂಡಲೇ ಪ್ರಾರಂಭಿಸುವಂತೆ ಒತ್ತಾಯಿಸಿದರು. ಜೈನ ಕಾಶಿ ಮೂಡಬಿದರೆಯ ಯಾತ್ರಿ ನಿವಾಸಕ್ಕೆ 15 ಹೆಚ್ಚುವರಿ ಕೊಠಿಗಳ ನಿರ್ಮಾಣ ಕಾಮಗಾರಿಗೆ ರೂ.70 ಲಕ್ಷ ಮಂಜೂರಾಗಿದ್ದು, ಸರ್ಕಾರದಿಂದ ರೂ.52.50 ಲಕ್ಷ ಬಿಡುಗಡೆ ಮಾಡಲಾಗಿದೆ. ಕಾಮಗಾರಿಯ ಪೂರ್ಣಗೊಂಡಿದೆ.

ಸಸಿಹಿತ್ಲು ಅಭಿವೃದ್ಧಿ ಕಾಮಗಾರಿಗೆ ರೂ.25 ಲಕ್ಷ ಮೀಸಲಿರಿಸಿದ್ದು, ಆದ್ಯತೆಯ ಮೇರಗೆ ಶೀಘ್ರವೇ ಕೈಗೆತ್ತಿಕೊಂಡು ಕಾಮಗಾರಿ ಆರಂಭಿಸಲಾಗುವುದು ಎಂದು ಸಚಿವ ಹೆಚ್.ಕೆ.ಪಾಟೀಲ್ ಉತ್ತರಿಸಿದರು. ಮೂಡಬಿದರೆ ಕ್ಷೇತ್ರದ ಕಲಕಕೆರೆ ನಿಸರ್ಗಧಾಮ ಮತ್ತು ರಾಣಿ ಅಬ್ಬಕ್ಕ ಸಂಸ್ಕೃತಿ ಗ್ರಾಮಕ್ಕೆ ರೂ. 1 ಕೋಟಿ, ಶಿರ್ತಾಡಿ ಗ್ರಾಮದ ಪ್ರವಾಸಿ ತಾಣ ಕೊಣಜಿಕಲ್ಲು ಗುಡ್ಡವನ್ನು ಅಭಿವೃದ್ಧಿ ರೂ.50 ಲಕ್ಷ ಹಾಗೂ ಮೂಡಬಿದರೆಯ ಸಾವಿರ ಕಂಬದ ಬಸದಿ ಹಾಗೂ ಇತರೆ ಜೈನ ಮಂದಿರಗಳ ಅಭಿವೃದ್ಧಿಗೆ ರೂ.50 ಲಕ್ಷ ಬಿಡುಗಡೆ ಮಾಡಲು ಸರ್ಕಾರಕ್ಕೆ ಪ್ರಸ್ತಾವನೆಗಳು ಸಲ್ಲಿಕೆಯಾಗಿವೆ ಎಂದು ತಿಳಿಸಿದರು.

ಸಕಲೇಶಪುರ ಶಾಸಕ ಸಿಮೆಂಟ್ ಮಂಜು ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಸಕಲೇಶಪುರ ತಾಲ್ಲೂಕಿನ ಮರಗುಂದ, ಮಂಜರಾಬಾದ್ ಕೋಟೆ, ಮೂಕನಮನೆ ಜಲಪಾತ, ಅಬ್ಬಿ ಜಲಪಾತ, ಬಿಸಿಲೆ ಘಾಟ್, ಪಾಂಡವರ ಬೆಟ್ಟ, ಮೂರ್ಕಣ್ ಬೆಟ್ಟ, ಜೇನುಕಲ್ಲು ಬೆಟ್ಟ, ಗುಡ್ಡ ಬಸವಣ್ಣ, ಪಾಟ್ಲೆಬೆಟ್ಟ ಪ್ರದೇಶಗಳನ್ನು ಪ್ರವಾಸಿ ತಾಣಗಳಾಗಿ ಅಭಿವೃದ್ಧಿ ಗುರಿತಿಸಲಾಗಿದೆ ಎಂದು ತಿಳಿಸಿದರು.

ಕೇಬಲ್ ಕಾರ್ ಪ್ರಾರಂಭಕ್ಕೆ ಯೋಜನೆ ಮಳವಳ್ಳಿ ಶಾಸಕ ಪಿ.ಎಂ.ನರೇಂದ್ರಸ್ವಾಮಿ ಪ್ರಶ್ನೆಗೆ ಉತ್ತರಿಸಿದ ಸಚಿವ ಹೆಚ್.ಕೆ.ಪಾಟೀಲ್ ಯಲ್ಲಮ್ಮನಗುಡ್ಡ, ಮಧುಗಿರಿ, ಅಂಜನಾದ್ರಿ, ನಂದಿಬೆಟ್ಟ ಹಾಗೂ ಗಗನ ಚುಕ್ಕಿಯಲ್ಲಿ ಕೇಬಲ್ ಕಾರ್ ಪ್ರಾರಂಭಿಸುವುದಕ್ಕೆ ಪರಿಶೀಲನೆ ಕಾರ್ಯ ನಡೆಸಲಾಗುತ್ತಿದೆ ಎಂದು ಸಚಿವ ಹೆಚ್.ಕೆ.ಪಾಟೀಲ್ ಸ್ಪಷ್ಟ ಪಡಿಸಿದರು. 2023–24ನೇ ಸಾಲಿನ ಆಯವ್ಯಯದಲ್ಲಿ ಪ್ರವಾಸೋದ್ಯಮ ಇಲಾಖೆಗೆ ಸರ್ಕಾರದಿಂದ ರೂ.339.54 ಕೋಟಿ ಮೀಸಲಿರಿಸಲಾಗಿದೆ.

ಈ ಪೈಕಿ ರೂ.90 ಕೋಟಿಯನ್ನು ಬಂಡವಾಳ ವೆಚ್ಚಗಳ ಲೆಕ್ಕಶೀರ್ಷಿಕೆಗಳಡಿ ಈಗಾಗಲೇ ಒದಗಿಸಲಾಗಿದೆ ಎಂದರು.

ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಮಾತನಾಡಿ, ಜಲ ಸಾಹಸ ಕ್ರೀಡಗಳನ್ನು ಕಲಿಯಲು ರಾಜ್ಯದಿಂದ ಹೊರ ರಾಷ್ಟ್ರಗಳಿಗೆ ಅನೇಕರು ತೆರಳುತ್ತಾರೆ. ರಾಜ್ಯದಲ್ಲಿ ಸುಮಾರು 300 ಕಿ.ಮೀ ಉದ್ದದ ಕರವಾಳಿ ತೀರವಿದೆ.

ಇಲ್ಲಿ ಖಾಸಗಿ ಸಹಭಾಗಿತ್ವದಲ್ಲಿ ಜಲ ಸಾಹಸ ಕ್ರೀಡೆಗಳ ಪ್ರವಾಸೋದ್ಯಮಕ್ಕೆ ಸರ್ಕಾರ ಮುಂದಾಗಬೇಕು ಎಂದು ಕೋರಿದರು.

ರಾಜ್ಯದ ಕರಾವಳಿ ಜಿಲ್ಲೆಗಳು ಕಡಲು ಕಿನಾರೆ, ಧಾರ್ಮಿಕ ಹಾಗೂ ಆರೋಗ್ಯ ಕ್ಷೇತ್ರದಲ್ಲಿ ನಾಡಿಗೆ ಹೆಸರಾಗಿವೆ. ಈ ಮೂರು ಅಂಶಗಳ ಮುಂದೆ ಇಟ್ಟುಕೊಂಡು, ಕರಾವಳಿ ಅಭಿವೃದ್ಧಿ ಮಂಡಳಿಯಲ್ಲಿ ಪ್ರವಾಸೋದ್ಯಮದ ಅಭಿವೃದ್ಧಿ ಯೋಜನೆ ರೂಪಿಸುವಂತೆ ಸಭಾಧ್ಯಕ್ಷ ಯು.ಟಿ.ಖಾದರ್ ಸರ್ಕಾರಕ್ಕೆ ಸೂಚನೆ ನೀಡಿದರು.

## ಅಡಿಕೆ ಬೆಳೆಯಲ್ಲಿ ಎಲೆ ಚುಕಿ ರೋಗ ನಿಯಂತ್ರಣಕ್ಕೆ ಕ್ರಮ



ಬೆಳಗಾವಿ ಸುವರ್ಣ ಸೌಧ: ರಾಜ್ಯದಲ್ಲಿ ಅಡಿಕೆ ಬೆಳೆಯಲ್ಲಿ ಕಂಡು ಬರುತ್ತಿರುವ ಎಲೆ ಚುಕ್ಕಿ ರೋಗ ನಿಯಂತ್ರಣ ಕುರಿತಂತೆ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ವತಿಯಿಂದ ಸಂಶೋಧನೆ ಕೈಗೊಳ್ಳಲು 43.61 ಲಕ್ಷ ರೂ ಗಳ ಅನುದಾನವನ್ನು ಒದಗಿಸಲಾಗಗಿದ್ದು, ಈ ರೋಗ ನಿಯಂತ್ರಣ ಕುರಿತು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ ಎಂದು ಕೃಷಿ ಸಚಿವ ಚೆಲುವರಾಯಸ್ವಾಮಿ ಹೇಳಿದರು.

## ನೈಸ್ ಸಂಸ್ಥೆಗೆ ನೀಡಿದ್ದ 554 ಎಕರೆ ಜಮೀನು ಶೀಘ್ರದಲ್ಲಿ ಹಿಂಪಡೆಯಲಾಗುವುದು : ಸಚಿವ ಶರಣ ಬಸಪ್ಪ ದರ್ಶನಾಪುರ



ಬೆಳಗಾವಿ ಸುವರ್ಣ ಸೌಧ: ಕರ್ನಾಟಕ ಕೈಗಾರಿಕ ಪ್ರದೇಶಾಭಿವೃದ್ಧಿ ಮಂಡಳಿಯು ನೈಸ್ ಸಂಸ್ಥೆಗೆ ನೀಡಿದ್ದ 554 ಎಕರೆ ಹೆಚ್ಚುವರಿ ಜಮೀನನ್ನು ಶೀಘ್ರವಾಗಿ ಹಿಂಪಡೆಯುವ ಕುರಿತಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವ ಶರಣ ಬಸಪ್ಪ ದರ್ಶನಾಪುರ ಹೇಳಿದರು. ವಿಧಾನ ಪರಿಷತ್ ಮಂಗಳವಾರ ಸದಸ್ಯ ಎಸ್. ಮುನಿರಾಜು ಗೌಡ ಪಿಎಂ ಕೇಳಿದ ಚುಕ್ಕೆಗುರಿತನ ಪ್ರಶ್ನೆ 25 ಕ್ಕೆ , ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವರ ಪರವಾಗಿ ಅವರು ಉತ್ತರಿಸಿದರು.

ಬಿಎಂಐಸಿಪಿ ಯೋಜನೆಗಾಗಿ ಸ್ವಾಧೀನ ಪಡಿಸಿಕೊಳ್ಳಲಾದ ಜಮೀನುಗಳ ಪೈಕಿ 554 ಎಕರೆ ಹೆಚ್ಚುವರಿ ಜಮೀನುಗಳನ್ನು ಹಿಂಪಡೆಯುವ ಕುರಿತಂತೆ , ಹೆಚ್ಚುವರಿಯಾಗಿ ಸ್ವಾಧೀನಪಡಿಸಿಕೊಂಡಿರುವ ಜಮೀನುಗಳನ್ನು ಗುರುತಿಸಿ ಸರ್ವೇ ನಂ ಗಳೊಂದಿಗೆ ವಿವರವಾದ ಮಾಹಿತಿ ಸಲ್ಲಿಸುವಂತೆ ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ ( ದಕ್ಷಿಣ) ಇವರಿಗೆ ಪತ್ರದ ಮೂಲಕ ತಿಳಿಸಿದ್ದು, ಇವರಿಂದ ಮಾಹಿತಿ/ ಸ್ಪಷ್ಟವಾದ ವರದಿ ಪಡೆದು ಹೆಚ್ಚುವರಿ ಭೂಮಿಯನ್ನು ಹಿಂಪಡೆಯಲು ನಿಯಮಾನುಸಾರ ಪರಿಶೀಲಿಸಿ ಕ್ರಮ ವಹಿಸಲಾಗುವುದು ಹಾಗೂ ಸದ್ರಿ ಬೂಮಿಯನ್ನು ಹಿಂಪಡೆದ ನಂತರ ಯಾವ ಉದ್ದೇಶಕ್ಕೆ ಬಳಸಬೇಕು ಎಂಬುದನ್ನು ಪರಿಶೀಲಿಸಲಾಗುವುದು ಎಂದರು.

# ನೇಕಾರರು ಹಾಗೂ ಟೈಲರಿಂಗ್ ವೃತ್ತಿಯಲ್ಲಿ ತೊಡಗಿದವರಿಗೆ ವಿಶೇಷ ಸಾಮಾಜಿಕ ಭದ್ರತಾ ಯೋಜನೆ ಜಾರಿ: ಸಚಿವ ಸಂತೋಷ್ ಎಸ್ ಲಾಡ್

ಸುವರ್ಣಸೌಧ: ಬೆಳಗಾವಿ: ರಾಜ್ಯದಲ್ಲಿನ ನೇಕಾರರು ಹಾಗೂ ಟೈಲರಿಂಗ್ ಸೇರಿದಂತೆ ಅಸಂಘಟಿತ ವಲಯದ ಹಲವು ಕಾರ್ಮಿಕರಿಗೆ ವಿಶೇಷ ಸಾಮಾಜಿಕ ಭದ್ರತಾ ಯೋಜನೆಗಳನ್ನು ಜಾರಿ ಮಾಡುವುದಾಗಿ ಕಾರ್ಮಿಕ ಸಚಿವ ಸಂತೋಷ್ ಎಸ್ ಲಾಡ್ ಭರವಸೆ ನೀಡಿದರು.

ಬೆಳಗಾವಿಯ ಸುವರ್ಣ ಸೌಧದಲ್ಲಿ ಮಂಗಳವಾರದ ವಿಧಾನ ಸಭಾ ಅಧಿವೇಶನದ ಪ್ರಶ್ನೋತ್ತರ ವೇಳೆಯಲ್ಲಿ ತೆರದಾಳ ಶಾಸಕ ಸಿದ್ದು ಸವದಿ ಹಾಗೂ ಕಾಪು ಶಾಸಕ ಗುರ್ಮೆ ಸುರೇಶ್ ಶೆಟ್ಟಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ಪ್ರತಿ ನಿರ್ಮಾಣ ಕಾಮಗಾರಿಗೆ ಶೇ.1 ರಷ್ಟು ಸೆಸ್ ವಿಧಿಸಲಾಗುತ್ತಿದೆ. ಇದರ ಅಡಿ ಸಂಗ್ರಹವಾದ ಹಣದಲ್ಲಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯು, ಹಲವು ಸಾಮಾಜಿಕ ಭದ್ರತಾ ಯೋಜನೆಗಳನ್ನು ಕಟ್ಟಡ ಕಾರ್ಮಿಕರಿಗೆ ಜಾರಿ ಮಾಡಿದೆ.



ಈ ಯೋಜನೆಗಳನ್ನು ನೇಕಾರರು ಹಾಗೂ ಟೈಲರಿಂಗ್ ಸೇರಿದಂತೆ ಇತರೆ ಯಾವುದೇ ಅಸಂಘಟಿತ ಕಾರ್ಮಿಕರಿಗೆ ವಿಸ್ತರಿಸಲು ಬರುವುದಿಲ್ಲ. ರಾಜ್ಯದಲ್ಲಿ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಇದ್ದು, ಮಂಡಳಿಯು ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರು, ಕಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕರು ಸೇರಿದ 11 ಅಸಂಘಟಿತ ಕಾರ್ಮಿಕರಿಗೆ ಉಚಿತವಾಗಿ ನೊಂದಣಿ ಮಾಡಿಕೊಂಡು, ಗುರುತಿನ ಚೀಟಿ ನೀಡುತ್ತಿದೆ. ಇ–ಶ್ರಮ್ ಪೋರ್ಟ್ಲ ನಲ್ಲಿಯೂ 379 ವಿಧದ ಅಸಂಘಟಿತ ಕಾರ್ಮಿಕರನ್ನು ಉಚಿತವಾಗಿ ನೊಂದಣಿ ಮಾಡಲಾಗುತ್ತಿದೆ.

ರಾಜ್ಯದ ಗಾರ್ಮೆಂಟ್ ಸಂಸ್ಥೆಗಳಲ್ಲಿ ಟೈಲರಿಂಗ್ ವೃತ್ತಿ ಮಾಡುತ್ತಿರುವವರಿಗೆ ಉದ್ಯೋಗಿಯ ಸಂಬಳದ ನಿರ್ದಿಷ್ಟ ಶೇಕಡವಾರು ಮೊತ್ತ ಹಾಗೂ ಸಂಸ್ಥೆಯ ಅಷ್ಟೇ ಮೊತ್ತವನ್ನು ಒಟ್ಟು ಮಾಡಿ ಭವಿಷ್ಯ ನಿಧಿಗೆ ಕೊಡುಗೆ ನೀಡುತ್ತಿದ್ದಾರೆ. ಈ ಭವಿಷ್ಯ ನಿಧಿಯನ್ನು ಉದ್ಯೋಗಿಯ ರಾಜೀನಾಮೆ, ನಿವೃತ್ತಿ, ಅನಾರೋಗ್ಯ, ಮದುವೆ, ಶಿಕ್ಷಣ, ನಿವೇಶನ ಖರೀದಿ ಮತ್ತು ಮನೆ ನಿರ್ಮಾಣ ಮುಂತಾದ ಉದ್ದೇಶಗಳಿಗೆ ಹಿಂಪಡೆಯಲು ಅವಕಾಶ ನೀಡಲಾಗಿದೆ. ಆದರೆ ಮನೆಯಲ್ಲಿ ಅಥವಾ ಸಣ್ಣ ಪುಟ್ಟ ಅಂಗಡಿಗಳಲ್ಲಿ ಟೈಲರಿಂಗ್ ವೃತ್ತಿ ಮಾಡುತ್ತಿರುವವರಿಗೆ ಭವಿಷ್ಯ ನಿಧಿಯ ಸೌಲಭ್ಯ ಇಲ್ಲ. ರಾಜ್ಯಾದ್ಯತಂತ ಅಸಂಘಟಿತ ವಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ 7,280,44 ಟೈಲರಿಂಗ್ ವೃತ್ತಿ ನಿರತ ಕಾರ್ಮಿಕರು ಇದ್ದಾರೆ. ಇವರಿಗೆ ಪ್ರಧಾನ ಮಂತ್ರಿ ಸುರಕ್ಷಾ ಭೀಮಾ ಯೋಜನೆ ಇದೆ. ಇದು ಅಪಘಾತ ವಿಮೆಯಾಗಿದ್ದು, ಕಾರ್ಮಿಕರಿಗೆ ಸಂಕಷ್ಟದಲ್ಲಿ ನೆರವಾಗಲಿದೆ. ಪ್ರಧಾನ ಮಂತ್ರಿ ಶ್ರಮಯೋಗಿ ಮಾನ್–ಧನ್ ಯೋಜನೆಯಡಿ 60 ವರ್ಷ ಪೂರೈಸಿದ ಅಸಂಘಟಿತ ಕಾರ್ಮಿಕರು ಮಾಸಿಕ ರೂ.3000ಗಳ ನಿಶ್ಚಿತ ಪಿಂಚಣಿ ಪಡೆಯಬಹುದಾಗಿದೆ. ಮುಂದಿನ ವರ್ಷದಲ್ಲಿ ರಾಜ್ಯ ಸರ್ಕಾರದಿಂದ ನೇಕಾರರು ಹಾಗೂ ಟೈಲರಿಂಗ್ ವೃತ್ತಿ ತೊಡಗಿದವರಿಗೆ ವಿಶೇಷ ಸಾಮಾಜಿಕ ಭದ್ರತಾ ಯೋಜನೆಗಳನ್ನು ಜಾರಿ ಮಾಡಲಾವುದು ಎಂದು ಪುನರುಚ್ಚರಿಸಿದರು.

ವಿವಿಧ ಕ್ಷೇತ್ರಗಳಲ್ಲಿ ಸೆಸ್ ಸಂಗ್ರಹಕ್ಕೆ ಚಿಂತನೆ: ನಿರ್ಮಾಣ ಕ್ಷೇತ್ರದ ಸೆಸ್ ಮಾದರಿಯಂತೆ ಗಾರ್ಮೆಂಟ್, ವಾಹನ ತಯಾರಿಕೆ, ಸಾರಿಗೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಶೇ.1 ರಷ್ಟು ಸೆಸ್ ಸಂಗ್ರಹಿಸಲು ಚಿಂತನೆ ನಡೆಸಲಾಗುತ್ತಿದೆ. ಈ ಸೆಸ್‌ನಿಂದ ಸಂಗ್ರಹವಾದ ಹಣದಲ್ಲಿ ಆಯಾ ಕ್ಷೇತ್ರಗಳಲ್ಲಿ ತೊಡಗಿರುವ ಕಾರ್ಮಿಕರಿಗೆ ಯೋಜನೆಗಳನ್ನು ರೂಪಿಸಲಾಗುವುದು ಎಂದು ಕಾರ್ಮಿಕ ಸಚಿವ ಸಂತೋಷ್ ಎಸ್ ಲಾಡ್ ಈ ಸಂದರ್ಭದಲ್ಲಿ ತಿಳಿಸಿದರು.

# ಬರ ನಿರ್ವಹಣೆ ಕಾರ್ಯಕ್ಕೆ 31 ಜಿಲ್ಲೆಗಳಿಗೆ 324 ಕೋಟಿ ರೂ. ಬಿಡುಗಡೆ: ಕೃಷಿ ಸಚಿವರು

ಮೊದಲನೇ ಪುಟದಿಂದ }

ವಿಧಾನ ಪರಿಷತ್ತಿನಲ್ಲಿ ಸದಸ್ಯರಾದ ಗೋವಿಂದರಾಜು ಅವರು ಮಂಡಿಸಿದ ಗಮನ ಸೆಳೆಯುವ ಸೂಚನೆಗೆ ಉತ್ತರಿಸಿದ ಸಚಿವರು, ರಾಜ್ಯದಲ್ಲಿ ಬರ ಪರಿಸ್ಥಿತಿ ಇರುವುದರಿಂದ ಆರ್‌ಬಿಐ ನಿರ್ದೇಶನದಂತೆ ರೈತರ ಬೆಳೆ ಸಾಲದ ಮರುಪಾವತಿ ಅವಧಿಯನ್ನು ಅಲ್ಪಾವಧಿಯಿಂದ ಮಧ್ಯಾವಧಿ ಅಥವಾ ದೀರ್ಘಾವಧಿವರೆಗೆ ರೀ ಸ್ಟ್ರಕ್ಚರ್ ಮಾಡಲು ಎಸ್‌ಎಲ್‌ಬಿಸಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ 236 ತಾಲೂಕುಗಳಲ್ಲಿ 223 ತಾಲೂಕುಗಳನ್ನು ಬರಪೀಡಿತ ಪ್ರದೇಶ ಎಂದು ಘೋಷಿಸಲಾಗಿದೆ. ಈಲ್ಲಾಧಿಕಾರಿಗಳ ನೇತೃತ್ವದಲ್ಲಿ ಕಂದಾಯ, ಕೃಷಿ ಹಾಗೂ ತೋಟಗಾರಿಕೆ ಇಲಾಖೆಯ ಜಂಟಿ ಸಮೀಕ್ಷೆ ವರದಿಯನ್ವಯ 46.11 ಲಕ್ಷ ಹೆಕ್ಟೇರ್ ಕೃಷಿ ಹಾಗೂ 2.06 ಲಕ್ಷ ಹೆಕ್ಟೇರ್ ತೋಟಗಾರಿಕೆ ಸೇರಿದಂತೆ ಒಟ್ಟು 48.17 ಲಕ್ಷ ಹೆಕ್ಟೇರ್ ಬೆಳೆಹಾನಿಯಾಗಿದ್ದು, ಬೆಳೆಹಾನಿ ಇನ್‌ಪುಟ್ ಸಬ್ಸಿಡಿಗೆ ಎನ್‌ಡಿಆರ್‌ಎಫ್ ಅಡಿಯಲ್ಲಿ ರೂ.4663.12 ಕೋಟಿ ರೂ.ಗಳ ಆರ್ಥಿಕ ನೆರವು ಕೋರಿ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ.

ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದಿಂದ ಎನ್‌ಡಿಆರ್‌ಎಫ್ ಅನುದಾನವನ್ನು ನಿರೀಕ್ಷಿಸಿ ಎಸ್‌ಡಿಆರ್‌ಎಫ್/ಎನ್‌ಡಿಆರ್‌ಎಫ್ ಮಾರ್ಗಸೂಚಿಗಳ ಪ್ರಕಾರ ಬೆಳೆಹಾನಿ ಪರಿಹಾರದ ಮೊಲದನೇ ಕಂತಾಗಿ ಬೆಳೆಹಾನಿ ಪರಿಹಾರವಾಗಿ ಅರ್ಹತೆಯ ಅನುಗುಣವಾಗಿ 2000 ರೂ. ರೈತರಿಗೆ ಪಾವತಿಸಲು ತೀರ್ಮಾನಿಸಲಾಗಿದೆ ಎಂದು ಅವರು ತಿಳಿಸಿದರು.

ಕೋಲಾರ ಜಿಲ್ಲೆಯಲ್ಲಿ ಶೇ.11ರಷ್ಟು ಮಳೆ ಕೊರತೆಯಾಗಿದೆ. ಈಲ್ಲೆ ಆರೂ ತಾಲೂಕುಗಳಲ್ಲಿ ಸುಮಾರು 219.87 ಕೋಟಿ ರೂ.ನಷ್ಟವಾಗಿದೆ. ಅಧಿಕಾರಿಗಳು ಜಂಟಿ ಸಮೀಕ್ಷೆ ನಡೆಸಿ ನಷ್ಟವನ್ನು ಅಂದಾಜು ಮಾಡಿದ್ದಾರೆ. ಬೇಸಿಗೆಯ ಬಗ್ಗೆ ಭೀತಿ ಮೂಡಿದೆ ಎಂದು ಇದೆ ವೇಳೆ ಗೋವಿಂದರಾಜು ಅವರು ತಿಳಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಪಶು ಸಂಗೋಪನೆ ಇಲಾಖೇಯ ವರದಿಯನುಸಾರ ಕೋಲಾರ ಜಿಲ್ಲೆಯಲ್ಲಿ 2.23 ಲಕ್ಷ ಟನ್ ಮೇವು ಲಭ್ಯವಿದೆ. ಎಸ್‌ಡಿಆರ್‌ಎಫ್ ಅಡಿಯಲ್ಲಿ ಮೇವಿನ ಕಿರು ಪೊಟ್ಟಣಗಳನ್ನು ನಿಯಮಾನುಸಾರ ಖರೀದಿಸಲು 20 ಕೋಟಿ ರೂ. ಗಳನ್ನು ಪಶು ಸಂಗೋಪನೆ ಇಲಾಖೆಗೆ ಬಿಡುಗಡೆಗೊಳಿಸಲಾಗಿದೆ. 31 ಜಿಲ್ಲೆಗಳಿಗೆ ಬಿಡುಗಡೆ ಮಾಡಿದ 324 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿದ ಪೈಕಿ ಕೋಲಾರ ಜಿಲ್ಲೆಗೆ 9 ಕೋಟಿ ರೂ.ಗಳನ್ನು ಬಿಡುಗಡೆ ಮಾಡಲಾಗಿದೆ. ಈಲ್ಲೆಯ 4 ಗ್ರಾಮಗಳಲ್ಲಿ ಖಾಸಗಿ ಬೋರವೆಲ್ ಮೂಲಕ ಬಾಡಿಗೆ ಆಧಾರದ ಮೇಲೆ ನೀರು ಪೂರೈಸಲಾಗುತ್ತಿದೆ ಎಂದು ತಿಳಿಸಿದರು.

# ರಾಜ್ಯ ಸರ್ಕಾರದಿಂದ ಹುತಾತ್ಮ ಯೋಧ ಪ್ರಾಂಜಲ್ ಕುಟುಂಬಕ್ಕೆ 50 ಲಕ್ಷ ರೂ. ಚೆಕ್ ಹಸ್ತಾಂತರ

ಬೆಂಗಳೂರು: ಜಮ್ಮು ಮತ್ತು ಕಾಶ್ಮೀರದ ರಜೌರಿಯಲ್ಲಿ ಉಗ್ರರರೊಂದಿಗೆ ನಡೆದ ಗುಂಡಿನ ಚಕಮಕಿಯಲ್ಲಿ ಹುತಾತ್ಮರಾದ ರಾಜ್ಯದ ಹೆಮ್ಮೆಯ ಕ್ಯಾಪ್ಟನ್ ಪ್ರಾಂಜಲ್ ಅವರ ಕುಟುಂಬಕ್ಕೆ ರಾಜ್ಯ ಸರ್ಕಾರ 50 ಲಕ್ಷ ರೂಪಾಯಿಗಳ ಚೆಕ್ ಅನ್ನು ಮಂಗಳವಾರ ಹಸ್ತಾಂತರಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹುತಾತ್ಮ ಯೋಧನ ಕುಟುಂಬಕ್ಕೆ 50 ಲಕ್ಷ ರೂಪಾಯಿಗಳ ಪರಿಹಾರ ಘೋಷಣೆ ಮಾಡಿದ ಬೆನ್ನಲ್ಲೇ, ಜಿಲ್ಲಾಧಿಕಾರಿ ದಯಾನಂದ್ ಅವರು ಇಂದು ಪ್ರಾಂಜಲ್ ಅವರ ನಿವಾಸಕ್ಕೆ ತೆರಳಿ ಕುಟುಂಬದ ಸದಸ್ಯರಿಗೆ 25 ಲಕ್ಷ ರೂಪಾಯಿ ಮೊತ್ತದ ಎರಡು ಚೆಕ್ ಗಳನ್ನು ನೀಡಿದರು.




ಈ ಸಂದರ್ಭದಲ್ಲಿ ಸೈನಿಕ ಕಲ್ಯಾಣ ನಿರ್ದೇಶಕರಾದ ಶಶಿಧರ್ ಅವರು ಉಪಸ್ಥಿತರಿದ್ದರು. ಮುಂದಿನ ದಿನಗಳಲ್ಲಿಯೂ ರಾಜ್ಯ ಸರ್ಕಾರ ನಿಮ್ಮ ಕುಟುಂಬದ ಜತೆ ಇರಲಿದೆ ಎಂದು ಭರವಸೆ ನೀಡಲಾಗಿದೆ.

ಈ ಬಗ್ಗೆ ಟ್ವೀಟ್ ಮಾಡಿರುವ ಸಿಎಂ ಸಿದ್ದರಾಮಯ್ಯ ಅವರು, ನಮ್ಮ ಸರ್ಕಾರ ಘೋಷಿಸಿದಂತೆ ಹುತಾತ್ಮ ಯೋಧ "ಕ್ಯಾಪ್ಟನ್ ಎಂ.ವಿ.ಪ್ರಾಂಜಲ್" ಅವರ ಕುಟುಂಬಕ್ಕೆ 50 ಲಕ್ಷ ರೂಪಾಯಿಗಳ ಪರಿಹಾರದ ಚೆಕ್ ಅನ್ನು ಹಸ್ತಾಂತರಿಸಲಾಗಿದೆ.

ಪ್ರಾಣವನ್ನು ಪಣಕ್ಕೆ ಇಟ್ಟು ದೇಶ ಕಾಯುವ ಯೋಧರ ಬಗ್ಗೆ ನಮಗೆ ಅಪಾರವಾದ ಗೌರವ–ಅಭಿಮಾನ ಇದೆ. ಅಷ್ಟೇ ಗೌರವ ಮತ್ತು ಕಾಳಜಿ ಯೋಧರ ಕುಟುಂಬ ವರ್ಗದ ಬಗ್ಗೆಯೂ ಇದೆ.

ಯೋಧರ ಸಾವು – ನೋವು ಮುಂದಿಟ್ಟುಕೊಂಡು ರಾಜಕಾರಣ ಮಾಡುವವರು ನಾವಲ್ಲ. ಕೆಲವರು ರಾಜಕೀಯ ದುರುದ್ದೇಶದಿಂದ ಸುಳ್ಳು ಸುದ್ದಿ ಸೃಷ್ಟಿಸಿ ಅಪಪ್ರಚಾರ ಮಾಡುವದರಲ್ಲಿಯೇ ವಿಕೃತ ಆನಂದ ಪಡುತ್ತಿದ್ದಾರೆ. ಅಂತಹವರಿಗೆ ದೇವರು ಸದ್ಬುದ್ಧಿ ನೀಡಲಿ ಎಂದಷ್ಟೇ ಹಾರೈಸಬಲ್ಲೆ ಎಂದು ಪೋಸ್ಟ್ ಮಾಡಿದ್ದಾರೆ.

**ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ,**
**ಗೋಕಾಕ–ಎ.ಪಿ.ಎಂ.ಸಿ. ರಸ್ತೆ, ಗೋಕಾಕ–591307**
ಇ–ಮೇಲ್:apmcgokak@rediffmail.com, apmcgokak@gmail.com
ದೂ:225036, 225269 ಫ್ಯಾಕ್ಸ: (08332) 225419

ಕ್ರಮಸಂಖ್ಯೆ/ಕೃ.ಉ.ಮಾ.ಸ./(ಗೋ)/612/2023–24 ದಿನಾಂಕ:04/12/2023

**: ಟೆಂಡರ ಪ್ರಕಟಣೆ :**

2023–24 ನೇ ಸಾಲಿನ ಜಿಲ್ಲಾ ಪಂಚಾಯತ ಕಾರ್ಯಕ್ರಮಗಳ ಗ್ರಾಮೀಣ ಮಾರುಕಟ್ಟೆ ಮೂಲಭೂತ ಸೌಕರ್ಯ ಯೋಜನೆಯಡಿ ಮಂಜೂರಾದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಗೋಕಾಕ ಮುಖ್ಯ ಮಾರುಕಟ್ಟೆ ಕಂಪೌಂಡ ಗೋಡೆ ನಿರ್ಮಾಣ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಅರ್ಹ ಗುತ್ತಿಗೆದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಪಾರದರ್ಶಕತೆ ಕಾಯ್ದೆ ಮೂಲಕ Standard Tender Document KW-1 ರನ್ವಯ ಸ್ಪರ್ಧಾತ್ಮಕ ಐಟಂವಾರು ಟೆಂಡರನ್ನು ಆಹ್ವಾನಿಸಲಾಗಿದೆ. ವಿವರ ಈ ಕೆಳಗಿನಂತಿದೆ. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ವಿಳಾಸ : http://kppp.karnataka .gov.in

ಕ್ರ.ಸಂ:1:ಕಾಮಗಾರಿಯ ವಿವರ:2023–24 ನೇ ಸಾಲಿನ ಜಿಲ್ಲಾ ಪಂಚಾಯತ ಯೋಜನೆಯಡಿಯಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಗೋಕಾಕ ಮುಖ್ಯ ಮಾರುಕಟ್ಟೆ ಕಂಪೌಂಡ ಗೋಡೆ ನಿರ್ಮಾಣ ಕಾಮಗಾರಿ., ಟೆಂಡರಗಿಟ್ ಮೊತ್ತ ಲಕ್ಷಗಳಲ್ಲಿ:8,43,189–64, ಇಎಂಡಿ ಮೊತ್ತ:21,500/– (ಇ–ಪೇಮಂಟ್) ,ಅವಧಿ: 2 ತಿಂಗಳು,ಗುತ್ತಿಗೆದಾರರ ಅರ್ಹತೆ:KW-1 CLUSE-3 & Class-III & Above PWD Contractor

**: ಟೆಂಡರ್ ಪ್ರಕ್ರಿಯೆ ವೇಳಾಪಟ್ಟಿ :**

1.ಅರ್ಜಿ ಪಡೆದುಕೊಳ್ಳುವ ದಿನಾಂಕ:15/12/2023 ರಿಂದ 29/12/2023 5.30 ರ ವರೆಗೆ. 2.ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ:30/12/2023 ಬೆಳ್ಳಿಗ್ಗೆ 11.00 ಘಂಟೆಗೆ. 3.ತಾಂತ್ರಿಕ & ಆರ್ಥಿಕ ಬಿಡ್ ತೆರೆಯುವ ದಿನಾಂಕ :04/01/2024 ಸಾಯಂಕಾಲ 4:00 ಗಂಟೆವರೆಗೆ.

ಇ–ಟೆಂಡರ್ ಪ್ರೋಸೆಸ್ಸಿಂಗ್ ಶುಲ್ಕ ಹಾಗೂ ಇಎಂಡಿ ಮೊತ್ತವನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ (ಕೆಪಿಪಿಪಿ) ಮೂಲಕ ಸಂದಾಯ ಮಾಡುವುದು ಮತ್ತು ಟೆಂಡರ್ ಷರತ್ತು–ವ–ನಿಬಂದನೆಗಳು ಹಾಗೂ ಹೆಚ್ಚಿನ ಮಾಹಿತಿಗಾಗಿ ರಜಾ ದಿನಗಳನ್ನು ಹೊರತುಪಡಿಸಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ (ಕೆಪಿಪಿಪಿ) ಸಹಾಯವಾಣಿ ಸಂಖ್ಯೆ:080–68948777 ಮತ್ತು ಕಾರ್ಯದರ್ಶಿ ಕೃ.ಉ.ಮಾ.ಸ ಗೋಕಾಕ ಸಹಾಯವಾಣಿ ಸಂಖ್ಯೆ : 08332–225419. ಇವರಿಂದ ಪಡೆಯಬಹುದಾಗಿದೆ, ಟೆಂಡರ್‌ಗಳನ್ನು ಯಾವುದೇ ಕಾರಣ ನೀಡದೇ ಸ್ವೀಕರಿಸುವ ಅಥವಾ ತಿರಸ್ಕರಿಸುವ ಹಕ್ಕನ್ನು ಸಮಿತಿಯು ಕಾಯ್ದಿರಿಕೊಂಡಿರುತ್ತದೆ.

**ಸಹಿ/–ಕಾರ್ಯದರ್ಶಿ**
**ಕೃಉಮಾಸ ಗೋಕಾಕ**

**ಸಹಿ/–ಆಡಳಿತಾಧಿಕಾರಿಗಳು**
**ಕೃಉಮಾಸ ಗೋಕಾಕ**

DIPR/BGM/RO-NO-697/KSMCA/2023-24

**ಪಟ್ಟಣ ಪಂಚಾಯತ ಕಾರ್ಯಾಲಯ,ಅಂಕಲಗಿ–ಅಕ್ಕತಂಗೇರಹಾಳ**
ತಾ ॥ ಗೋಕಾಕ ದೂರವಾಣಿ ನಂ–08332–262371 ಜಿ ॥ ಬೆಳಗಾವಿ

ನಂ:ಪ.ಪಂ.ಅ.ಅ.ಲೋ.ಇ:ಎಸ್.ಎಫ್.ಸಿ.: 2023–24 ದಿನಾಂಕ:05–12–2023

**–::ಇ–ಪ್ರೋಕ್ಯೂರಮೇಂಟ್ ಅಲ್ಪಾವಧಿ ಟೆಂಡರ ಪ್ರಕಟಣೆ::–**

ಪಟ್ಟಣ ಪಂಚಾಯತ ಅಂಕಲಗಿ–ಅಕ್ಕತಂಗೇರಹಾಳ ವ್ಯಾಪ್ತಿಯಲ್ಲಿ ಸನ್ 2022–23 ನೇ ಸಾಲಿನ ಎಸ್.ಎಫ್.ಸಿ ಮುಕ್ತನಿಧಿ (TSP & SCSP) ಅನುದಾನದಡಿ ಮತ್ತು 2022–23 ಮತ್ತು 2023–24 ನೇ ಸಾಲಿನ ಕುಡಿಯುವ ನೀರಿನ ಅನುದಾನದಡಿ ಅನುದಾನದಡಿ ಕಾಮಗಾರಿಗಳಿಗೆ, ಲೋಕೋಪಯೋಗಿ ಇಲಾಖೆ ಇಂಜಿನಿಯರಿಂಗ ವಿಭಾಗದಲ್ಲಿ ನೊಂದಾಯಿಸಲ್ಪಟ್ಟ ಅರ್ಹ ಸಿವ್ಹಿಲ ಗುತ್ತಿಗೆದಾರರಿಂದ ಕೆ.ಡಬ್ಲ್ಯೂ–1. ಪ್ರಕಾರ ಐಟಂವಾರು ಒಟ್ಟು–5 ಪ್ಯಾಕೇಜಗಳ ಕೆ.ಪಿ.ಪಿ.ಪಿ ಪೋರ್ಟಲ್ ಮುಖಾಂತರ ಟೆಂಡರ ಅಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ನಿಗಧಿಪಡಿಸಿದ ಟೆಂಡರ ದಾಖಲಾತಿಯನ್ನು ಕೆ.ಪಿ.ಪಿ.ಪಿ ಪೋರ್ಟಲ್ ನಿಂದ ನಿಗಧಿತ ಶುಲ್ಕ ಪಾವತಿಯೊಂದಿಗೆ ಡೌನ್ ಲೋಡ್ ಮಾಡಿಕೊಳ್ಳ ತಕ್ಕದ್ದು ಇ.ಎಂ.ಡಿ ಮೊತ್ತದೊಂದಿಗೆ ಭರ್ತಿ ಮಾಡಿದ ಟೆಂಡರುಗಳನ್ನು ದಿ:12–12–2023 ರ ಸಾಯಂಕಾಲ 5–30 ಘಂಟೆಯೊಳಗಾಗಿ ಕೆ.ಪಿ.ಪಿ.ಪಿ ಪೋರ್ಟಲ್‌ನಲ್ಲಿ ಸಲ್ಲಿಸತಕ್ಕದ್ದು. ಟೆಂಡರ ತೆರೆಯುವ, ದಿ:14–12–2023 ರಂದು ಮುಂಜಾನೆ 11 ಘಂಟೆಗೆ ತೆರೆಯಲಾಗುವುದು. ಕಾಮಗಾರಿಗಳ ಟೆಂಡರ್ ಪಡೆಯಲು ಬೇಕಾದ ಅರ್ಹತೆ ಹಾಗೂ ಇತರೆ ಷರತ್ತುಗಳನ್ನು ಟೆಂಡರ್ ಫಾರಂಗಳಲ್ಲಿ ವಿವರವಾಗಿ ನಮೂದಿಸಲಾಗಿದೆ. ವಿವರವಾದ ಟೆಂಡರ ಪ್ರಕಟಣೆಯನ್ನು ಗುತ್ತಿಗೆದಾರರು ಈ ಕೆಳಗೆ ಸಹಿ ಮಾಡಿದವರ ಕಛೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದಾಗಿದೆ.ಹಾಗೂ ಕಛೇರಿ ದೂರವಾಣಿ ನಂ–08332–262371 ರಿಂದ ಮಾಹಿತಿ ಪಡೆಯಬಹುದು ಮತ್ತು ಅಂತರ್ಜಾಲದ ಮೂಲಕ ವೆಬ್‌ಸೈಟ್ ಕಾಮಗಾರಿ ವಿವರ ಹಾಗೂ ಶರತ್ತುಗಳು www.kppp.karnataka.gov.in ಅಥವಾ ಈ ಕಛೇರಿ website:www.ankalagi-akkatangerahal.town.mrc.gov.in ಇದರಲ್ಲಿ ಪಡೆಯಬಹುದು.

**ಸಹಿ/–ಮುಖ್ಯಾಧಿಕಾರಿಗಳು**
**ಪಟ್ಟಣ ಪಂಚಾಯತ**
**ಅಂಕಲಗಿ ಅಕ್ಕತಂಗೇರಹಾಳ**

**ಸಹಿ/–ಆಡಳಿತಾಧಿಕಾರಿಗಳು**
**ಪಟ್ಟಣ ಪಂಚಾಯತ**
**ಅಂಕಲಗಿ ಅಕ್ಕತಂಗೇರಹಾಳ**

DIPR/BGM/RO-NO-685/KSMCA/2023-24

**ADV. RAJENDRA D. TAMBE**

**: PUBLIC NOTICE :**

**IN THE COURT OF HON'BLE CIVIL JUDGE SENIOR DIVISION, BELAPUR**

**MISC. APPLICATION NO. 1842 OF 2023**
**Exhibit -**

**1. Smt. PRAMILA RAMDAS BHAT )**
aged 73 years, an adult Indian Inhabitant )
Presently residing outside Maharashtra at )
Flat 302, Janardhana Enclave, LIC back lane)
Ajjarkad, Brahmagiri, Udupi- 576101 )
Udupi district, Karnataka )
**AND**
having Permanent Residence address at )
B-312, Om Rachana CHS, )
Near Apna Bazar, Sector-17, Vashi, )
Navi Mumbai- 400703, )
Taluka& District- Thane )
**2. Mr. PRASANNA KUMAR RAMDAS BHAT)**
Aged 44 years, an adult Indian inhabitant )
Presently residing overseas/Abroad - )
at Crown Building KSCC, Building 170, )
3rd Shuwaikh Industrial Area, Block B )
Near Sultan Centre wholesale, Kuwait )
**AND**
having Permanent Residence add. in India at)
B-701, Gundecha Heights CHS, LBS Marg, )
Kanjurmarg (West), Mumbai- 400078. )
Mob. No. )
Email.I.D- )

**.. APPLICANT**

WHEREAS LATE. SHRI. RAMDAS MADHAV BHAT, the inhabitant of Navi Mumbai as well as Mangaluru, expired on 11/10/2022 due to old age at his native place Village at- Kayyuru, Delnthabettu, Mangaluru, Dakshina Kannada, Karnataka and whereas the Applicant No. 1 is a wife, and Applicant No. 2 is a sons of LATE. SHRI. RAMDAS MADHAV BHAT, has presented an application before Hon'ble Civil Court Senior Division, Belapur, District- Thane, State – Maharashtra for the purpose of being formally recognized as heir of the deceased LATE. SHRI. RAMDAS MADHAV BHAT in respect of property left by the deceased which is situated at Mangaluru, Karnataka more particularly described as under,

**SCHEDULE OF THE PROPERTY**

Bank account under Seniors Citizens Savings Scheme bearing Account No. SCSS217100046 is also stands in the name of said deceased Late Shri. RAMDAS MADHAV BHAT in Canara Bank, Kadialbail, Mangalore and the total available balance in the said account is Rs.5,25,000/- and interest thereon is of Rs.2,25,997, which is totally amounting to Rs.7,50,997/- (Rupees Seven Lacs Fifty Thousand Nine Hundred and Ninety Seven Only).

The members of the public at large are hereby given notice to concern person who have an objection to declare the Applicants as the legal heirs of the deceased to appear before the Hon'ble Civil Judge Senior Division, Belapur in person or by pleader duly instructed and to file Say / Objections if any with corroborative proof / evidence within 30 days from the date of publication of the public notice, failing which the said application will be held presuming that there is no objection from anybody and the application will be finally decided.

Dated at 5th this December day of 2023

**Assistant Superintendent,**
**Of Civil Court Senior**
**Division, Belapur,**

# ಬಿಜೆಪಿ ಮುಖಂಡನಿಗೆ ಚಾಕು ಇರಿತ ಕೇಸ್: ಎಂಎಲ್‌ಸಿ ಚೆನ್ನರಾಜ್ ಹಟ್ಟಿಹೊಳಿ ವಿರುದ್ಧ ಎಫ್‌ಐಆರ್ ದಾಖಲು

ಬೆಳಗಾವಿ: ಬಿಜೆಪಿ ಕಾರ್ಯಕರ್ತ ಪೃಥ್ವಿ ಸಿಂಗ್ಗೆ ಚಾಕು ಇರಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸಹೋದರ ಚೆನ್ನರಾಜ್ ಹಟ್ಟಿಹೊಳಿ ವಿರುದ್ಧ ಬೆಳಗಾವಿ ಎಪಿಎಂಸಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಬಿಜೆಪಿ ಮುಖಂಡ ಪೃಥ್ವಿರಾಜ್ ಪುತ್ರ ಕೊಟ್ಟ ದೂರಿನ ಮೇರೆಗೆ ಚೆನ್ನರಾಜ್ ಹಟ್ಟಿಹೊಳಿ ಅವರ ಮೇಲೆ ಎಫ್‌ಐಆರ್ ದಾಖಲಾಗಿದೆ. ತಂದೆ ಪೃಥ್ವಿ ಸಿಂಗ್ ಪರವಾಗಿ ಮಗ ಜಸ್ವಿರ್ ಸಿಂಗ್, ಬೆಳಗಾವಿಯ ಎಪಿಎಂಸಿ ಠಾಣೆಗೆ ದೂರು ನೀಡಿದ್ದಾರೆ. ಕಾಂಗ್ರೆಸ್ ವಿಧಾನ ಪರಿಷತ್ ಸದಸ್ಯ ಚೆನ್ನರಾಜ್ ಹಟ್ಟಿಹೊಳಿ, ಸುಜೀತ್ ಜಾಧವ್, ಇಬ್ಬರು ಗನ್ ಮ್ಯಾನ್, ಸದ್ದಾಂ ಎನ್ನುವವರ ವಿರುದ್ಧ ಕೊಲೆ ಯತ್ನ, ಜಾತಿ ನಿಂದನೆ, ಜೀವ ಬೆದರಿಕೆ ಹಾಕಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖ ಮಾಡಲಾಗಿದೆ. ಐಪಿಸಿ ಸೆಕ್ಷನ್ 1860(U/s 143, 147, 148, 323, 324, 379, 504, 506), ಅಟ್ರಾಸಿಟಿ ಕೇಸ್, ಐಪಿಸಿ ಸೆಕ್ಷನ್ **1989(u/s-3(1), (r)(s), 3(2)(v-a), IPC 1860(u/s-149**ರಡಿ ಕೇಸ್ ದಾಖಲಾಗಿದೆ.

ಏನಿದು ಪ್ರಕರಣ? ಮಾಜಿ ಸಚಿವ ರಮೇಶ್ ಜಾರಕಿಹೊಳಿ ಅತ್ಯಾಪ್ತ ಪೃಥ್ವಿ ಸಿಂಗ್ (55) ಅವರಿಗೆ ಜಯ ನಗರದಲ್ಲಿ ಚಾಕುವಿನಿಂದ ಇರಿಯಲಾಗಿತ್ತು. ಕಾಂಗ್ರೆಸ್ ಎಂಎಲ್ಸಿ ಚೆನ್ನರಾಜ ಹಟ್ಟಿಹೊಳಿ ಆಪ್ತರೇ ಚಾಕುವಿನಿಂದ ಇರಿದು ಹಲ್ಲೆ ನಡೆಸಿದ್ದಾರೆ



ಎಂಬ ಆರೋಪ ಕೇಳಿ ಬಂದಿತ್ತು. ಅಲ್ಲದೇ ಇದರ ಹಿಂದೆ ಚೆನ್ನರಾಜ ಹಟ್ಟಿಹೊಳಿ ಕೈವಾಡ ಇದೆ ಎಂಬ ಮಾತುಗಳು ಕೇಳಿ ಬಂದಿದ್ದವು. ಸದ್ಯ ಪೃಥ್ವಿ ಸಿಂಗ್ ಕೆಎಲ್‌ಇ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ದೂರಿನಲ್ಲಿ ಏನಿದೆ..? 2018ರ ಚುನಾವಣೆಯಲ್ಲಿ ಜಯನಗರದ ನಮ್ಮ ಮನೆಯನ್ನ ಚುನಾವಣೆ ಕೆಲಸಕ್ಕೆ ತೆಗೆದುಕೊಂಡಿದ್ದರು. 10 ಲಕ್ಷ ರೂಪಾಯಿಗೆ ಮನೆಯನ್ನು ಲೀಸ್ ಗೆ ಕರಾರು ಮಾಡಲಾಗಿತ್ತು. ಲೀಸ್ ಆಗಿದ್ದ ಕರಾರಿನ ಪ್ರಕಾರ ಅವರು ನಡೆದುಕೊಂಡಿಲ್ಲ. ಬಿಜೆಪಿ ಸೇರಿದ ಮೇಲೆ ರಾಜ್ಯ ಎಸ್ಸಿ ಮೋರ್ಚಾಗೆ ಅವಿರೋಧ ಆಯ್ಕೆಯಾದೆ. ಆಗ ಲಕ್ಷ್ಮೀ ಹೆಬ್ಬಾಳ್ಕರ್ ಮತ್ತು ನಮ್ಮ ನಡುವಿನ ಸಂಬಂಧ ಸರಿಯಾಗಿ ಉಳಿಯಲಿಲ್ಲ. ಬಿಜೆಪಿ ಸೇರಿದ ಮೇಲೆ ಕೆಲವು ಮೊಬೈಲ್ ಸಂಖ್ಯೆಯಿಂದ ನನಗೆ ಬೆದರಿಕೆ ಬರಲು ಶುರುವಾದವು. 16/02/21 ರಂದು ಈ ಬಗ್ಗೆ ನಗರ ಪೊಲೀಸ್ ಆಯುಕ್ತರಿಗೆ ದೂರು ಕೂಡ ಕೊಟ್ಟಿದ್ದೆ. ಡಿಸೆಂಬರ್ 04 ರಂದು ಚೆನ್ನರಾಜ ಬಂದು ಅವಾಚ್ಯ ಶಬ್ಧಗಳಿಂದ ನಿಂದಿಸಿದರು. ನನ್ನ ಬಳಿಯಿರುವ ಮೊಬೈಲ್ ಕಸಿದುಕೊಂಡು ಚೆನ್ನರಾಜ ಅವಾಚ್ಯ ಶಬ್ಧಗಳಿಂದ ಬೈದರು. ಆಷ್ಟೊತ್ತಿಗೆ ನೂಕಾಟ ತಳ್ಳಾಟ ಪ್ರಾರಂಭವಾಯ್ತು, ಅಗ ಸುಜೀತ್ ನನ್ನ ಹಿಡಿದುಕೊಂಡ ನನ್ನ ಮೇಲೆ ಹಲ್ಲೆ ಮಾಡಿದ. ಚನ್ನರಾಜ ಹಟ್ಟಿಹೊಳಿ ಇದಕ್ಕೆ ಪ್ರೋತ್ಸಾಹ ನೀಡಿದರು ಅಂತಾ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

# ಪೃಥ್ವಿ ಸಿಂಗ್ ಗೆ ಚಾಕು ಇರಿತ ಪ್ರಕರಣ; ಗಾಳಿಯಲ್ಲಿ ಗುಂಡು ಹೊಡೆಯುವುದು ಬೇಡ ಎಂದ ಶಾಸಕ ರಮೇಶ ಜಾರಕಿಹೊಳಿ



ಬೆಳಗಾವಿ: ಬೆಳಗಾವಿಯಲ್ಲಿ ಬಿಜೆಪಿ ಮುಖಂಡ ಪೃಥ್ವಿ ಸಿಂಗ್ ಚಾಕು ಇರಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಶಾಸಕ ರಮೇಶ್ ಜಾರಕಿಹೊಳಿ ಬೆಳಗಾವಿಯ ಕೆಎಲ್‌ಇ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಪೃಥ್ವಿಸಿಂಗೆ ಭೇಟಿಯಾಗಿ ಆರೋಗ್ಯ ವಿಚಾರಿಸಿದರು. ಬೆಳಗಾವಿಯ ಏಐಇ ಆಸ್ಪತ್ರೆಗೆ ಭೇಟಿ ನೀಡಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗಾಳಿಯಲ್ಲಿ ಗುಂಡು ಹೊಡೆಯುವುದು ಬೇಡ. ನಿಜವಾಗಿ ಅನ್ಯಾಯ ಆಗಿದ್ದರೆ ನಿನ್ನ ಜೊತೆಗೆ ನಿಲ್ಲುತ್ತೇವೆ ಅಂತ ಹೇಳಿದ್ದೀನಿ. ಘಟನೆಗೆ ಸಂಬಂಧಿಸಿದಂತೆ ಇವರಿಗೂ ದೂರು ದಾಖಲಾಗಿಲ್ಲ. ಘಟನೆ ಬಗ್ಗೆ ಪೊಲೀಸರು ತನಿಖೆ ಮಾಡದಿದ್ದರೆ ಸಿಬಿಐಗೆ ಹೋಗುತ್ತೇವೆ ಎಂದರು. ಪ್ರಧಾನಿ ವಿರುದ್ಧ ಆರೋಪ ಮಾಡಿದರು ಕೂಡ ಎಫ್‌ಐಆರ್ ದಾಖಲಿಸಬೇಕು. ಬೆಂಗಳೂರಿನ ದೊಡ್ಡ ಅಧಿಕಾರಿ ಪೊಲೀಸರ ಮೇಲೆ ಒತ್ತಡ ಹಾಕಿದ್ದಾರೆ. ಬೆಳಗಾವಿ ಸುತ್ತ ಮುತ್ತ ಬಹಳಷ್ಟು ಲ್ಯಾಂಡ್ ಮಾಫಿಯಾ ಕೆಲಸ ಮಾಡುತ್ತಿದೆ. ಕೋತ್ವಾಲ್ ಶಿಷ್ಯರು ರಾಜ್ಯದಲ್ಲಿರುವಾಗ ಕಾನೂನು ಸುವ್ಯವಸ್ಥೆ ಹಾಳಾಗಿದೆ. ಹೈದರಾಬಾದ್ ನಲ್ಲಿ ಕುಳಿತು ಪೊಲೀಸರ ಮೇಲೆ ಒತ್ತಡ ಹಾಕುತ್ತಿದ್ದಾರೆ ಎಂದು ಡಿಕೆ ವಿರುದ್ಧ ಶಾಸಕ ರಮೇಶ್ ಜಾರಕಿಹೊಳಿ ಪರೋಕ್ಷವಾಗಿ ವಾಗ್ದಾಳಿ ನಡೆಸಿದರು.

## ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆದಿಂದ ಮಹಿಳಾ ಜ್ಞಾನವಿಕಾಸ ಕಾರ್ಯಕ್ರಮ

# ಮಹಿಳಾ ಸಬಲೀಕರಣಕ್ಕೆ ಜ್ಞಾನವಿಕಾಸ ಸಹಕಾರಿ: ವಿದ್ಯಾವತಿ ಭಜಂತ್ರಿ

ಬೆಳಗಾವಿ: ಜ್ಞಾನವಿಕಾಸ ಕಾರ್ಯಕ್ರಮದಿಂದ ಮಹಿಳೆಯರು ಸಬಲೀಕರಣ ಆಗುತ್ತಿರುವುದು ಸಂತೋಷ ತಂದಿದೆ.

ಮನೆಯೊಳಗಿದ್ದ ಮಹಿಳೆಯರು ಸಮಾಜದಲ್ಲಿ ಸ್ವಾವಲಂಬಿಯಾಗಿ ಜೀವಿಸಲು, ಧೈರ್ಯದಿಂದ ಮಾತನಾಡಲು ಸಹಾಯವಾಗಿದೆ ಎಂದು ಕನ್ನಡ ಸಂಸ್ಕೃತಿ ಇಲಾಖೆ ಉಪನಿರ್ದೇಶಕರಾದ ವಿದ್ಯಾವತಿ ಭಜಂತ್ರಿ ಹೇಳಿದರು.

ತಾಲೂಕಿನ ಮಚ್ಚೆ ಗ್ರಾಮದ ಸಪ್ತಪದಿ ಮಂಗಳ ಕಾರ್ಯಾಲಯದಲ್ಲಿ ಶ್ರೀ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಆಯೋಜಿಸಲಾದ ಮಹಿಳಾ ಜ್ಞಾನವಿಕಾಸ ಕಾರ್ಯಕ್ರಮದಡಿಯಲ್ಲಿ ತಾಲೂಕ ಮಟ್ಟದ ಮಹಿಳಾ



ವಿಚಾರಗೋಷ್ಠಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು,


ಮಹಿಳೆಯರನ್ನು ಸಮಾಜದ ಮುಖ್ಯ ವಾಹಿನಿಗೆ ತರುವಲ್ಲಿ ಮಹತ್ವದ ಪಾತ್ರ ವಹಿಸಿದ್ದು, ಸ್ವ–ಉದ್ಯೋಗ ಮೂಲಕ ಹಣ ಸಂಪಾದನೆ ಮಾಡಿ, ಬೆಳೆದು ಕುಟುಂಬಕ್ಕೆ ಕಣ್ಣಾಗಿ ನಿಲ್ಲುತ್ತಿದ್ದಾರೆ. ಯೋಜನೆಯ ಕಾರ್ಯಕ್ರಮಗಳು ಮಹಿಳಾ ಸಬಲೀಕರಣಕ್ಕೆ ಸಹಕಾರಿಯಾಗಿದ್ದು ಪೂಜ್ಯರ ಕಾರ್ಯಕ್ರಮಗಳು ಅತ್ಯುತ್ತಮ ವಾಗಿವೆ ಎಂದು ತಿಳಿಸಿದರು.

ಸಾಧಕರಿಗೆ ಸನ್ಮಾನ ನವಚೇತನ ಕಾರ್ಯಕ್ರಮದ ಫಲಾನುಭವಿಯವರಿಗೆ ಸೌಲಭ್ಯಗಳ ವಿತರಣೆ ಮಾಡಲಾಯಿತು ಸದಸ್ಯ ರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಧಾರವಾಡ ಪ್ರಾದೇಶಿಕ ವಿಭಾಗದ ಪ್ರಾದೇಶಿಕ ನಿರ್ದೇಶಕ ವಸಂತ ಸಾಲ್ಯಾನ ಮಾತನಾಡಿ, ಯೋಜನೆಯ ಕಾರ್ಯಕ್ರಗಳು ಹಾಗೂ ಜ್ಞಾನ ವಿಕಾಸ ಕಾರ್ಯಕ್ರಮದ ವೈಶಿಷ್ಟ್ಯ ಗಳ ಬಗ್ಗೆ ಸಮಗ್ರ ಮಾಹಿತಿ ತಿಳಿಸಿದರು.

ಈ ಸಂದರ್ಭದಲ್ಲಿ ಶೋಭಾ ಸೋಮನಾಚೆ, ಪಿಎಸ್‌ಐ ಶ್ವೇತಾ ಆರ್. ಎನ್, ಶಿಕ್ಷಕಿ ಸುನೀತಾದೇವಿ ಕಸಗುಂಡಿ, ಡಾ. ವಿದ್ಯಾ ಪಾಟೀಲ, ಜಯಶ್ರೀ, ಜಿಲ್ಲಾ ನಿರ್ದೇಶಕ ಸತೀಶ ನಾಯ್ಕ, ಜ್ಯೋತಿ ಜೋಳದ, ಜ್ಞಾನ ವಿಕಾಸ ಕಾರ್ಯಕ್ರಮ ದ ಪ್ರಾದೇಶಿಕ ವಿಭಾಗದ ಯೋಜನಾಧಿಕಾರಿ ಮಲ್ಲಿಕಾ ಹಾಗೂ ಇತರರು ಇದ್ದರು.

# ನನ್ನ ಆನೆಯನ್ನ ಬದುಕಿಸಿಕೊಡಿ, ಇಲ್ಲವೇ ಅರ್ಜುನನ ಜೊತೆ ನಮ್ಮನ್ನೂ ಮಣ್ಣು ಮಾಡಿ: ಮಾವುತನ ಗೋಳಾಟ



ಹಾಸನ: ಕಾಡಾನೆ ಕಾರ್ಯಾಚರಣೆ ವೇಳೆ ಕಾದಾಟದಲ್ಲಿ ಮೃತಪಟ್ಟ ಅರ್ಜುನ ಆನೆಯನ್ನ ನೆನೆದು ಮಾವುತ ವಿನು ಕಣ್ಣೀರಿಟ್ಟಿದ್ದಾರೆ. ಅಂತಿಮ ದರ್ಶನದ ವೇಳೆ ಮಾವುತ ವಿನು ಅರ್ಜುನ ಆನೆಯನ್ನ ನೆನೆದು ಬಿಕ್ಕಿ ಬಿಕ್ಕಿ ಅತ್ತಿದ್ದು, ನನ್ನ ಆನೆಯನ್ನ ಬದುಕಿಸಿಕೊಡಿ. ಇಲ್ಲದಿದ್ದರೇ ನನ್ನನ್ನೂ ಅರ್ಜುನನ ಜೊತೆ ಮಣ್ಣು ಮಾಡಿ ಎಂದು ಗೋಳಾಡಿದ್ದಾರೆ. ಅರ್ಜುನನ ಸೊಂಡಿಲನ್ನು ತಬ್ಬಿಕೊಂಡು ನನ್ನ ಆನೆಯನ್ನು ಬದುಕಿಸಿಕೊಡಿ. ನನ್ನ ಆನೆಯನ್ನು ಮೈಸೂರಿಗೆ ಕಳುಹಿಸಿಕೊಡಿ. ಇಲ್ಲವೇ ನನ್ನನ್ನು ಹಾಗೂ ನನ್ನ ಕುಟುಂಬವನ್ನು ಅರ್ಜುನನ ಜೊತೆ ಮಣ್ಣು ಮಾಡಿ. ಅರ್ಜುನ ಸತ್ತಿಲ್ಲ ಎಂದು ನನ್ನ ಹೆಂಡತಿ ಮಕ್ಕಳಿಗೆ ಹೇಳಿದ್ದೇನೆ. ಅರ್ಜುನನನ್ನು ನನ್ನ ಜೊತೆ ಕಳುಹಿಸಿಕೊಡಿ ಎಂದು ಮಾವುತ ಅರ್ಜುನನ ಎದುರು ರೋಧಿಸಿದ್ದಾರೆ. ವಿನು ಅವರು ಅರ್ಜುನನ ಜೊತೆ ಅವಿನಾಭಾವ ಸಂಬಂಧ ಹೊಂದಿದ್ದರು. ಇದೀಗ ಅರ್ಜುನನ ಸಾವಿನ ನೋವನ್ನು ಅರಗಿಸಿಕೊಳ್ಳಲಾಗದೆ ರೋಧಿಸುತ್ತಿದ್ದಾರೆ. ಮಂಗಳವಾರ ಅರ್ಜುನನ ಸಾವಿನ ಸುದ್ದಿ ಕೇಳಿ ಕುಸಿದು ಬಿದ್ದಿದ್ದರು. ಬಳಿಕ ಅರಣ್ಯ ಇಲಾಖೆ ಸಿಬ್ಬಂದಿ ಅಂಬುಲೆನ್ಸ್ ನಲ್ಲಿ ಆಸ್ಪತ್ರೆಗೆ ದಾಖಲಿಸಿದ್ದರು. ಇಂದು ಚೇತರಿಸಿಕೊಂಡು ಬಂದಿದ್ದ ವಿನು ಅವರು ತನ್ನ ಪ್ರೀತಿಯ ಅರ್ಜುನನ್ನು ಕಂಡು ಬಿಕ್ಕಳಿಸಿ ಬಿಕ್ಕಳಿಸಿ ಅತ್ತಿದ್ದಾರೆ.

## ಯಶಸ್ವಿನಿ ಯೋಜನೆಯ ಮಾನದಂಡಗಳ ಬದಲಾವಣೆಗೆ ಪರಿಶೀಲನೆ

ಬೆಳಗಾವಿ ಸುವರ್ಣವಿಧಾನಸೌಧ: ಯಶಸ್ವಿನಿ ಯೋಜನೆ ಅನುಷ್ಠಾನದ ಉದ್ದೇದಿಂದ ಅವಶ್ಯಕತೆ ಕಂಡು ಬಂದಲ್ಲಿ ನಿಗದಿಪಡಿಸಿದ ಮಾನದಂಡಗಳನ್ನು ಬದಲಾಯಿಸಲು ಪರಿಶೀಲಿಸಲಾಗುವುದು ಎಂದು ಸಹಕಾರ ಸಚಿವರಾದ ಕೆ.ಎನ್.ರಾಜಣ್ಣ ಅವರು ಹೇಳಿದರು. ವಿಧಾನ ಪರಿಷತ್ತಿನ ಸದಸ್ಯರಾದ ಸಿ.ಎನ್.ಮಂಜೇಗೌಡ ಅವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, 2022–23ನೇ ಸಾಲಿನ ಆಯವ್ಯಯದಲ್ಲಿ ಪರಿಷ್ಕೃತ ಯಶಸ್ವಿನಿ ಯೋಜನೆಯನ್ನು ಘೋಷಿಸಲಾಗಿದೆ.ಅದರಂತೆ ಸದಸ್ಯರ ನೋಂದಣಿಯನ್ನು 2022ರ ನವೆಂಬರ್ 1ರಿಂದ ಪ್ರಾರಂಭಿಸಿದ್ದು ನೋಂದಾಯಿಸಿದ ಸದಸ್ಯರಿಗೆ ನೆಟ್ ವರ್ಕ್ ಆಸ್ಪತೆಗಳಲ್ಲಿ 2023ರ ಜನವರಿ 1 ರಿಂದ 2024ರ ಮಾರ್ಚ 31ರವರೆಗೆ ಚಿಕಿತ್ಸಾ ಸೌಲಭ್ಯ ಕಲ್ಪಿಸಲಾಗಿದೆ ಎಂದು ತಿಳಿಸಿದರು. ಈಗಿನ ಪರಿಷ್ಕೃತ ಯಶಸ್ವಿನಿ ಯೋಜನೆಯಡಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳು ಸೇರಿದಂತೆ ರಾಜ್ಯದ ಎಲ್ಲಾ ಜಿಲ್ಲೆಗಳ ನೆಟ್‌ವರ್ಕ್ ಆಸ್ಪತ್ರೆಗಳಿಗೆ ಚಿಕಿತ್ಸಾ ವೆಚ್ಚವನ್ನು ನಿಗದಿತವಾಗಿ ಪಾವತಿಸುತ್ತ ಬಂದಿದ್ದು ಜನವರಿ 2023ರಿಂದ ಆಗಸ್ಟ್ 2023ರವರೆಗೆ 8 ಕಂತುಗಳಲ್ಲಿ 39 ಕೋಟಿ ರೂ ಮೊತ್ತವನ್ನು ಪಾವತಿಸಲಾಗಿದೆ ಎಂದು ಸಚಿವರು ಇದೆ ವೇಳೆ ಉತ್ತರಿಸಿದರು.

## ಬಿಜೆಪಿ ಟಿಕೆಟ್ ವಂಚನೆ ಪ್ರಕರಣ: ಚೈತ್ರಾ ಸೇರಿ ಇಬ್ಬರಿಗೆ ಜಾಮೀನು ಮಂಜೂರು



ಬೆಂಗಳೂರು: ಉದ್ಯಮಿಯೊಬ್ಬರಿಗೆ ಬಿಜೆಪಿ ಟಿಕೆಟ್ ಕೊಡಿಸುವುದಾಗಿ ಭರವಸೆ ನೀಡಿ 5 ಕೋಟಿ ರೂಪಾಯಿ ಪಡೆದು ವಂಚಿಸಿದ ಪ್ರಕರಣ ಸಂಬಂಧ ಬಂಧನಕ್ಕೊಳಗಾಗಿರುವ ಬಲಪಂಥೀಯ ಕಾರ್ಯಕರ್ತೆ ಚೈತ್ರಾ ಹಾಗೂ ಮತ್ತೊಬ್ಬ ಆರೋಪಿ ಶ್ರೀಕಾಂತ್‌ಗೆ ಸೋಮವಾರ ನ್ಯಾಯಾಲಯ ಜಾಮೀನು ಮಂಜೂರು ಮಾಡಿದೆ. ಜಾಮೀನು ಅರ್ಜಿಯ ವಿಚಾರಣೆ ನಡೆಸಿದ ಹೆಚ್ಚುವರಿ ಮುಖ್ಯ ಮೆಟ್ರೋಪಾಲಿಟನ್ ಮ್ಯಾಜಿಸ್ಟ್ರೇಟ್ ಕೋರ್ಟ್, ಈ ಇಬ್ಬರಿಗೆ ಜಾಮೀನು ನೀಡಿದೆ. ಪರಪ್ಪನ ಅಗ್ರಹಾರ ಕಾರಾಗೃಹದಿಂದ ಚೈತ್ರಾ ಹಾಗೂ ಶ್ರೀಕಾಂತ್ ಬಿಡುಗಡೆಯಾಗಲಿದ್ದಾರೆ.

ವಿಧಾನಸಭೆ ಚುನಾವಣೆಯಲ್ಲಿ ಬೈಂದೂರು ಕ್ಷೇತ್ರದಿಂದ ಸ್ಪರ್ಧಿಸಲು ಬಿಜೆಪಿ ಟಿಕೆಟ್ ಕೊಡಿಸುವುದಾಗಿ ಗೋವಿಂದ ಬಾಬು ಪೂಜಾರಿ ಅವರಿಗೆ ಭರವಸೆ ನೀಡಿ, ಹಣ ಪಡೆದು ವಂಚಿಸಿದ ಆರೋಪದ ಮೇಲೆ ಚೈತ್ರಾ ಮತ್ತು ಇತರ ಎಂಟು ಮಂದಿಯನ್ನು ಕೇಂದ್ರ ಅಪರಾಧ ವಿಭಾಗದ ಪೊಲೀಸರು ಬಂಧಿಸಿದ್ದರು. ವಂಚನೆ ಸಂಬಂಧ ಉದ್ಯಮಿ ಗೋವಿಂದಬಾಬು ಪೂಜಾರಿ ಸೆ.8ರಂದು ಬಂಡೇಪಾಳ್ಯ ಠಾಣೆಯಲ್ಲಿ ಚೈತ್ರಾ ಮತ್ತು ಇತರೆ ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಿದ್ದರು. ಹೆಚ್ಚಿನ ತನಿಖೆಗಾಗಿ ಪ್ರಕರಣ ಸಿಸಿಬಿಗೆ ವರ್ಗಾವಣೆ ಆಗಿತ್ತು. ಬಳಿಕ ಕ್ಷಿಪ್ರ ಕಾರ್ಯಾಚರಣೆ ನಡೆಸಿದ ಸಿಸಿಬಿ ಪೊಲೀಸರು, ಚೈತ್ರಾ, ಗಗನ್ ಕಡೂರು, ಹೊಸಪೇಟೆಯ ಸ್ವಾಮೀಜಿ ಹಾಲಶ್ರೀ, ಚನ್ನನಾಯ್ಕ, ಧನರಾಜ್, ಶ್ರೀಕಾಂತ್, ಪ್ರಜ್ವಲ್ ಸೇರಿ 8 ಮಂದಿಯನ್ನು ಬಂಧಿಸಲಾಗಿತ್ತು.

# ಎಐಯುಟಿಯುಸಿ ಬೃಹತ್ ಪ್ರತಿಭಟನೆ

ಬೆಳಗಾವಿ: ಎಐಯುಟಿಯುಸಿ ಕೇಂದ್ರ ಕಾರ್ಮಿಕ ಸಂಘಟನೆಗೆ ಸೇರಿದ ಕರ್ನಾಟಕ ರಾಜ್ಯ ಸಂಯುಕ್ತ ಅಕ್ಷರ ದಾಸೋಹ ಕಾರ್ಮಿಕರ ಸಂಘದ ರಾಜ್ಯ ಸಮಿತಿ ವತಿಯಿಂದ ವಿವಿಧ ಸರಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿ ಅಡುಗೆ ಮಾಡುತ್ತಿರುವ ಅಡುಗೆ ಸಿಬ್ಬಂದಿಗಳನ್ನು ರಾಜ್ಯ ಸರ್ಕಾರದ ಕನಿಷ್ಠ ವೇತನ ಕಾಯ್ದೆಯ ಶೆಡ್ಯೂಲ್ ಗೆ ಒಳಪಡಿಸಿ ಕನಿಷ್ಠ ವೇತನ, ಇಎಸ್‌ಐ, ಪಿಎಫ್ ಒದಗಿಸಲು, ಬೆಲೆಯೇರಿಕೆಗೆ ತಕ್ಕಂತೆ ವೇತನ ಹೆಚ್ಚಳ ಮಾಡಲು ಹಾಗೂ ಇನ್ನಿತರ ಬೇಡಿಕೆಗಳನ್ನು ಈಡೇರಿಸಲು ಆಗ್ರಹಿಸಿ ಇಂದು ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಸುವರ್ಣಸೌಧದ ಮುಂದೆ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ರಾಜ್ಯ ಅಧ್ಯಕ್ಷೆ ಶಾಂತಾ.ಎ ರವರು, ನಮ್ಮ ರಾಜ್ಯದಲ್ಲಿ ಬಿಸಿಯೂಟ ಯೋಜನೆಯಲ್ಲಿ ಕೆಲಸ ಮಾಡುತ್ತಿರುವ ಮುಖ್ಯ ಅಡುಗೆಯವರು ಹುದ್ದೆಯಲ್ಲಿ 47,250 ಮತ್ತು ಅಡುಗೆ ಸಹಾಯಕರಾಗಿ 71,336 ಪ್ರಸ್ತುತ ಒಟ್ಟಾರೆ 1,18,586 ಅಡುಗೆ ತಯಾರಕರು ಶಾಲೆಗಳಲ್ಲಿ




ಕೆಲಸ ಮಾಡುತ್ತಿದ್ದಾರೆ. ರಾಜ್ಯದ ಕಾರ್ಮಿಕ ಇಲಾಖೆ ಎಲ್ಲಾ ದುಡಿಯುವ ಕಾರ್ಮಿಕರಿಗೆ ಕನಿಷ್ಠ ವೇತನ ನಿಗದಿ ಕಾಯ್ದೆಯನ್ನು ಜಾರಿಗೊಳಿಸಿದ್ದು, ಅದರಂತೆ ಸರ್ಕಾರಿ ಹಾಸ್ಟೆಲ್‌ಗಳಲ್ಲಿ, ಮದುವೆ ಛತ್ರಗಳಲ್ಲಿ, ಹೋಟೆಲ್ ಗಳಲ್ಲಿ ಕೆಲಸ ಮಾಡುವ ಅಡುಗೆಯವರಿಗೆ ಮತ್ತು ಸಹಾಯಕರಿಗೂ ವೇತನ ನಿಗದಿಗೊಳಿಸಿದೆ. ಬಿಸಿಯೂಟ ಕಾರ್ಮಿಕರೂ ಅದೇ ಹುದ್ದೆಗಳಲ್ಲಿ ಕೆಲಸ ಮಾಡುವುದರಿಂದ ಅವರನ್ನೂ ಶೆಡ್ಯೂಲ್‌ಗೆ ಸೇರಿಸಿ ಶಾಸನಬದ್ಧ ಸೌಲಭ್ಯಗಳನ್ನು ಕೊಡಬೇಕು. ಅಪೌಷ್ಟಿಕತೆಯಿಂದ ಬಳಲುತ್ತಿರುವ ಎಲ್ಲಾ ಮಕ್ಕಳಿಗೆ ಅಡಿಗೆ ಮಾಡಿ ಬಡಿಸುವುದು, ಹಾಲು ಕಾಯಿಸಿ ನೀಡುವುದು, ಮೊಟ್ಟೆ, ಬಾಳೆಹಣ್ಣು ಕೊಟ್ಟು ಅತ್ಯಂತ ಜತನದಿಂದ ಕೆಲಸ ನಿರ್ವಹಿಸುತ್ತಿರುವ ಈ ಮಹಿಳೆಯರು ಮಹಾತಾಯಂದಿರಾಗಿದ್ದಾರೆ. ಆದರೆ ಇವರಿಗೆ ಗೌರವಧನದ ಹೆಸರಿನಲ್ಲಿ ಕೇವಲ ರೂ.3700–3600/ಮಾಸಿಕ ಮಾತ್ರ.ಅದೂ ಕೂಡ 2–3 ತಿಂಗಳಿಗೊಮ್ಮೆ ವೇತನ ಪಾವತಿಯಾಗುತ್ತದೆ. ವರ್ಷದ ಕೇವಲ 10 ತಿಂಗಳು ಮಾತ್ರ ಕೆಲಸ ನೀಡಲಾಗುವ ಇವರಿಗೆ ಸೇವಾ ಹಿರಿತನದ ಭತ್ಯೆ ಇಲ್ಲ. ಇದೀಗ ವಯೋನಿವೃತ್ತಿಯಾಗುತ್ತಿರುವವರಿಗೆ ಯಾವುದೇ ಇಡಿಗಂಟಿನ ಸಹಕಾರವಾಗಲಿ, ನಿವೃತ್ತಿ ವೇತನವಾಗಲಿ ಇಲ್ಲ. ಶಾಸನಬದ್ಧವಾಗಿ ದೊರಕಬೇಕಾದ ವೇತನ ಸಹಿತ ಹೆರಿಗೆ ರಜೆ, ವೈದ್ಯಕೀಯ ಸೌಲಭ್ಯಗಳೂ ದೊರಕುತ್ತಿಲ್ಲ. ಅಷ್ಟೇ ಅಲ್ಲ ಅಪೌಷ್ಟಿಕತೆಯನ್ನು ನೀಗಿಸಿ ಭವಿಷ್ಯದ ನಾಗರಿಕರನ್ನು ರೂಪಿಸುವ ಮಹತ್ತರ ಜವಾಬ್ದಾರಿ ಹೊತ್ತಿರುವ ಇವರ ಮಕ್ಕಳಿಗೆ ಮಾತ್ರ ಶಿಕ್ಷಣ, ಆರೋಗ್ಯ, ಭವಿಷ್ಯಗಳು ಮಂಕಾಗಿವೆ. ಆದ್ದರಿಂದ ಈ ಕಾರ್ಮಿಕರನ್ನು ಕಾರ್ಮಿಕ ಇಲಾಖೆಯ ಶೆಡ್ಯೂಲ್‌ಗೆ ಸೇರಿಸಬೇಕು, ಎಂದರು.ಇದೇ ಸಂದರ್ಭದಲ್ಲಿ ಮಾತನಾಡಿದ ರಾಜ್ಯ ಕಾರ್ಯದರ್ಶಿಗಳಾದ ಸಂಧ್ಯಾ.ಪಿ.ಎಸ್ ರವರು, ಹಿಂದಿನ ಸರ್ಕಾರ ಬಜೆಟ್‌ನಲ್ಲಿ ಘೋಷಿಸಿದ ಒಂದು ಸಾವಿರ ರೂ.ನಷ್ಟು ಹೆಚ್ಚಿಸಿ ಘೋಷಿಸಿದ್ದು ಕೇವಲ ಚುನವಣೆ ಕಾಲದಲ್ಲಿ ಮೂಗಿಗೆ ತುಪ್ಪ ಸವರಿದ್ದಷ್ಟೇ ಆಗಿದೆ. ಈಗ ದೊರೆಯುತ್ತಿರುವ ಬಹಳೇ ಕನಿಷ್ಠ ಮಾಸಿಕ ಗೌರವಧನದಲ್ಲಿ ಪಟ್ಟಣಗಳಲ್ಲಿ ಒಂದು ತಿಂಗಳ ಬಾಡಿಗೆಯನ್ನೂ ಕಟ್ಟಲು ಆಗುವುದಿಲ್ಲ.ಅಲ್ಲದೇ ಈಗಿರುವ ಗ್ಯಾರಂಟಿಗಳಿಂದ ಜೀವನ ಬದಲಾಗಿಲ್ಲ. ಇಂದಿನ ಬೆಲೆಯೇರಿಕೆಗೆ ತಕ್ಕಂತೆ ಇವರ ವೇತನ ಹೆಚ್ಚಿಸಬೇಕು.ಅವರಿಗೆ ವರ್ಷಪೂರ್ತಿ ಕೆಲಸ ನೀಡಿ,ಸಮವಸ್ತ್ರ,ಗುರುತಿನ ಚೀಟಿ,ಹೆರಿಗೆ ರಜೆ,ಅನಾರೋಗ್ಯದ ರಜೆ ಇತ್ಯಾದಿಗಳನ್ನು ಖಾತ್ರಪಡಿಸಬೇಕು.ಇದಕ್ಕಾಗಿ ಎಲ್ಲ ಬಿಸಿಯೂಟ ಕಾರ್ಮಿಕರು ಒಗ್ಗಟ್ಟನ್ನು ಬಲಪಡಿಸಿಕೊಂಡು ರಾಜೀರಹಿತ ಹೋರಾಟಕ್ಕೆ ಮುಂದಾಗಬೇಕು,ಎಂದರು.

ಮತ್ತೊಬ್ಬ ರಾಜ್ಯ ನಾಯಕಿ ಭುವನಾ ಬಳ್ಳಾರಿ ಬೇಡಿಕೆಗಳಿರುವ ಮನವಿ ಪತ್ರ ಓದಿದರು. ಅಥಿತಿಗಳಾಗಿ ಆಗಮಿಸಿದ್ದ ಎಐಯುಟಿಯುಸಿ ರಾಜ್ಯ ಸೆಕ್ರಟರಿಯೇಟ್ ಸದಸ್ಯ ಗಂಗಾಧರ ಬಡಿಗೇರ ಮಾತನಾಡಿದರು. ಪ್ರತಿಭಟನೆಯಲ್ಲಿ ಜಾಹೀದಾ ಹೊಂಬಳ, ರಾಜಮ್ಮ ಕುಂದಗೋಳ, ,ರೇಣುಕಾ ಕರಿಗಾರ,ಮಾಲತಿ ಮುಗಳಿ,ಲಲಿತಾ ಸೋಲದ, ಜ್ಯೋತಿ ವಾಯಚಾಳ, ಸಾವಿತ್ರಿ ಮುದ್ದೇಬಿಹಾಳ, ಲಲಿತಾ ಹೊಸಮನಿ, ಗೌರಮ್ಮ ಗುಡ್ಡದಮನಿ,ಉಮಾ ಹಿರೇಮಠ,ಲಕ್ಷ್ಮಿ ಗರಗ,ಜೈಬುನ ಮಾಳಗಿ,ಖತೇಜಾ ಕೋಟೂರ, ಅನಿತಾ ಕುಸುಗಲ್, ಮುಂತಾದವರು ನೇತೃತ್ವ ವಹಿಸಿದ್ದರು.ಮನವಿ ಪತ್ರವನ್ನು ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಮಾನ್ಯ ಮುಖ್ಯಮಂತ್ರಿಗಳಿಗೆ,ಮಾನ್ಯ ಶಿಕ್ಷಣ ಸಚಿವರಿಗೆ ಮತ್ತು ಮಾನ್ಯ ಕಾರ್ಮಿಕ ಸಚಿವರ ಪ್ರತಿನಿಧಿಗಳಿಗೆ ಸಲ್ಲಿಸಲಾಯಿತು.

# ರೇವಂತ್ ರೆಡ್ಡಿಗೆ ಒಲಿದ ತೆಲಂಗಾಣ ಸಿಎಂ ಸ್ಥಾನ

ಹೈದರಾಬಾದ್: ನಿರೀಕ್ಷಿಸಿದಂತೆ ತೆಲಂಗಾಣ ಮುಖ್ಯಮಂತ್ರಿ ಸ್ಥಾನ ರೇವಂತ್ ರೆಡ್ಡಿಗೆ ಒಲಿದಿದೆ.

ಡಿಸೆಂಬರ್ 3ರಂದು ಚುನಾವಣಾ ಫಲಿತಾಂಶ ಪ್ರಕಟ ಆದಾಗಿನಿಂದ ಸಿಎಂ ಸ್ಥಾನಕ್ಕೆ ರೇವಂತ್ ರೆಡ್ಡಿ ಹೆಸರು ಕೇಳಿಬಂದಿತ್ತು. ಆದರೆ ಕಾಂಗ್ರೆಸ್ ಪಕ್ಷದ ಉಸ್ತುವಾರಿ ಮತ್ತು ವೀಕ್ಷಕರು ಸಿಎಂ ಹೆಸರನ್ನು ಪಕ್ಷದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರೇ ಪ್ರಕಟಿಸುತ್ತಾರೆ ಎಂದು ಹೇಳಿದ್ದರು. ಇದೀಗ ಖರ್ಗೆ ಅವರು ತೆಲಂಗಾಣದ ಮುಖ್ಯಮಂತ್ರಿಯಾಗಿ ರೇವಂತ್ ರೆಡ್ಡಿ ಹೆಸರು ಘೋಷಣೆ ಮಾಡಿದ್ದಾರೆ.

ತೆಲಂಗಾಣ ವಿಧಾನಸಭೆ ಚುನಾವಣೆಯಲ್ಲಿ 119 ಸ್ಥಾನಗಳ ಪೈಕಿ 64 ಸ್ಥಾನಗಳ ಬಹುಮತದೊಂದಿಗೆ ಕಾಂಗ್ರೆಸ್ ಗೆಲುವು ಸಾಧಿಸಿತ್ತು.

ಪ್ರಸ್ತುತ ಚುನಾವಣೆಯಲ್ಲಿತೆಲಂಗಾಣ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅನುಮುಲಾ ರೇವಂತ್ ರೆಡ್ಡಿ 32,532 ಮತಗಳಿಂದ



ಗೆದ್ದಿದ್ದು ಕಾಂಗ್ರೆಸ್ ಗೆಲುವಿನ ರೂವಾರಿ ಆಗಿ ಹೊರಹೊಮ್ಮಿದ್ದಾರೆ. ಕೊಡಂಗಲ್ ಅಲ್ಲದೆ, ತೆಲಂಗಾಣ ಸಿಎಂ ಕೆ ಚಂದ್ರಶೇಖರ್ ರಾವ್ (ಕೆಸಿಆರ್) ಕಣಕ್ಕಿಳಿದಿದ್ದ ಕಾಮರೆಡ್ಡಿಯಿಂದ ಕೂಡಾ ರೇವಂತ್ ರೆಡ್ಡಿ ಸ್ಪರ್ಧಿಸಿದ್ದರು. ಆದಾಗ್ಯೂ, ಬಿಜೆಪಿಯ ವೆಂಕಟ ರಮಣ ರೆಡ್ಡಿ ಮುಂದೆ ಈ ಪ್ರಮುಖ ನಾಯಕರು ಪರಾಭವಗೊಂಡರು.

54ರ ಹರೆಯದ ನಾಯಕ ರೇವಂತ್ ರೆಡ್ಡಿ ಅವರು ಜೂನ್ 2021 ರಲ್ಲಿ ತೆಲುಗು ದೇಶಂ ಪಕ್ಷವನ್ನು (ಟಿಡಿಪಿ) ತೊರೆದು ಕಾಂಗ್ರೆಸ್‌ಗೆ ಸೇರಿ, ಅಲ್ಪಾವಧಿಯಲ್ಲಿ ಕಾಂಗ್ರೆಸ್‌ಗೆ ಪ್ರಭಾವಶಾಲಿ ವಿಜಯವನ್ನು ಬರೆಯುವಲ್ಲಿ ಯಶಸ್ವಿಯಾಗಿದ್ದಾರೆ.

ರೇವಂತ್ ರೆಡ್ಡಿ ಅವರ ಆರಂಭಿಕ ರಾಜಕೀಯ ಜೀವನ: ನವೆಂಬರ್ 1969 ರಲ್ಲಿ ಮಹಬೂಬನಗರ ಜಿಲ್ಲೆಯ ಕೊಂಡರೆಡ್ಡಿ ಪಲ್ಲಿಯಲ್ಲಿ ರೇವಂತ್ ರೆಡ್ಡಿ ಜನನ.

ಅವರು ತಮ್ಮ ಪದವಿಯ ಸಮಯದಲ್ಲಿ ಕಲೆ ಅಧ್ಯಯನ ಮಾಡಿದ್ದು ಉಸ್ಮಾನಿಯಾ ವಿಶ್ವವಿದ್ಯಾಲಯದ ಎ ವಿ ಕಾಲೇಜಿನಲ್ಲಿ ಬ್ಯಾಚುಲರ್ ಆಫ್ ಆರ್ಟ್ಸ್ ಪದವಿಯನ್ನು ಪಡೆದರು. ಅವರು ವಿದ್ಯಾರ್ಥಿ ರಾಜಕೀಯದಲ್ಲಿ ತೀವ್ರ ಆಸಕ್ತಿಯನ್ನು ಹೊಂದಿದ್ದರು.

ರೆಡ್ಡಿ ಮೊದಲ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಸ್ಪರ್ಧಿಸಿದರು. ಮಿಡ್ಜಿಲ್‌ನಿಂದ ಜಿಲ್ಲಾ ಪರಿಷತ್ ಪ್ರಾದೇಶಿಕ ಸಮಿತಿ ಸದಸ್ಯರಾಗಿ ಆಯ್ಕೆಯಾದರು.

ನಂತರ, ಟಿಡಿಪಿಯ ಎನ್ ಚಂದ್ರಬಾಬು ನಾಯ್ಡು ಅವರು ಮೂರು ಬಾರಿ ಗೆದ್ದಿರುವ ಕೊಡಂಗಲ್ ವಿಧಾನಸಭಾ ಕ್ಷೇತ್ರದಿಂದ ಸ್ಪರ್ಧಿಸಲು ಟಿಕೆಟ್ ನೀಡಿದಾಗ ರೇವಂತ್ ರೆಡ್ಡಿ ಅವರ ರಾಜಕೀಯ ಜೀವನಕ್ಕೆ ಪ್ರಮುಖ ಉತ್ತೇಜನ ಸಿಕ್ಕಿತು.

2023ರ ತೆಲಂಗಾಣ ವಿಧಾನಸಭೆ ಚುನಾವಣೆಯಲ್ಲಿ ಮತ್ತೊಮ್ಮೆ ಅವರು ಕೊಡಂಗಲ್ ನಲ್ಲಿ 32,532 ಮತಗಳ ಅಂತರದಿಂದ ಗೆದ್ದಿದ್ದಾರೆ.

## ಮಡಿವಾಳ ಜನಾಂಗ ಎಸ್ಸಿಗೆ ಸೇರಿಸಲು ಶಿಫಾರಸ್ಸು ಮಾಡುವಂತೆ ಒತ್ತಾಯ

ಬೆಳಗಾವಿ: ಮಡಿವಾಳ ಜನಾಂಗವನ್ನು ಪರಿಶಿಷ್ಟ ಜಾತಿಗೆ (ಎಸ್.ಸಿ)ಗೆ ಸೇರಿಸಲು ಶಿಫಾರಸ್ಸು ಮಾಡಬೇಕೆಂದು ಒತ್ತಾಯಿಸಿ ಉತ್ತರ ಕರ್ನಾಟಕ ಮಡಿವಾಳರ ಸಂಘದ ವತಿಯಿಂದ ಸುವರ್ಣಸೌಧ ಸಮೀಪದ ಸುವರ್ಣ ಗಾರ್ಡನ್ ಬಳಿ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಮಡಿವಾಳ ಜನಾಂಗವನ್ನು ಪರಿಶಿಷ್ಟ ಜಾತಿಗೆ (ಎಸ್.ಸಿ) ಸೇರ್ಪಡೆಗೊಳಿಸಲು ಈಗಾಗಲೆ 2008ರ ಅವಧಿಯಲ್ಲಿ ಅಂದಿನ ಸರ್ಕಾರಕ್ಕೆ ಡಾ? ಅನ್ನಪೂರ್ಣಮ್ಮ ನವರ ವರದಿ ಪಡೆದು ಸುಮಾರು 16ವರ್ಷ ಕಳೆದರೂ ಇಲ್ಲಿಯವರೆಗೂ ಶಿಫಾರಸ್ಸು ಮಾಡಿರುವುದಿಲ್ಲ. ಆದ ಕಾರಣ ಮಡಿವಾಳ ಜನಾಂಗಕ್ಕೆ ಸಾಮಾಜಿಕ ನ್ಯಾಯ ಹಾಗೂ ಮೀಸಲಾತಿ ವಂಚಿತರಾಗಿರುತ್ತೇವೆ. ದಯಮಾಡಿ ತಮ್ಮ ಸರ್ಕಾರದಿಂದ ಕೇಂದ್ರ ಸರ್ಕಾರಕ್ಕೆ ಡಾ। ಅನ್ನಪೂರ್ಣಮ್ಮ ನವರ ವರದಿಯಂತೆ ಎಸ್.ಸಿ ಗೆ ಸೇರಿಸಲು ಶಿಫಾರಸ್ಸು ಮಾಡಬೇಕೆಂದು ಒತ್ತಾಯಿಸಿದರು.

ಉತ್ತರ ಕರ್ನಾಟಕದ ಮಡಿವಾಳರ ಸ್ಥಿತಿ ತುಂಬಾ ಶೋಚನೀಯವಾಗಿರುವುದರಿಂದ ಮಡಿವಾಳರ




ಅಭಿವೃದ್ಧಿ ನಿಗಮದಲ್ಲಿ ಉತ್ತರ ಕರ್ನಾಟಕಕ್ಕೆ ಪ್ರತ್ಯೇಕ ಅನುದಾನ ನೀಡುವಂತೆ ಹಾಗೂ ನಿಗಮದ ಅಧ್ಯಕ್ಷರ ಸ್ಥಾನವನ್ನು ಉತ್ತರ ಕರ್ನಾಟಕಕ್ಕೆ ನೀಡಿದಲ್ಲಿ ಈ ಭಾಗದ ಮಡಿವಾಳರಿಗೆ ತುಂಬಾ ಸಹಾಯವಾಗಲಿದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಪ್ರತಿಭಟನೆಯಲ್ಲಿ ಎಂ. ಕೆ. ಹನುಮಂತಪ್ಪ,ಸಾಯಬಣ್ಣ ಮ. ಮಡಿವಾಳರ, ದುರುಗೇಶ ಗಂ. ಮಡಿವಾಳರ,ಮುತ್ತಣ್ಣ ಅಗಸರ,ಪರಶುರಾಮ ಮಡಿವಾಳರ, ಮಂಜುಳಾ ಮಡಿವಾಳರ ಸೇರಿದಂತೆ ಇತರರು ಭಾಗವಹಿಸಿದ್ದರು.

# ಸೆಬಿಗೆ ಡಿಆರ್‌ಎಚ್‌ಪಿ ಸಲ್ಲಿಸಿದ ಕ್ರಾಸ್ ಲಿಮಿಟೆಡ್

ಹುಬ್ಬಳ್ಳಿ: ಮಧ್ಯಮ ಮತ್ತು ಭಾರೀ ವಾಣಿಜ್ಯ ವಾಹನಗಳಿಗೆ (ಎಂಎಚ್‌ಸಿವಿ) ಮತ್ತು ಕೃಷಿ ಸಲಕರಣೆಗಳ ವಿಭಾಗಗಳಿಗೆ ವಿಸ್ತಾರವಾಗಿ ಫೋರ್ಜಿಂಗ್ ಮತ್ತು ನಿಖರ ಯಂತ್ರಗಳ ಮೂಲಕ ಸಿದ್ಧಗೊಳಿಸುವ ಹೆಚ್ಚಿನ ಕಾರ್ಯಕ್ಷಮತೆಯ ನಿರ್ಣಾಯಕ ಸುರಕ್ಷತಾ ಭಾಗಗಳು ಹಾಗೂ ಟ್ರೈಲರ್ ಆ್ಯಕ್ಸಲ್ ಮತ್ತು ಸಸ್ಪೆನ್ಷನ್ ಜೋಡಣೆಯ ತಯಾರಿಕೆ ಮತ್ತು ಪೂರೈಕೆಯ ಮೇಲೆ ಗಮನ ಕೇಂದ್ರೀಕರಿಸಿದ ವೈವಿಧ್ಯಮಯ ಸಂಸ್ಥೆಯಾದ ಕ್ರಾಸ್ ಲಿಮಿಟೆಡ್ ಐಪಿಓ ಮೂಲಕ ಹಣ ಸಂಗ್ರಹಿಸಲು ಬಂಡವಾಳ ಮಾರುಕಟ್ಟೆ ನಿಯಂತ್ರಕ, ಸೆಬಿಗೆ ಡಿಆರ್‌ಎಚ್‌ಪಿ ಸಲ್ಲಿಸಿದೆ.

ಜಮ್ಶೆಡ್‌ಪುರ ಮೂಲದ ಈ ಕಂಪನಿ ರೂ.500 ಕೋಟಿಯ ಇನಿಷಿಯಲ್ ಪಬ್ಲಿಕ್ ಆಫರಿಂಗ್, ಮಾರಾಟ ಮಾಡುವ ಪ್ರವರ್ತಕ ಷೇರುದಾರರ ರೂ.250 ಕೋಟಿವರೆಗಿನ ಮಾರಾಟದ ಒಟ್ಟುಗೂಡಿಸುವಿಕೆ ಆಫರ್ ಮತ್ತು, ರೂ.250 ಕೋಟಿವರೆಗಿನ ಈಕ್ವಿಟಿ ಷೇರುಗಳ ಒಟ್ಟುಗೂಡಿಸುವಿಕೆಯ ನವೀನ ಬಂಡವಾಳ ಪತ್ರಗಳ ನೀಡಿಕೆಯನ್ನು ಒಳಗೊಂಡಿದೆ.

ನಿರ್ದಿಷ್ಟ ಭದ್ರತೆಗಳ ಪೂರ್ವ–ಐಪಿಓ ನಿಯೋಜನೆಯನ್ನು ಕಂಪನಿಯು 50 ಕೋಟಿ ರೂ.ವರೆಗೆ ಕೈಗೊಳ್ಳಬಹುದು. ಪೂರ್ವ–ಐಪಿಓ ನಿಯೋಜನೆಯನ್ನು ಕೈಗೊಂಡರೆ, ಅಂತಹ ಪೂರ್ವ–ಐಪಿಓ ನಿಯೋಜನೆಯ ಮಟ್ಟಿಗೆ ನವೀನ ಬಂಡವಾಳ ಪತ್ರಗಳ ನೀಡಿಕೆ ಗಾತ್ರವನ್ನು ಕಡಿಮೆಗೊಳಿಸಲಾಗುತ್ತದೆ.

ಅಶೋಕ್ ಲೇಲ್ಯಾಂಡ್ ಮತ್ತು ಟಾಟಾ ಇಂಟರ್‌ನ್ಯಾಶನಲ್ ಡಿಎಲ್‌ಟಿ ಪ್ರೈವೇಟ್ ಲಿಮಿಟೆಡ್ ಅನ್ನು ತನ್ನ ಪ್ರಮುಖ ಗ್ರಾಹಕರನ್ನಾಗಿ ಪರಿಗಣಿಸುವ ಕಂಪನಿಯು ತನ್ನ ಉತ್ಪನ್ನಗಳನ್ನು ವೈವಿಧ್ಯಮಯ ಗ್ರಾಹಕ ನೆಲೆಗಳಿಗೆ ಪೂರೈಸುತ್ತದೆ, ಇವುಗಳಲ್ಲಿ ಎಂ&ಎಚ್‌ಸಿವಿ ಮತ್ತು ಟ್ರಾಕ್ಟರ್‌ಗಳನ್ನು ಉತ್ಪಾದಿಸುವ ದೊಡ್ಡ ಮೂಲ ಸಾಧನ ತಯಾರಕರು ಎಂ&ಎಚ್ ಸಿವಿ ವಿಭಾಗದಲ್ಲಿ ಓಇಎಂಗಳಿಗೆ ಟೈರ್ 1 ಪೂರೈಕೆದಾರರು, ಅದರ ಟ್ರೈಲರ್ ಆ್ಯಕ್ಸಲ್ ಮತ್ತು ಸಸ್ಪೆನ್ಷನ್ ವ್ಯವಹಾರದ ದೇಶೀಯ ವಿತರಕರು ಮತ್ತು ತಯಾರಕರು ಒಳಗೊಂಡಿರುತ್ತಾರೆ.

ಇದು ವಾಣಿಜ್ಯ ವಾಹನದ ಓಇಎಂಗಳಿಗೆ ಪ್ರೊಪೆಲ್ಲರ್ ಶಾಫ್ಟ್‌ಗಳನ್ನು ತಯಾರಿಸುವ ಸ್ವೀಡನ್ ಮೂಲದ ಕಂಪನಿ ಲೀಕ್ಸ್ ಫಾಲುನ್ ಎಬಿ ಮತ್ತು ವಾಣಿಜ್ಯ ವಾಹನ ತಯಾರಿಸುವ ಜಪಾನ್ ಮೂಲದ ಓಇಎಂಗಳಂತಹ ಹೊಸ ಗ್ರಾಹಕರನ್ನು ಸೆಳೆದಿದೆ.

ಕಂಪನಿಯ ಬಂಡವಾಳ ವೆಚ್ಚದ ಅವಶ್ಯಕತೆಗಳನ್ನು, ಯಂತ್ರೋಪಕರಣಗಳು ಮತ್ತು ಸಲಕರಣೆಗಳ ಖರೀದಿಯ (ರೂ. 70 ಕೋಟಿ) ಫಂಡಿಂಗ್‌ಗೆ ನವೀನ ಬಂಡವಾಳ ಪತ್ರಗಳ ನೀಡಿಕೆಯ ನಿವ್ವಳ ಆದಾಯವನ್ನು ಕಂಪನಿಯು ಬ್ಯಾಂಕ್‌ಗಳು ಮತ್ತು ಹಣಕಾಸು ಸಂಸ್ಥೆಗಳಿಂದ (ರೂ. 90 ಕೋಟಿ) ಪಡೆದ ಕೆಲವು ಬಾಕಿ ಸಾಲಗಳ ಸಂಪೂರ್ಣ ಅಥವಾ ಭಾಗಶಃ ಮರುಪಾವತಿ ಅಥವಾ ಪೂರ್ವಪಾವತಿಯನ್ನು ಕಂಪನಿಯ ಕಾರ್ಯನಿರತ ಬಂಡವಾಳದ ಅಗತ್ಯತೆಗಳ ಮತ್ತು ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳ ಫಂಡಿಂಗ್ (ರೂ. 30 ಕೋಟಿ) ಬಳಸಿಕೊಳ್ಳಲು ಕ್ರಾಸ್ ಲಿಮಿಟೆಡ್ ಪ್ರಸ್ತಾಪಿಸುತ್ತದೆ.

1991ರಲ್ಲಿ ಸ್ಥಾಪಿತವಾದ ಕ್ರಾಸ್ ಲಿಮಿಟೆಡ್ ಭಾರತದಲ್ಲಿ ವ್ಯಾಪಕ ಶ್ರೇಣಿಯ ಫೋರ್ಜಿಂಗ್ ಮತ್ತು ಮಶಿನ್ಡ್ ಭಾಗಗಳ ಪ್ರಮುಖ ತಯಾರಕರಾಗಿದ್ದು, ಜಾಗತಿಕವಾಗಿ ಬೆಳೆಯುತ್ತಿರುವ ರಫ್ತು ಉಪಸ್ಥಿತಿಯನ್ನು ಹೊಂದಿದೆ. ಇದು ವಾಣಿಜ್ಯ ವಾಹನ ಮತ್ತು ಟ್ರ್ಯಾಕ್ಟರ್ ವಿಭಾಗಕ್ಕೆ ವ್ಯಾಪಕ ಶ್ರೇಣಿಯ ಹೆಚ್ಚು ಕಾರ್ಯಕ್ಷಮತೆಯುಳ್ಳ ಮತ್ತು ಸುರಕ್ಷತಾ ನಿರ್ಣಾಯಕ ಘಟಕಗಳನ್ನು ತಯಾರಿಸುತ್ತದೆ. ಜಾರ್ಖಂಡ್‌ನ ಜಮ್‌ಶೆಡ್‌ಪುರದಲ್ಲಿರುವ ತನ್ನ ಐದು ಉತ್ಪಾದನಾ ಸೌಲಭ್ಯಗಳಲ್ಲಿ ಇದು ಕಾರ್ಯನಿರ್ವಹಿಸುತ್ತದೆ.

ಕಂಪನಿಯ ಪ್ರವರ್ತಕರು ಯಾರೆಂದರೆ– ಸುಧೀರ್ ರೈ, ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕರು; ಅನಿತಾ ರೈ, ಪೂರ್ಣಾವಧಿ ನಿರ್ದೇಶಕಿ; ಸುಮೀತ್ ರೈ, ಪೂರ್ಣಾವಧಿ ನಿರ್ದೇಶಕ.

2023ರ ಹಣಕಾಸು ವರ್ಷದಲ್ಲಿ ಕಾರ್ಯಾಚರಣೆಗಳಿಂದ ಅದರ ಆದಾಯ ರೂ.489 ಕೋಟಿ, ರೂ. 31 ಕೋಟಿ ಪಿಎಟಿ ಜೊತೆಗೆ.

ಆಫರ್‌ಗೆ ಬುಕ್ ರನ್ನಿಂಗ್ ಲೀಡ್ ಮ್ಯಾನೇಜರ್, ಈಕ್ವಿರಸ್ ಕ್ಯಾಪಿಟಲ್ ಪ್ರೈವೇಟ್ ಲಿಮಿಟೆಡ್ ಆಗಿದೆ.

# ವಸತಿ ಗೃಹಗಳಲ್ಲಿ ಮದ್ಯಮಾರಾಟ ಹಗರಣ: ವಿಧಾನಸಭೆಯಲ್ಲಿ ಕೋಲಾಹಲ

ಬೆಳಗಾವಿ: ವಸತಿ ಗೃಹಗಳಲ್ಲಿ ಮದ್ಯಮಾರಾಟಕ್ಕೆ ಪರವಾನಗಿ ನೀಡಿರುವುದರಲ್ಲಿ ಹಗರಣಗಳಾಗಿದ್ದು, ತನಿಖೆ ನಡೆಸಬೇಕೆಂದು ಪಕ್ಷಾತೀತವಾಗಿ ವಿಧಾನಸಭೆಯಲ್ಲಿ ಒತ್ತಾಯಿಸಿದ್ದಲ್ಲದೆ ಆಡಳಿತ ಮತ್ತು ವಿರೋಧಪಕ್ಷಗಳ ನಡುವೆ ಪರಸ್ಪರ ಆರೋಪ ಪ್ರತ್ಯಾರೋಪಗಳು ನಡೆದು ಕೋಲಾಹಲದ ಪರಿಸ್ಥಿತಿ ನಿರ್ಮಾಣವಾಯಿತು.

ಪ್ರಶ್ನೋತ್ತರದ ಅವಧಿಯಲ್ಲಿ ಬಂಗಾರಪೇಟೆ ಕ್ಷೇತ್ರದ ಶಾಸಕ ಎಸ್.ಎನ್.ನಾರಾಯಣಸ್ವಾಮಿ ಅವರು ವಿಷಯ ಪ್ರಸ್ತಾಪಿಸಿ ತಮ್ಮ ಕ್ಷೇತ್ರದಲ್ಲಿ ನಿಯಮ ಮೀರಿ ಸಿಎಲ್ 7 ಪರವಾನಗಿಗಳನ್ನು ನೀಡಲಾಗಿದೆ. ಇದರಲ್ಲಿ ಶೇಕಡಾ 80 ರಷ್ಟು ನಿಯಮಗಳ ಉಲ್ಲಂಘನೆಯಾಗಿದೆ. ಯಾವ ಅಂಗಡಿಗೂ ಪಾರ್ಕಿಂಗ್ ಸ್ಥಳಾವಕಾಶ ಇಲ್ಲ. ನಿಯಮಗಳ ಅನುಸಾರ ಕೊಠಡಿಗಳ ವಿನ್ಯಾಸ ಇಲ್ಲ. ಜಿಲ್ಲಾ ಅಬಕಾರಿ ಕಚೇರಿಯಲ್ಲಿ ಸೂಪರಿಟೆಂಡೆಂಟ್ ಆಗಿರುವ ರಂಗಪ್ಪ ಎಂಬುವರು ನಿಯಮ ಮೀರಿ ಪರವಾನಗಿಗಳನ್ನು ಕೊಡುತ್ತಿರುವುದಲ್ಲದೆ, ಸದರಿ ಮದ್ಯದಂಗಡಿಗಳಲ್ಲಿ ಪಾಲುದಾರರಾಗುತ್ತಿದ್ದಾರೆ ಎಂದು ಆರೋಪಿಸಿದರು.

ಇದಕ್ಕೆ ಸ್ಪಷ್ಟನೆ ನೀಡಿದ ಅಬಕಾರಿ ಸಚಿವ ಆರ್ಬಿ.ತಿಮ್ಮಾಪುರ್, ಸಿಎಲ್ 7 ಪರವಾನಗಿಗಳನ್ನು ನೀಡಬೇಕಾದರೆ 18 ಪ್ರಮಾಣಪತ್ರಗಳನ್ನು ಸಲ್ಲಿಸಬೇಕು. ಬಹುತೇಕ



ಎಲ್ಲಾ ಸನ್ನದ್ದುದಾರರಲ್ಲೂ ಪ್ರಮಾಣಪತ್ರಗಳಿವೆ. ಆದರೆ ಕಟ್ಟಡ ವಿನ್ಯಾಸ ಮತ್ತು ಪಾರ್ಕಿಂಗ್ ಸ್ಥಳದ ಬಗ್ಗೆ ಸ್ಪಷ್ಟ ನಿಯಮಗಳಿಲ್ಲ. ನಮ್ಮ ಸರ್ಕಾರ ಇದಕ್ಕೆ ಸಂಬಂಧಪಟ್ಟಂತೆ ಮಾರ್ಗಸೂಚಿಗಳನ್ನು ರೂಪಿಸಲಿದೆ ಎಂದು ಹೇಳಿದರು.

ಶಾಸಕರು ಉಲ್ಲೇಖಿಸಿರುವ ಅಧಿಕಾರಿಯ ವಿರುದ್ಧ ವರದಿ ಪಡೆದು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಈ ಹಂತದಲ್ಲಿ ಮಧ್ಯಪ್ರವೇಶ ಮಾಡಿದ ಶಾಸಕರಾದ ಕೆ.ಎಂ.ಶಿವಲಿಂಗೇಗೌಡ, ಗೋಪಾಲಕೃಷ್ಣ ಬೇಳೂರು, ಸಿ.ಎನ್.ಬಾಲಕೃಷ್ಣ, ಸುರೇಶ್ಗೌಡ ಸೇರಿದಂತೆ ಹಲವು ಶಾಸಕರು ಈ ಕುರಿತು ವಿಸ್ತೃತ ಚರ್ಚೆಗೆ ಅವಕಾಶ ನೀಡಬೇಕೆಂದು ಮನವಿ ಮಾಡಿದರು.

ಕೆ.ಎಂ.ಶಿವಲಿಂಗೇಗೌಡ ಮಾತನಾಡಿ, ಸಿಎಲ್ 7 ಎಂಬುದು ದಂಧೆಯಾಗಿದೆ. ಬೆಂಗಳೂರಿನಿಂದ ಬಂದ ಅರಸೀಕೆರೆಯಲ್ಲಿ ಪರವಾನಗಿ ಪಡೆದು ಮದ್ಯ ಮಾರಾಟ ಮಾಡುತ್ತಿದ್ದಾರೆ. ಕಡಿವಾಣ ಹಾಕದಿದ್ದರೆ ಸರ್ಕಾರಕ್ಕೆ ಕೆಟ್ಟ ಹೆಸರು ಬರಲಿದೆ ಎಂದರು.

ಬೇಳೂರು ಗೋಪಾಲಕೃಷ್ಣ ಮಾತನಾಡಿ, ಇದು ಸುಮಾರು 1 ಸಾವಿರ ಕೋಟಿ ರೂ.ಗಳಷ್ಟು ಪ್ರಕರಣ, ಎಷ್ಟು ಪರವಾನಗಿಗಳನ್ನು ನೀಡಲಾಗಿದೆ ಎಂಬುದು ತನಿಖೆಯಾಗಬೇಕು ಎಂದು ಒತ್ತಾಯಿಸಿದರು. ಎಸ್.ಎನ್.ನಾರಾಯಣಸ್ವಾಮಿ ಮಾತನಾಡಿ, ಇವು ನಮ್ಮ ಸರ್ಕಾರದ ಅವಧಿಯಲ್ಲಿ ನೀಡಲಾಗಿರುವ ಪರವಾನಗಿಗಳಲ್ಲ. 2020 ರಿಂದ 2023 ರ ಅವಧಿಯಲ್ಲಿ ನೀಡಲಾಗಿದೆ ಎಂದು ಹೇಳಿದರು.

ಮಧ್ಯಪ್ರವೇಶಿಸಿದ ಮಾಜಿ ಅಬಕಾರಿ ಸಚಿವರಾದ ಕೆ.ಗೋಪಾಲಯ್ಯ ರಾಜ್ಯಸರ್ಕಾರಕ್ಕೆ ಧೈರ್ಯ ಮತ್ತು ಕಾಳಜಿ ಇದ್ದರೆ ಈ ಬಗ್ಗೆ ತನಿಖೆ ಮಾಡಿ ಅಕ್ರಮವಾಗಿರುವುದನ್ನು ರದ್ದು ಮಾಡಿ ಎಂದು ಸವಾಲು ಹಾಕಿದರು. ಇದು ಆಡಳಿತ ಮತ್ತು ವಿರೋಧ ಪಕ್ಷಗಳ ನಡುವೆ ಕಾವೇರಿದ ಚರ್ಚೆಗೆ ಗ್ರಾಸವಾಯಿತು.

ವಿರೋಧಪಕ್ಷದ ನಾಯಕ ಆರ್.ಅಶೋಕ್ ಅವರು ಮಾತನಾಡಿ, 21 ಕೊಠಡಿಗಳಿರಬೇಕು ಎಂಬ ನಿಯಮವಿದೆ. ಆದರೆ ಶೌಚಾಲಯವನ್ನು ಕೊಠಡಿ ಎಂದು ಪರಿವರ್ತಿಸಿದ್ದಾರೆ. ತನಿಖೆ ಮಾಡಿ ನಿಯಮ ಉಲ್ಲಂಘನೆಯಾಗಿದ್ದರೆ ಪರವಾನಗಿಗಳನ್ನು ರದ್ದು ಮಾಡಿ, ಚಿಲ್ಲರೆ ಅಂಗಡಿಗಳಲ್ಲೂ ಮದ್ಯ ಮಾರಾಟವಾಗುತ್ತಿದೆ, ಅದನ್ನು ತಡೆಗಟ್ಟಿ ಎಂದು ಆಗ್ರಹಿಸಿದರು.

ಸಚಿವ ಆರ್ಬಿ.ತಿಮ್ಮಾಪುರ್ ಮಾತನಾಡಿ, ಕೊಠಡಿ ವಿನ್ಯಾಸ, ಪಾರ್ಕಿಂಗ್ ಸ್ಥಳಗಳ ಬಗ್ಗೆ ಸ್ಪಷ್ಟ ನಿಯಮಗಳಿಲ್ಲ ಎಂದು ನಾನೇ ಒಪ್ಪಿಕೊಂಡಿದ್ದೇನೆ. ಇದರ ಬಗ್ಗೆ ಪರಿಶೀಲನೆ ಮಾಡುತ್ತೇವೆ ಎಂದು ಭರವಸೆ ನೀಡಿದರು. ಶಾಸಕ ಪಿ.ಎಂ.ನರೇಂದ್ರಸ್ವಾಮಿ ಮಾತನಾಡಿ, ಪರವಾನಗಿ ನೀಡುವುದರಲ್ಲಿ ಮೀಸಲಾತಿ ಪಾಲನೆಯಾಗಿಲ್ಲ ಎಂದು ಆಕ್ಷೇಪಿಸಿದರು.

ಇದಕ್ಕೆ ಉತ್ತರ ನೀಡಿದ ಸಚಿವ ಆರ್ಬಿ.ತಿಮ್ಮಾಪುರ್, 3975 ಸಿಎಲ್2 ಪರವಾನಗಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ತಲಾ 65 ಹಂಚಿಕೆ ಮಾಡಲಾಗಿದೆ. 3024 ಸಿಎಲ್ 9ನಲ್ಲಿ ಪರಿಶಿಷ್ಟ ಜಾತಿಗೆ 49, ಪರಿಶಿಷ್ಟ ಪಂಗಡಕ್ಕೆ 34, ಸಿಎಲ್ 7 2444 ರಲ್ಲಿ ಪರಿಶಿಷ್ಟ ಜಾತಿಗೆ 96, ಪರಿಶಿಷ್ಟ ಪಂಗಡಕ್ಕೆ 68 ಪರವಾನಗಿಗಳನ್ನು ನೀಡಲಾಗಿದೆ. ಮೀಸಲಾತಿ ಜಾರಿಯಾಗಿಲ್ಲ ಎಂಬುದು ಸ್ಪಷ್ಟ. ಈ ಕುರಿತು ಅನುಸೂಚಿತ ಜಾತಿ ಮತ್ತು ಪಂಗಡಗಳ ಸಮಿತಿಯು ವರದಿ ನೀಡಿದೆ. ಅದನ್ನು ಪರಿಶೀಲಿಸಿ ಕ್ರಮ ಕೈಗೊಳ್ಳುತ್ತೇವೆ ಎಂದು ಹೇಳಿದರು.

# ಭಾರತೀಯ ಜೈನ ಸಂಘಟನೆಯ ಸಮಾಜ ಕಾರ್ಯ ಶ್ಲಾಘನೀಯ: ಅಭಯ ಪಾಟೀಲ



ಬೆಳಗಾವಿ: ಭಾರತದಲ್ಲಿ ಭಾರತೀಯ ಜೈನ ಸಂಘಟನೆಯು ಅತ್ಯಂತ ಶಿಸ್ತುಬದ್ದ ರೀತಿಯಲ್ಲಿ ಹಾಗೂ ಜೈನ ಸಮಾಜ ಸೇರಿದಂತೆ ಎಲ್ಲ ಸಮಾಜದ ವರ್ಗದವರಿಗೆ ಸಹಾಯ ಮಾಡುತ್ತಿರುವ ಕಾರ್ಯ ಶ್ಲಾಘನೀಯವಾಗಿದೆ ಎಂದು ಬೆಳಗಾವಿ ದಕ್ಷಿಣ ಶಾಸಕ ಅಭಯ ಪಾಟೀಲ ಅವರು ಹೇಳಿದರು.

ಬೆಳಗಾವಿಯ ಮಿಲೆನಿಯಂ ಗಾರ್ಡನದಲ್ಲಿ ಭಾರತೀಯ ಜೈನ ಸಂಘಟನಾ ವತಿಯಿಂದ ಹಮ್ಮಿಕೊಳ್ಳಲಾದ ಜೈನ ವಧು ವರ ಪರಿಚಯ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇಂದು ಸಮಾಜದಲ್ಲಿ ಅನೇಕ ಸಂಘಟನೆಗಳು ಕಾರ್ಯ ನಿರ್ವಹಿಸುತ್ತಿವೆ. ಆದರೆ ಸಮಾಜಮುಖಿ ಕಾರ್ಯದಲ್ಲಿ ಕೆಲವೇ ಕೆಲ ಸಂಘಟನೆಗಳು ತೊಡಗಿಸಿಕೊಂಡಿದ್ದು, ಅವುಗಳಲ್ಲಿ ಭಾರತೀಯ ಜೈನ ಸಂಘಟನೆ ಒಂದಾಗಿದೆ ಎಂದು ಅವರು ತಿಳಿಸಿದರು.

ಸಮಾರಂಭದಲ್ಲಿ ಭಾರತೀಯ ಜೈನ ಸಂಘಟನೆಯ ಬೆಳಗಾವಿಯ ವಿಭಾಗದ ಅಧ್ಯಕ್ಷ ಪ್ರಾಸ್ತಾವಿಕವಾಗಿ ಮಾತನಾಡಿದ ಅರುಣ ಯಲಗುದ್ರಿ ಅವರು ಭಾರತೀಯ ಜೈನ ಸಂಘಟನೆಯು ಇಂದಿನ ಯುವ ಪೀಳಿಗೆಯ ಅವಶ್ಯಕತೆಗಳನ್ನು ಗಮನದಲ್ಲಿಟ್ಟು ಕೊಂಡು ವಿಶೇಷವಾದ ವಧು ವರ ಪರಿಚಯ ಸಮಾವೇಶವನ್ನು ಏರ್ಪಡಿಸಿದೆ. ಈ ಪರಿಚಯ ಸಮಾವೇಶದ ಮೂಲಕ ಯುವಕ–ಯುವತಿಯರು ಪರಿಸ್ಪರ ಅರಿತುಕೊಳ್ಳಬಹುದು. ತಮ್ಮ ತಮ್ಮ ವಿಚಾರಗಳನ್ನು ಹಂಚಿಕೊಳ್ಳಬಹುದು. ಇದರಿಂದ ಜೀವನ ಸಂಗಾತಿಯನ್ನು ಆಯ್ಕೆ ಮಾಡಿಕೊಳ್ಳಲು ಸಹಕಾರಿಯಾಗಲಿದೆ ಎಂದು ಅವರು ತಿಳಿಸಿದರು.

ಸಮಾರಂಭದಲ್ಲಿ ಸಂಘಟನೆಯ ಮಾಜಿ ಅಧ್ಯಕ್ಷ ಪ್ರಫುಲ ಪಟೇಲ ಮಾತನಾಡಿ ಕಾರ್ಯಕ್ರಮದ ಉದ್ದೇಶ, ಮಹತ್ವವನ್ನು ತಿಳಿಸಿಕೊಡುವುದರ ಜೊತೆಗೆ ಪರಿಚಯ ಸಮಾವೇಶವನ್ನು ನಡೆಸಿಕೊಟ್ಟರು. ಸಮಾರಂಭದ ವೇದಿಕೆ ಮೇಲೆ ಮಾಜಿ ಶಾಸಕ ಸಂಜಯ ಪಾಟೀಲ, ಹಿರಿಯ ನ್ಯಾಯವಾದಿ ರವಿರಾಜ ಪಾಟೀಲ,ಭರತೇಶ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ವಿನೋದ ದೊಡ್ಡಣ್ಣವರ, ಭಾರತೀಯ ಜೈನ ಸಂಘಟನೆಯ ರಾಜ್ಯ ಕಾರ್ಯಕಾರಣೀ ಸದಸ್ಯ ಶ್ರೀಪಾಲ ಖೇಮಲಾಪೂರೆ, ಮಹಿಳಾ ವಿಭಾಘದ ಸದಸ್ಯೆ ಪುಷ್ಪಾ ಲುಕ್ಕಡ, ಸುನಿಲ ಹನಮಣ್ಣವರ, ದೀಪಕ ಧಡೂತಿ, ಜಬ್ಬರಚಂದ ಜೈನ, ಉತ್ತಮ ಪೋರವಾಲ ಸೇರಿದಂತೆ ಮೊದಲಾದವರು ಉಪಸ್ಥಿತರಿದ್ದರು.

# ಸುವರ್ಣ ಸೌಧದಲ್ಲಿಊಟದ ವ್ಯವಸ್ಥೆ ಪರಿಶೀಲಿಸಿದ ಸಚಿವ ಸತೀಶ್ ಜಾರಕಿಹೊಳಿ



ಬೆಳಗಾವಿ: ಬೆಳಗಾವಿಯ ಸುವರ್ಣ ಸೌಧದಲ್ಲಿ ವಿಧಾನ ಪರಿಷತ್ ಕಲಾಪದಲ್ಲಿ ಭಾಗವಹಿಸಿ, ಬಳಿಕ ಲೋಕೋಪಯೋಗಿ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಸುವರ್ಣ ಸೌಧದ ಬ್ಯಾಂಕೇಟ್ ಹಾಲ್ ನಲ್ಲಿ ಸಚಿವರು, ಶಾಸಕರು, ಮಾಧ್ಯಮದವರು, ಅಧಿಕಾರಿಗಳಿಗೆ ಮಾಡಿದ ಊಟದ ವ್ಯವಸ್ಥೆಯನ್ನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಬೆಳಗಾವಿ ಜಿಲ್ಲಾಧಿಕಾರಿ ನಿತೇಶ್ ಪಾಟೀಲ್, ಮಾಜಿ ಶಾಸಕ ಎಸ್.ಬಿ. ಘಾಟಗೆ, ಸಿಇಒ ಭೋಯರ್ ಹರ್ಷಲ್ ಸೇರಿದಂತೆ ಅಧಿಕಾರಿಗಳು ಇದ್ದರು.

# ಪೃಥ್ವಿ ಸಿಂಗ್ ಮೇಲೆ ಹಲ್ಲೆ; ಪೊಲೀಸ್ ವರದಿ ಬರಲಿ: ಸಚಿವ ಜಿ. ಪರಮೇಶ್ವರ್



ಬೆಂಗಳೂರು: ಬಿಜೆಪಿ ಕಾರ್ಯಕರ್ತ ಪೃಥ್ವಿ ಸಿಂಗ್ ಮೇಲೆ ಚಾಕು ಇರಿತ ಪ್ರಕರಣದ ಬಗ್ಗೆ ಗೃಹ ಸಚಿವ ಜಿ. ಪರಮೇಶ್ವರ್ ಅವರು ಪ್ರತಿಕ್ರಿಯಿಸಿದ್ದು, ಪೊಲೀಸರು ತನಿಖೆ ನಡೆಸುತ್ತಿದ್ದಾರೆ ವರದಿ ಬರಲಿ ಆಮೇಲೆ ಮಾತನಾಡುತ್ತೇನೆ ಎಂದರು.

ಘಟನೆ ನಡೆದ ಸ್ಥಳದ ಸುತ್ತಮುತ್ತ ಪ್ರದೇಶದ ಸಿಸಿಟಿವಿ ಪರಿಶೀಲಿಸಲು ಸೂಚಿಸಲಾಗಿದೆ, ಪೊಲೀಸರು ತನಿಖೆ ನಡೆಸುತ್ತಿದ್ದಾರೆ, ವರದಿ ನೀಡಿದ ಬಳಿಕ ಸ್ಪಷ್ಟ ಚಿತ್ರಣ ಸಿಗಲಿದೆ ಎಂದರು. ಇನ್ನು ಚನ್ನರಾಜ ಹಟ್ಟಿಹೊಳಿ ಘಟನಾ ಸ್ಥಳದಲ್ಲಿ ಇದ್ದರು ಎಂಬ ವಿಚಾರಕ್ಕೆ ಸಂಬಂಧಿಸಿ ಸಿಸಿಟಿವಿ ತನಿಖೆಯಲ್ಲಿ ತಿಳಿದುಬರಲಿದೆ, ದಾಖಲೆ ಸಿಕ್ಕಬಳಿಕ ಮಾತನಾಡುತ್ತೇನೆ ಎಂದರು. ಪೊಲೀಸರ ಮೇಲೆ ನಂಬಿಕೆ ಇಲ್ಲ ಎಂದ ವಿಜಯೇಂದ್ರ: ತನಿಖೆ ಬಗ್ಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಪ್ರತಿಕ್ರಿಯೆ ನೀಡಿದ್ದು ಚನ್ನರಾಜ್ ಸೇರಿ ಪ್ರಕರಣದ ಆರೋಪಿಗಳನ್ನು ಬಂಧಿಸಬೇಕು ಇಲ್ಲದಿದ್ದರೆ ಬೀದಿಗಿಳಿದು ಹೋರಾಟ ಮಾಡಬೇಕಾಗುತ್ತದೆ ಎಂದು ಹೇಳಿದ್ದರು. ಈ ಹೇಳಿಕೆ ಬಗ್ಗೆ ಮಾತನಾಡಿದ ಸಚಿವ ಪರಮೇಶ್ವರ್, ಪೊಲೀಸರ ಮೇಲೆ ನಂಬಿಕೆ ಇಲ್ಲ ಎಂದ ಮೇಲೆ ಇನ್ಯಾರ ಮೇಲೆ ನಂಬಿಕೆ ಇದೆ? ಅವರಿಗೆ ಬೇಕಾದಾಗ ನಂಬಿಕೆ ಇರುತ್ತೆ, ಬೇಡದಿದ್ದಾಗ ನಂಬಿಕೆ ಇರಲ್ಲ, ಇದೆಲ್ಲ ಸರಿಯಲ್ಲ ಪೊಲೀಸ್ ಇಲಾಖೆ ಎಲ್ಲರಿಗೂ ನ್ಯಾಯ ಒದಗಿಸುತ್ತದೆ ಎಂದು ಹೇಳಿದರು.

# ಶಿಳ್ಳೇಕ್ಯಾತರ ಸಮುದಾಯಕ್ಕೆ ಮೀಸಲಾತಿ ನೀಡುವಂತೆ ಒತ್ತಾಯಿಸಿ ಪ್ರತಿಭಟನೆ

## ಶಿಳ್ಳೆಕ್ಯಾತ, ಕಿಳ್ಳೆಕ್ಯಾತ ಸಮುದಾಯದ ಪ್ರತಿಭಟನೆಗೆ ಶ್ರೀಗಳ ಬೆಂಬಲ

ಬೆಳಗಾವಿ: ತೊಗಲುಗೊಂಬೆ ಜಾನಪದ ಕಲೆಯನ್ನು ಜಗತ್ತಿಗೆ ಪ್ರದರ್ಶನ ಮಾಡುತ್ತಿರುವ ಶಿಳ್ಳೇಕ್ಯಾತಾಸ್, ಕಿಳ್ಳೆಕ್ಯಾತರ ಸಮುದಾಯಕ್ಕೆ ಸಂವಿಧಾನದ ನ್ಯಾಯಸಮ್ಮತವಾದ ಮೀಸಲಾತಿ ನೀಡಬೇಕೆಂದು ಸರ್ಕಾರಕ್ಕೆ ಕರ್ನಾಟಕ ರಾಜ್ಯ ಶಿಳ್ಳೇಕ್ಯಾತರ (ಕಿಳ್ಳೇಕ್ಯಾತರ) ಅಭಿವೃದ್ಧಿ ಸಂಘಟನೆಯಿಂದ ಒತ್ತಾಯಿಸಿದರು.

ಶಿಳ್ಳೇಕ್ಯಾತರ (ಕಿಳ್ಳೇಕ್ಯಾತರ) ಸಮುದಾಯದ ರಾಜ್ಯಾಧ್ಯಕ್ಷ ಡಾ ಸಣ್ಣವೀರಣ್ಣ ದೊಡ್ಡಮನಿ ನೇತೃತ್ವದಲ್ಲಿ ಸುವರ್ಣಸೌಧದ ಬಳಿ ಟೆಂಟ್ ನಲ್ಲಿ ಮಂಗಳವಾರ ಪ್ರತಿಭಟನೆ ನಡೆಸಿ ರಾಜ್ಯ ಸರ್ಕಾರಕ್ಕೆ ಆಗ್ರಹಿಸಿದರು.

ಈ ವೇಳೆ ರಾಜ್ಯಾಧ್ಯಕ್ಷ ಡಾ ಸಣ್ಣವೀರಣ್ಣ ದೊಡ್ಡಮನಿ ಮಾತನಾಡಿದ, ತೀರ ಹಿಂದುಳಿದ ಸಮುದಾಯವಾದ ಪರವಾಗಿ ಸರ್ಕಾರ ನಿಲ್ಲಬೇಕು. ಕಳೆದ 70 ವರ್ಷಗಳಲ್ಲಿ ಸಾಕಷ್ಟು ಸಮುದಾಯಗಳು ಕೇಂದ್ರ, ರಾಜ್ಯ ಸರ್ಕಾರ ಮೀಸಲಾತಿ ಪಡೆದು ಉನ್ನತ ಮಟ್ಟದಲ್ಲಿದ್ದಾರೆ. ಶಿಳ್ಳೆಕ್ಯಾತರ ಸಮುಯದಾಯಕ್ಕೆ ಯಾವುದೇ ಮೀಸಲಾತಿಯನ್ನು ಸರ್ಕಾರಗಳು ನೀಡಿಲ್ಲ, ಕಳೆದ 40 ವರ್ಷಗಳಿಂದ ಹೋರಾಟ ಮಾಡುತ್ತಾ ಬಂದಿದ್ದಿವೆ. ಸರ್ಕಾರಗಳು ಬದಲಾಗುತ್ತಿವೆ ಹೊರತು ಕೆಳ ಸಮುದಾಯಕ್ಕೆ ಸ್ಪಂದಿಸಿ ಸಂವಿಧಾನದಡಿಯಲ್ಲಿ ನಮಗೆ ನ್ಯಾಯ ದೊರಕಿಸಿ ಕೊಡುವ ಪ್ರಯತ್ನ ಮಾಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬಸವನಬಾಗೇವಾಡಿ ಶಾಸಕರಾದ ಶಿವಾನಂದ ಪಾಟೀಲ ಅವರ



ಬಳಿಯಲ್ಲಿ ನಮ್ಮ ಕಷ್ಟಗಳ ಬಗ್ಗೆ ಸಾಕಷ್ಟು ಭಾರಿ ಮನವಿ ಮಾಡಿಕೊಳ್ಳಲಾಗಿದೆ. ಆದರೆ, ಸ್ಪಂದನೆ ನೀಡಿಲ್ಲ, ಹಿಂದಿನ ಎಸ್ ಎಮ್ ಕೃಷ್ಣ ಸರ್ಕಾರ ಇದ್ದಾಗ ಸಹ ಮನವಿ ನೀಡಲಾಗಿದೆ. ಅಲ್ಲಿಂದ ಇಲ್ಲಿವರೆಗೂ ಸಮಾಜದಿಂದ ಅನ್ಯಾಯಕ್ಕೊಳ್ಳಲಾಗಿದ್ದೆವೆ. ಸರ್ಕಾರಗಳ ಇಚ್ಚಾಶಕ್ತಿ ಕೊರತೆಯಿಂದ ನಮ್ಮಗೆ ನ್ಯಾಯ ಸಿಕ್ಕಿಲ್ಲ ಹೀಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಎರಡನೇಯ ಬಾರಿ ಸಿಎಂ ಆಗಿದ್ದಾರೆ. ಹೋರಾಟದ ಕೂಗು ಕೇಳಿಕೊಂಡು ಮೀಸಲಾತಿ ನೀಡಬೇಕು ಎಂದು ಮನವಿ ಮೂಲಕ ಕೇಳಿಕೊಂಡರು.

ಕಟಬು ಜಾಲಗಾರ ಶಿಳ್ಳೆಕ್ಯಾತ ಕಿಳ್ಳೆಕ್ಯಾತ ಒಂದೇ ಜಾತಿಯ ಪರ್ಯಾಯ ಪದಗಳು ಎರಡನ್ನು ಒಂದು ಮಾಡಬೇಕು 1927 ರ ಕೇಂದ್ರ ಸರ್ಕಾರದ ಪಟ್ಟಿಯಲ್ಲಿ ಭಾರತ ಸರ್ಕಾರ ಆದೇಶವಿದೆ. ಸಮುದಾಯದ ಆದೇಶ ಮಾಡಿ, ಎಲ್ಲಾ ಇಲಾಖೆಗಳಿಂದ ಪ್ರಮಾಣ ಪತ್ರ ಒದಗಿಸಬೇಕು ಎಂದು ನಾವು ಆಗ್ರಹಿಸಿದರು.

ಚನ್ನಪ್ಪರೆಡ್ಡಿ ಆಯೋಗ 1994 ರಲ್ಲಿ ಸರ್ವೇ ಮಾಡಿ ಕಿಳ್ಳೆಕ್ಯಾತ ,ಬುಡಬುಡಿಕೆ ಪದದ ಸಮ್ಮಾನ ಪದ ಎಂದು ಹೇಳಿ ಬುಡುಬುಡಿಕೆ ಪದದೊಂದಿಗೆ ಕಿಳ್ಳೆಕ್ಯಾತರನ್ನ ವಿಲೀನಗೊಳಿಸಿದ್ದಾರೆ ನಮ್ಮ ಮೂಲ ತೊಗಲುಬೊಂಬೆ ಆಡಿಸುವವರು ಶಿಳ್ಳೆಕ್ಯಾತ ಕಿಳ್ಳೆಕ್ಯಾತ ಒಂದೇ ಜಾತಿಯ ಪದವೆಂದು ಮೀಸಲಾತಿ ಸೌಲಭ್ಯದಲ್ಲಿ ಇಟ್ಟಿದ್ದಾರೆ ಇನ್ನೊಂದು ಹಿಂದುಳಿದ ವರ್ಗದಲ್ಲಿ ಪಟ್ಟಿಯಲ್ಲಿ ಇಟ್ಟಿದ್ದಾರೆ ನಮ್ಮ ಶಿಳ್ಳೆಕ್ಯಾತ ಕಿಳ್ಳೆಕ್ಯಾತ ಒಂದೇ ಜಾತಿಯ ಪದಗಳು ಮೀಸಲಾತಿ ಅಡಿಯಲ್ಲಿ ಬರಬೇಕು ಎಂದು ಮನವಿ ಮಾಡಿಕೊಂಡರು.

ಶಿಳ್ಳೆಕ್ಯಾತ , ಕಿಳ್ಳೆಕ್ಯಾತ ಸಮುದಾಯದ ನಡೆಸುತ್ತಿರುವ ಪ್ರತಿಭಟನಾ ಸ್ಥಳಕ್ಕೆ ಹುಕ್ಕೇರಿ ಹಿರೇಮಠದ ಶ್ರೀ ಷ ಬ್ರ ಚಂದ್ರಶೇಖರ ಶಿವಾಚಾರ್ಯ ಮಹಾಸ್ವಾಮಿಗಳು ಹಾಗು ನಿಡಸೋಸಿಯ ಜಗದ್ಗುರು ಪಂಚಮ ಶಿವಲಿಂಗೇಶ್ವರ ಮಹಾಸ್ವಾಮಿಗಳು, ನಾಗನೂರು ಮಠದ ಶ್ರೀಗಳು ಬೆಳಗಾವಿಯ ಕಾರಂಜಿಮಠ ಶ್ರೀಗಳು ಸೇರಿದಂತೆ ಹಲವು ಪರಂಪರೆಯ ಮಠದ ಸ್ವಾಮೀಗಳು ಸೇರಿದಂತೆ ಹಲವು ಶ್ರೀಗಳು ಭೇಟಿ ನೀಡಿ, ಶಿಳ್ಳೆಕ್ಯಾತ ಕಿಳ್ಳೆಕ್ಯಾತ ಸಮುದಾಯದ ಪ್ರತಿಭಟನೆಗೆ ಬೆಂಬಲ ಬೆಂಬಲ ವ್ಯಕ್ತಪಡಿಸಿದರು.

# ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯ



ಬೆಳಗಾವಿ: ಬೆಳಗಾವಿಯನ್ನು ಎರಡನೇ ರಾಜಧಾನಿಯನ್ನಾಗಿ ಘೋಷಣೆ ಮಾಡುವುದು ಸೇರಿದಂತೆ ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಸಮೀಪದ ಸುವರ್ಣ ಗಾರ್ಡನ್ ಬಳಿ ಉತ್ತರ ಕರ್ನಾಟಕ ಹೋರಾಟ ಸಮಿತಿ ಮಂಗಳವಾರ ಪ್ರತಿಭಟನೆ ನಡೆಸಿದರು.

ಬೆಳಗಾವಿ ಸುವರ್ಣವಿಧಾನ ಸಭೆಯಲ್ಲಿ 10 ನಡೆಯುವ ಚಳಿಗಾಲ ಅಧಿವೇಶನದಲ್ಲಿ ಉತ್ತರ ಕರ್ನಾಟಕ ಭಾಗದ ಕೃಷಿ., ನೀರಾವರಿ, ಶಿಕ್ಷಣ, ಆರೋಗ್ಯ, ಆಡಳತ, ಮಾಧ್ಯಮ, ಉದ್ಯಮ ಹೀಗೆ ವಿಷಯಗಳ ಕುರಿತು ಸಮಗ್ರ ಚರ್ಚೆಯಾಗಬೇಕು. ಮುಖ್ಯವಾಗಿ ಉತ್ತರ ಕರ್ನಾಟಕ ಜನತೆಯ ಪ್ರಮುಖ ಬೇಡಿಕೆಗಳನ್ನು ಈಡೇರಿಸಬೇಕೆಂದು ಮನವಿಯಲ್ಲಿ ಒತ್ತಾಯಿಸಿದ್ದಾರೆ.

ಬೇಡಿಕಗಳು: ಬೆಳಗಾವಿಯನ್ನು 2ನೇ ರಾಜಧಾನಿಯನ್ನಾಗಿ ಘೋಷಿಸಬೇಕು.

ಉತ್ತರ ಕರ್ನಾಟಕ ಸಮಗ್ರ ಅಭಿವೃದ್ಧಿ ಹಾಗೂ ಆಡಳಿತಾತ್ಮಕ ಅನುಕೂಲಕ್ಕಾಗಿ ಬೆಂಗಳೂರಿನಲ್ಲಿರುವ ಸೆಕ್ರೆಟರಿ ಮಟ್ಟದ ಕಚೇರಿಯನ್ನು ಸ್ಥಳಾಂತರ ಮಾಡಬೇಕು,ಕಲ್ಯಾಣ ಕರ್ನಾಟಕದಲ್ಲಿ ಪ್ರಾಧಿಕಾರ ರಚನೆ ಮಾಡಿದ ಹಾಗೆ ಕಿತ್ತೂರು ಕರ್ನಾಟಕ ಪ್ರಾಧಿಕಾರ ರಚನೆ ಮಾಡಬೇಕು, ಉತ್ತರ ಕರ್ನಾಟಕ ಭಾಗದ ಜನಪ್ರತಿನಿಧಿಗಳಿಗೆ ಸಮಾನ ರಾಜಕೀಯ ಪ್ರಾತಿನಿಧ್ಯ ಸಿಗಬೇಕು. ಈ ಭಾಗದ ಜನರ ಸಮಸ್ಯೆಗಳ ಬಗ್ಗೆ ಸರಕಾರ ಗಂಭೀರ ಚಿಂತನೆ ನಡೆಸಿ ಸದನದಲ್ಲಿ ಚರ್ಚೆ ನಡೆಸಬೇಕೆಂಬ ಬೇಡಿಗಳನ್ನು ಮುಂದಿಸಿದ್ದಾರೆ.

ಪ್ರತಿಭಟನೆಯಲ್ಲಿ ಹುಕ್ಕೇರಿ ಹಿರೇಮಠ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ, ನಾಗನೂರು ರುದ್ರಾಕ್ಷಿ ಮಠದ ಡಾ. ಅಲ್ಲಮಪ್ರಭು ಸ್ವಾಮೀಜಿ, ಸಿದ್ದನಕೊಳ್ಳದ ಗಂಗಾದರ ಸ್ವಾಮೀಜಿ, ಕಾರಂಜಿಮಠದ ಶಿವಯೋಗೇಶ್ವರ, ನಿಡಸೊಸಿ ದುರದುಂಡೇಶ್ವರ ಮಠದ ಶಿವಲಿಂಗೇಶ್ವರ ಸ್ವಾಮೀಜಿ, ಸಾಮಾಜಿಕ ಕಾರ್ಯಕರ್ತ ಭೀಮಪ್ಪ ಗಡಾದ, ಉತ್ತರ ಕರ್ನಾಟಕ ಹೋರಾಟ ಸಮಿತಿಯ ರಾಜ್ಯ ಪ್ರಧಾನ ಕಾರ್ಯದರ್ಶಿ ನಾಗೇಶ ಗೋಲಶೆಟ್ಟಿ, ಅನ್ನಪೂರ್ಣ ನಿರ್ವಾಣಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ದುರಸ್ಥಿ ಕಾರ್ಯ ಕೈಗೊಳ್ಳುವಂತೆ ಆಗ್ರಹಿಸಿ ಪ್ರತಿಭಟನೆ



ಬೆಳಗಾವಿ: ಹಾಳಾಗಿರುವ ಒಳ ಚರಂಡಿ ವ್ಯವಸ್ಥೆಗೆ ತುರ್ತಾಗಿ ದುರಸ್ಥಿ ಕಾರ್ಯವನ್ನು ಕೈಗೊಳ್ಳಬೇಕೆಂದು ಒತ್ತಾಯಿಸಿ ಬಸವನ ಕುಡಚಿ ಕರ್ನಾಟಕ ಗೃಹ ಮಂಡಳಿ ಬಡಾವಣೆಯ ನಿವಾಸಿಗಳ ಸಂಘದ ಸದಸ್ಯರು ಸುವರ್ಣಸೌಧ ಸಮೀಪದ ಸುವರ್ಣ ಗಾರ್ಡನ್ ಬಳಿ ಮಂಗಳವಾರ ಪ್ರತಿಭಟನೆ ನಡೆಸಿದರು.

ಬಸವನ ಕುಡಚಿ ಕರ್ನಾಟಕ ಗೃಹ ಮಂಡಳಿ ಬಡಾವಣೆಯ ಒಳ ಚರಂಡಿಗಳನ್ನು ದುರಸ್ತಿ ಮಾಡಬೇಕು ಬಡಾವಣೆಯಲ್ಲಿ ಒಳ ಚರಂಡಿ ವ್ಯವಸ್ಥೆಯನ್ನು 2008 ರಲ್ಲಿ ನಿರ್ಮಾಣ ಮಾಡಲಾಗಿದೆ. ಈಗ ಅವುಗಳು ಹಾಳಾಗಿದ್ದು ಎಲ್ಲಾ ಕಡೆಗೂ ದುರ್ವಾಸನೆ ಬರುತ್ತಿದ್ದು ಜನರು ರೋಗಗಳಿಂದ ನರಳುವಂತಾಗಿದೆ ಅದಕ್ಕಾಗಿ ತುರ್ತಾಗಿ ದುರಸ್ಥಿ ಕಾರ್ಯವನ್ನು ಕೈಗೊಳ್ಳಬೇಕಾಗಿದೆ ಎಂದು ಮನವಿಯಲ್ಲಿ ಒತ್ತಾಯಿಸಿದ್ದಾರೆ.

ಬೆಳಗಾವಿ ನಗರದಲ್ಲಿ ಸ್ಮಾರ್ಟ್ ಸಿಟಿ ಕಾರ್ಯ ಪ್ರಗತಿಯಲ್ಲಿದೆ. ಸದರಿ ಯೋಜನೆಯಡಿಯಲ್ಲಿ ಬಡಾವಣೆಯ ಗಾರ್ಡ್‌ಗಳನ್ನು ಅಭಿವೃದ್ಧಿಗೊಳಿಸಿ ಸೌಂದರೀಕರಣಗೊಳಿಸಬೇಕಾಗಿದೆ ಬಡಾವಣೆಯಲ್ಲಿ ಸದ್ಯ 500 ಕ್ಕೂ ಹೆಚ್ಚು ಕುಟುಂಬಗಳು ವಾಸಿಸುತ್ತಿವೆ ವಯೋವೃದ್ಧರು, ಚಿಕ್ಕ ಮಕ್ಕಳು ಓಡಾಡುತ್ತಾರೆ ಆದರೆ ಸಾಕಷ್ಟು ಬೀದಿ ದೀಪಗಳಿಲ್ಲದೇ ಕತ್ತಲೆ ಕವಿಯುತ್ತಿದೆ. ಹಾವು ಚೇಳು ಇತ್ಯಾದಿ ವಿಷ ಜಂತುಗಳು ಓಡಾಡುತ್ತಿರುತ್ತವೆ. ಅದಕ್ಕಾಗಿ ಭಯಪಡಬೇಕಾಗಿದೆ ಏನಾದರೂ ಅನಾಹುತಗಳಾದರೆ ಯಾರು ಜವಾಬ್ದಾರಾರು ಕೂಡಲೇ ನಮ್ಮ ಬೇಡಿಕೆ ಈಡೇರಿಸಬೇಕೆಂದು ಮನವಿ ಮಾಡಿಕೊಂಡರು.

ಪ್ರತಿಭಟನೆಯಲ್ಲಿ ಎಸ್. ಎಸ್. ಮುಷ್ಟಗಿ, ಎಸ್.,ಎಸ್. ಕುಬಸದ, ಎಸ್. ಬಿ. ಉಮಾರೆ, ಪಿ.ಜಿ. ಪಾಟೀಲ, ಎನ್. ಬಿ. ಮೊರಬದ ಸೇರಿದಂತೆ ಬಸವನ ಕುಡಚಿಯ ಗ್ರಾಮಸ್ಥರು ಭಾಗವಹಿಸಿದ್ದರು.

# ಜಾಡಮಾಲಿ ನೌಕರರಿಗೆ ಕನಿಷ್ಠ ವೇತನ ನೀಡುವಂತೆ ಒತ್ತಾಯ

ಬೆಳಗಾವಿ: ಪೊಲೀಸ್ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಜಾಡಮಾಲಿ ನೌಕರರಿಗೆ ಕನಿಷ್ಠ ವೇತನ ನೀಡುವಂತೆ ಆಗ್ರಹಿಸಿ ಸಮೀಪದ ಸುವರ್ಣ ಗಾರ್ಡನ್ ಬಳಿ ಮಂಗಳವಾರ ಜಾಡಮಾಲಿ ನೌಕರರು ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಜಾಡಮಾಲಿ ನೌಕರರಾದ ದೀಪಕ ಗುರುವ ಮಾತನಾಡಿ, ರಾಜ್ಯದ ಎಲ್ಲಾ ಪೊಲೀಸ್ ಠಾಣೆಗಳಲ್ಲಿ ಹಾಗೂ ವಿವಿಧ ಘಟಕಗಳಲ್ಲಿ ಜಾಡಮಾಲಿ ನೌಕರರೆಂದು ಸುಮಾರು 977 ನೌಕರರು 20–30 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದಾರೆ. ಈ ಜಾಡಮಾಲಿ ನೌಕರರರಿಗೆ ಪ್ರತಿ ತಿಂಗಳು 3500 ರೂ. ವೇತನ ನೀಡಲಾಗುತ್ತಿದೆ. ದಿನದಿಂದ ದಿನಕ್ಕೆ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗುತ್ತಿದ್ದು, ಈ ಕಡಿಮೇ ವೇತನದಲ್ಲಿ ನಮ್ಮ ಕುಟುಂಬಗಳ ಬಂಡಿಯನ್ನು ಮುಂದೆ ನಡೆಸುವುದು ಕಷ್ಟಕಾರವಾಗಿದೆ ಎಂದರು.

ಸರ್ಕಾರ ಅನೇಕ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲಿವಲ್ಲಿ ಕೆಲಸ ಮಾಡುತ್ತಿದ್ದು, ಈ ಜಾಡಮಾಲಿ ನೌಕರರಿಗೆ ನ್ಯಾಯ ಒದಗಿಸಲು ಮುಂದಾಗಬೇಕು. ನಮಗಾಗಿರುವ ಸಮಸ್ಯೆ ಕುರಿತು ಅನೇಕ ಬಾರಿ ಸರ್ಕಾರಕ್ಕೆ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಶೀಘ್ರವೇ ಜಾಡಮಾಲಿ ನೌಕರರಿಗೆ ಆಗುತ್ತಿರುವ ಸಮಸ್ಯೆಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.



**ಬೇಡಿಕೆಗಳು:** 2017ಕ್ಕಿಂತ ಪೂರ್ವ ಕಾರ್ಯನಿರ್ವಹಿಸುತ್ತಿದ್ದ ಜಾಡಮಾಲಿ ನೌಕರರನ್ನು ಮರು ನೇಮಕಗೊಳಿಸಿ ಕನಿಷ್ಠ ವೇತನ ಜಾರಿಗೊಳಿಸಿ ನಮಗೆ ಸರ್ಕಾರದಿಂದ ನೇರ ವೇನತ ಪಾವತಿಸಬೇಕು, ನಾವು ನೀಡುವ ಪ್ರಸ್ತಾವಣೆಯನ್ನು ಸರ್ಕಾರ ಮಟ್ಟದಲ್ಲಿ ಅನುಮೋದಿಸಿ/ಸಹಮತ ನೀಡಿ ಅದೇಶ ಹೊರಡಿಸಬೇಕು ಅಲ್ಲದೇ ರಾಜ್ಯದಲ್ಲಿ ಸುಮಾರು 977 ನೌಕರರು 20–30 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದು, ಎಲ್ಲರಿಗೂ ಕನಿಷ್ಠ ವೇತನ ನೀಡಬೇಕು, ಸರ್ಕಾರದ ಆದೇಶದಿಂದ ಪೊಲೀಸ್ ಇ ಅಲೇಕಗೆ ವಿನಾಯಿತಿ ನೀಡಿ, ಸೇವಾ ಗುತ್ತಿಗೆ ಪಡೆಯುವ ಬದಲಿಗೆ ಈ ಹಿಂದೆ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸತಿದ್ದ 977 ಮಂದಿ ಅಂಶಕಾಲಿಕ ಜಾಡಮಾಲಿಗಳನ್ನು ಗ್ರೂಪ್ ಡಿ ಹುದ್ದೆಗೆ ನೇಮಿಸಬೇಕು ಎಂಬಿತ್ಯಾದಿ ಬೇಡಿಕೆಗಳನ್ನು ಮುಂದಿರಿಸಿದ್ದಾರೆ.

# ನಿನಾಸಂ ತಂಡದವರಿಂದ ಎರಡು ನಾಟಕ

ಬೆಳಗಾವಿ: ನಗರದ ಚೆನ್ನಮ್ಮ ವೃತ್ತದ ಬಳಿಯಿರುವ ಕನ್ನಡ ಸಭಾಭವನದಲ್ಲಿ ಇಂದು ದಿ. 5 ಮಂಗಳವಾರ ಮುಂಜಾನೆ 10–30 ಕ್ಕೆ ರಂಗಸಂಪದದವರು ದಿ. 9 ಶನಿವಾರ ಮತ್ತು ದಿ. 10 ರವಿವಾರದಂದು ಹಮ್ಮಿಕೊಂಡಿರುವ ನಿನಾಸಂ ತಂಡದವರಿಂದ 'ನಿನಾಸಂ ತಿರುಗಾಟ' ಎರಡು ನಾಟಕಗಳ ಪ್ರದರ್ಶನ ಕುರಿತಂತೆ ಪತ್ರಿಕಾ ಗೋಷ್ಠಿಯನ್ನು ಕರೆದಿದ್ದರು. ರಂಗಸಂಪದದ ಅಧ್ಯಕ್ಷ ಡಾ. ಅರವಿಂದ ಕುಲಕರ್ಣಿಯವರು ಮಾತನಾಡುತ್ತ ಎಲ್ಲ ವಿವರಗಳನ್ನು ನೀಡಿದರು. ಬೆಳಗಾವಿಯ ರಂಗಸಂಪದ ತಂಡವು 1978ರಲ್ಲಿ ಪ್ರಾರಂಭವಾಯಿತು. ಸತತವಾಗಿ 45 ವರ್ಷಗಳಿಂದ ಈ ಸಂಸ್ಥೆಯು ರಂಗಭೂಮಿ ಚಟುವಟಿಗಳಲ್ಲಿ ತನ್ನನ್ನು ತಾನು ತೊಡಗಿಸಿಕೊಂಡಿದೆ. ನುರಿತ ಕಲಾವಿದರು, ನಿರ್ದೇಶಕರನ್ನು ಹೊಂದಿರುವ ರಂಗಸಂಪದ ಬೇರೆ ಬೇರೆ ನಾಟಕಗಳ ಪ್ರದರ್ಶನವನ್ನು



ನೀಡುವುದಲ್ಲದೇ ಕರ್ನಾಟಕದ ಬೇರೆ ಬೇರೆ ಊರುಗಳಿಂದ ನಾಟಕ ತಂಡಗಳನ್ನು ಆಹ್ವಾನಿಸಿ ವೇದಿಕೆಯನ್ನೊದಗಿಸಿ ಕೊಡುವದರ ಮೂಲಕ ರಂಗಭೂಮಿಯನ್ನು ಪ್ರೋತ್ಸಾಹಿಸುತ್ತ ಬಂದಿದೆ. ರಂಗಾಯಣ–ಮೈಸೂರು, ರಂಗಾಯಣ ಧಾರವಾಡ, ನಿನಾಸಂ, ರಂಗಶಂಕರ ಬೆಂಗಳೂರು ಹೀಗೆ ಮುಂತಾದ ಕಡೆಗಳಿಂದ ತಂಡಗಳನ್ನು ಆಹ್ವಾನಿಸಿ ಪ್ರತಿವರ್ಷವೂ ಸುಮಾರು 10 ರಿಂದ 12 ನಾಟಕಗಳ ಪ್ರದರ್ಶನವನ್ನು ರಂಗಸಂಪದ ನೀಡುತ್ತ ಬಂದಿದೆ. ಕೆ. ವಿ. ಸುಬ್ಬಣ್ಣನವರು ಪ್ರಾರಂಭಿಸಿರುವ ಹೆಗ್ಗೋಡಿನ ನಿನಾಸಂ, ರಂಗಭೂಮಿ ಕುರಿತು ಕಲಿಯುವವರಿಗೊಂದು ವಿಶ್ವವಿದ್ಯಾಲಯವೇ ಆಗಿದೆ. ಇಲ್ಲಿ ಕಲಿತು ಹೊರಬಂದ ಕಲಾವಿದರು. ಚಲನಚಿತ್ರ, ನಾಟಕಗಳಲ್ಲಿ ತಮ್ಮ ಅತ್ಯುತ್ತಮ ಅಭಿನಯದಿಂದ ಹೆಸರು ಮಾಡಿದವರಾಗಿದ್ದಾರೆ ಅವರಲ್ಲಿ ಅಚ್ಯುತಕುಮಾರ, ನಿನಾಸಂ ಸತೀಶ, ದರ್ಶನ ತೂಗದೀಪ ಮುಂತಾದವರು ಪ್ರಮುಖರಾಗಿದ್ದಾರೆ. ಪ್ರತಿವರ್ಷ ನಿನಾಸಂ ನಾಟಕಗಳನ್ನು ರಚಿಸಿ 'ನಿನಾಸಂ ತಿರುಗಾಟ' ಎಂಬ ಹೆಸರಿನಲ್ಲಿ ಕರ್ನಾಟಕದ ಬೇರೆ ಬೇರೆ ಊರುಗಳಲ್ಲಿ ನಾಟಕಗಳ ಪ್ರದರ್ಶನವನ್ನು ನೀಡುತ್ತಾರೆ. ಬೆಳಗಾವಿಯಲ್ಲಿ ರಂಗಸಂಪದವು ನಿನಾಸಂ ನಾಟಕಗಳನ್ನು ಆಹ್ವಾನಿಸಿ ಬೆಳಗಾವಿಯ ರಂಗಾಸಕ್ತರಿಗೆ ತೋರಿಸುತ್ತಿತ್ತು. ನಾಲ್ಕೈದು ವರ್ಷ ಕಾರಣಾಂತರದಿಂದ ಈ ಕಾರ್ಯ ಸ್ಥಗಿತಗೊಂಡಿತ್ತು. ಈ ವರ್ಷ ಮತ್ತೆ ರಂಗಸಂಪದ ನಿನಾಸಂ ನಾಟಕ ತಂಡವನ್ನು ಆಹ್ವಾನಿಸಿ ಪ್ರದರ್ಶನ ಮಾಡುತ್ತಿದೆ.

ಈ ನಿಟ್ಟಿನಲ್ಲಿ ನಗರದ ಕೋನವಾಳ ಬೀದಿಯಲ್ಲಿರುವ ಲೋಕಮಾನ್ಯ ರಂಗಮಂದಿರದಲ್ಲಿ ಎರಡು ನಾಟಕಗಳು ಪ್ರದರ್ಶನ ಗೊಳ್ಳಲಿದ್ದು ದಿ. 9 ಶನಿವಾರದಂದು ಸಾಯಂಕಾಲ 6–30 ಕ್ಕೆ ಕೆ. ಜಿ. ಕೃಷ್ಣಮೂರ್ತಿ ಯವರು ನಿರ್ದೇಶಿಸಿರುವ, ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಡಾ. ಚಂದ್ರಶೇಖರ ಕಂಬಾರ ಇವರು ರಚಿಸಿರುವ 'ಹುಲಿಯ ನೆರಳು' ನಾಟಕ ಹಾಗೂ ದಿ. 10 ರವಿವಾರದಂದು ಸಾಯಂಕಾಲ 6–30 ಕ್ಕೆ ಇಂಗ್ಲೀಷ ಮೂಲದ ನಟರಾಜ ಹೊನ್ನವಳ್ಳಿ ಕನ್ನಡಕ್ಕೆ ಅನುವಾದಿಸಿದ್ದು ಶ್ರೀಮತಿ ಶ್ವೇತಾರಾಣಿ ಹೆಚ್. ಕೆ. ನಿರ್ದೇಶಿಸಿರುವ 'ಆ ಲಯ ಈ ಲಯ' ನಾಟಕದ ಪ್ರದರ್ಶನವಿದೆ.

ಈ ನಾಟಕೋತ್ಸವವನ್ನು ಹಿರಿಯ ನ್ಯಾಯವಾದಿಗಳಾದ ಎಸ್. ಎಂ. ಕುಲಕರ್ಣಿಯವರು ಮತ್ತು ರಂಗಸಂಪದದ ಪೋಷಕರು ಉದ್ಘಾಟಿಸಲಿದ್ದಾರೆ. ಈ ನಾಟಕೋತ್ಸವಕ್ಕೆ ಧನ ಸಹಾಯವನ್ನು ಮಾಡಿರುವ ಮಹನೀಯರನ್ನು ಪುಷ್ಪಗುಚ್ಛ ಕೊಟ್ಟು ಗೌರವಿಸಲಾಗುವುದು. ರಂಗಾಸಕ್ತರು, ಪ್ರೇಕ್ಷಕರು ಈ ನಾಟಕೋತ್ಸವಕ್ಕೆ ಬಂದು ರಂಗಚಟುವಟಿಕೆ ಗಳನ್ನು ಪ್ರೋತ್ಸಾಹಿಸಬೇಕು ಅದರಂತೆ ಮಾಧ್ಯಮಮಿತ್ರರು ಹೆಚ್ಚಿನ ಪ್ರಚಾರ ನೀಡಿ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಕೇಳಿಕೊಂಡರು.

ಸಂಪುಟ: 4 ಸಂಚಿಕೆ: 257 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089